ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 145, ಪುಟಗಳು: 8, ಸೋಮವಾರ, 4 ಮಾರ್ಚ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆನೇಕಾ

## ಪಂಚಾಂಗ

(ಸೋಮವಾರ 4, ಮಾರ್ಚ್ -2024)

- ಶ್ರೀ ಶೋಭಕೃತ್ ನಾಮ ಸಂವತ್ಸರ
- ಜೇಷ್ಠ ನಕ್ಷತ್ರ,
- ಉತ್ತರಾಯಣ, ಶಿಶಿರ ಋತು
- ಮಾಘ ಮಾಸ, ಕೃಷ್ಣ ಪಕ್ಷ,
- ಸೋಮವಾರ, ಅಷ್ಟಮಿ ತಿಥಿ
- ರಾಹುಕಾಲ: 8:07 ರಿಂದ 9:36
- ಗುಳಿಕಕಾಲ : 2:05 ರಿಂದ 3:34
- ಯಮಗಂಡಕಾಲ : 11:06 ರಿಂದ 12:35

## ಸಂಕ್ಷಿಪ್ತ ಸುದ್ದಿ

### ಇಂದು ಕೊಬ್ಬರಿ ಖರೀದಿ ನೋಂದಣಿ ರಾತ್ರಿಯಿಂದ ಕ್ಯೂ ನಿಂತ ರೈತರು!



**ತುಮಕೂರು:** ಕೊಬ್ಬರಿ ಖರೀದಿ ನೋಂದಣಿಗಾಗಿ ರಾತ್ರೋ ರಾತ್ರಿ ರೈತರು ಕ್ಯೂ ನಿಂತಿರುವ ಘಟನೆ ತುಮಕೂರು ಜಿಲ್ಲೆಯಲ್ಲಿ ನಡೆದಿದೆ. ತುಮಕೂರು ಜಿಲ್ಲೆಯ ತಿಪಟೂರು ಪಟ್ಟಣದ ಕೊಬ್ಬರಿ ಮಾರುಕಟ್ಟೆ ಕೇಂದ್ರದ ಬಳಿ ಈ ಘಟನೆ ಕಂಡು ಬಂದಿದ್ದು, ಇಂದು ಕೊಬ್ಬರಿ ಖರೀದಿ ನೋಂದಣಿಗಾಗಿ ನಿನ್ನೆ ರಾತ್ರಿ 8 ಗಂಟೆಯಿಂದಲೇ ಸರದಿ ಸಾಲಿನಲ್ಲಿ ರೈತರು ನಿಂತಿರುವುದು ಕಂಡು ಬಂದಿದೆ. ರೈತರು, ಮಹಿಳೆಯರು ಚಾಪೆ ದಿಂಬು ಸಮೇತ ಬಂದು ಕ್ಯೂ ನಿಂತಿದ್ದು, ಸರತಿ ಸಾಲಿನಲ್ಲಿ ನಿಂತು ಇಂದು ಬೆಳಗ್ಗಿನ ತನಕ ಅದೇ ಜಾಗದಲ್ಲಿ ನಿದ್ದೆ ಮಾಡಿದ್ದಾರೆ. ಪುಟ 2

### ಎದುರಾದ ಜಲಕ್ಷಾಮ ಲಕ್ಷಾಂತರ ಮೀನುಗಳ ಸಾವು



**ಯಾದಗಿರಿ:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಈಗಾಗಲೇ ನೀರಿನ ಅಭಾವ ಉಂಟಾಗಿದ್ದು, ಈ ಸಮಸ್ಯೆ ಇದೀಗ ರಾಜ್ಯದ ಹಳ್ಳಿಗಳಿಗೂ ವ್ಯಾಪಿಸಿದೆ.

ಯಾದಗಿರಿಯಲ್ಲಿ ಬೇಸಿಗೆ ಆರಂಭಕ್ಕೂ ಮುನ್ನವೇ ಜಲಕ್ಷಾಮ ಎದುರಾಗಿದ್ದು, ಭೀಮಾನದಿಯ ಒಡಲು ಬತ್ತಿ ಬರಿದಾಗಿ ನದಿಯಲ್ಲಿರುವ ಮೀನುಗಳ ಸಾಮೂಹಿಕ ಸಾವು ನಡೆಯುತ್ತಿದೆ. ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಸೂಗೂರು ಬಳಿಯಿರುವ ಭೀಮಾ ನದಿಯಲ್ಲಿ ನೀರಿನ ಕೊರತೆಯಿಂದ ಲಕ್ಷಾಂತರ ಮೀನುಗಳ ಮಾರಣ ಹೋಮ ನಡೆಯುತ್ತಿದ್ದು, ಮೀನುಗಳು ಸತ್ತು ಬಿದ್ದಿದ್ದರಿಂದ ನದಿ ಸುತ್ತಲಿನ ಪ್ರದೇಶ ಗಬ್ಬೆದ್ದು ನಾರುತ್ತಿದೆ.

ಭೀಮಾನದಿ ಬತ್ತಿ ಹೋಗಿರುವುದರಿಂದ ನೀರಿಗಾಗಿ ಪಕ್ಷಿಗಳೂ ಸಹ ಸಂಕಷ್ಟವನ್ನು ಎದುರಿಸುತ್ತಿದ್ದು, ಜೀವಜಲಕ್ಕಾಗಿ ಜಲಚರ ಹಾಗೂ ಪಕ್ಷಿಗಳ ಮೂಕವೇದನೆ ಅನುಭವಿಸುತ್ತಿದೆ. ಪುಟ 2

# ಮಾರ್ಚ್ 10 ರೊಳಗೆ ಕಾಂಗ್ರೆಸ್ ಮೊದಲ ಪಟ್ಟಿ?

**ಬೆಂಗಳೂರು:** ಮಾರ್ಚ್ 10ರ ಒಳಗೆ ಕಾಂಗ್ರೆಸ್ ಅಭ್ಯರ್ಥಿಗಳ ಮೊದಲ ಪಟ್ಟಿ ರಿಲೀಸ್ ಆಗೋ ಸಾಧ್ಯತೆ ಇದೆ. ಮುಂದಿನ ವಾರವೇ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಇಬ್ಬರೂ ಹೈಕಮಾಂಡ್‌ರನ್ನ ಭೇಟಿಯಾಗಲಿದ್ದು, ಕೆಪಿಸಿಸಿಯಿಂದ ಫೈನಲ್ ಮಾಡಿರುವ ಪಟ್ಟಿ ಸಲ್ಲಿಕೆ ಮಾಡಲಿದ್ದಾರೆ. ಗೊಂದಲವಿಲ್ಲದ ಕ್ಷೇತ್ರಗಳ ಅಭ್ಯರ್ಥಿಗಳ ಹೆಸರು ಘೋಷಣೆಗೆ ಕೆಲ ಸಚಿವರು ಒತ್ತಡ ಹೇರಿದ್ದಾರೆ.

ಸಿಎಂ, ಡಿಸಿಎಂ ಪ್ರತ್ಯೇಕ ಸರ್ವೆ ರಿಪೋರ್ಟ್ ಆಧಾರದ ಮೇಲೆ ಸಿದ್ದಪಡಿಸಿರುವ ಪ್ರತ್ಯೇಕ ಅಭ್ಯರ್ಥಿಗಳ ಪಟ್ಟಿಯನ್ನು ಸಲ್ಲಿಸಲು ಮುಂದಾಗಿದ್ದಾರೆ. ಮೊದಲ ಪಟ್ಟಿಯಲ್ಲೇ ಮೈಸೂರು, ಮಂಡ್ಯ, ತುಮಕೂರು, ಬೆಂಗಳೂರು ಗ್ರಾಮಾಂತರ, ಸೆಂಟ್ರಲ್, ಬೆಂಗಳೂರು ಉತ್ತರ, ಉಡುಪಿ- ಚಿಕ್ಕಮಗಳೂರು, ಚಿತ್ರದುರ್ಗ, ಕೋಲಾರ, ಚಿಕ್ಕಬಳ್ಳಾಪುರ ಕ್ಷೇತ್ರಗಳ ಅಭ್ಯರ್ಥಿಗಳ ಹೆಸರು ಪ್ರಕಟ ಸಾಧ್ಯತೆ ಇದೆ. ಗೊಂದಲವಿಲ್ಲದ ಕ್ಷೇತ್ರಗಳ ಅಭ್ಯರ್ಥಿಗಳ ಹೆಸರು ಘೋಷಣೆಗೆ ಕೆಲ ಸಚಿವರು ಒತ್ತಡ ಹೇರಿದ್ದಾರೆ ಎನ್ನಲಾಗಿದೆ. ಇತ್ತ ಸಿಎಂ, ಡಿಸಿಎಂ ಸರ್ವೆ ಅಲ್ಲದೇ ಐಸಿಸಿಯಿಂದಲೂ ಪ್ರತ್ಯೇಕ



ಸರ್ವೆ ನಡೆಸಲಾಗಿದ್ದು, ಸಿಎಂ, ಡಿಸಿಎಂ ಪಟ್ಟಿಯ ಜೊತೆ ಸರ್ವೆ ರಿಪೋರ್ಟ್ ಆಧರಿಸಿ ಹೈಕಮಾಂಡ್ ಅಭ್ಯರ್ಥಿ ಫೈನಲ್ ಮಾಡಲಿದೆಯಂತೆ. ಪುಟ 2

### ಭಾರತ ಯಾತ್ರೆಗೆ ಮೋದಿ ಸಿದ್ಧತೆ

# 10 ದಿನಗಳಲ್ಲಿ 12 ರಾಜ್ಯಗಳ ಪ್ರವಾಸ

**ನವದೆಹಲಿ:** ಲೋಕಸಭೆ ಚುನಾವಣೆ ದಿನಾಂಕ ಘೋಷಣೆಗೂ ಮುನ್ನವೇ ಪ್ರಧಾನಿ ನರೇಂದ್ರ ಮೋದಿ ಭಾರತ ಪ್ರವಾಸಕ್ಕೆ ಸಿದ್ಧತೆ ನಡೆಸಿದ್ದಾರೆ. ಮುಂದಿನ 10 ದಿನಗಳಲ್ಲಿ 12 ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ 29 ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಶನಿವಾರ ಬಿಜೆಪಿ 195 ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿತ್ತು. ಪ್ರಧಾನಿ ಮೋದಿ ತೆಲಂಗಾಣ, ತಮಿಳುನಾಡು, ಒಡಿಶಾ, ಪಶ್ಚಿಮ ಬಂಗಾಳ, ಬಿಹಾರ, ಜಮ್ಮು ಮತ್ತು ಕಾಶ್ಮೀರ, ಅಸ್ಸಾಂ, ಅರುಣಾಚಲಪ್ರದೇಶ, ಉತ್ತರ ಪ್ರದೇಶ, ಗುಜರಾತ್, ರಾಜಸ್ಥಾನ ಮತ್ತು ದೆಹಲಿಗೆ ಭೇಟಿ ನೀಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದಾದ ಬಳಿಕ ಅವರು ತಮಿಳುನಾಡಿನ ಕಲ್ಪಾಕ್ಕಂನಲ್ಲಿರುವ ನ್ಯೂಕ್ಲಿಯರ್ ಪವರ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್‌ಗೆ ಭೇಟಿ ನೀಡಲಿದ್ದಾರೆ.



ಆದಿಲಾಬಾದ್ ಹಾಗೂ ಚೆನ್ನೈನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಾರ್ಚ್ 5 ರಂದು ತೆಲಂಗಾಣದ ಸಂಗಾರೆಡ್ಡಿಯಲ್ಲಿ ಪ್ರಧಾನಿ ಮೋದಿ ಹಲವು ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಇದಾದ ಬಳಿಕ ಒಡಿಶಾದಲ್ಲಿ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಅಧಿಕಾರಿಗಳ ಪ್ರಕಾರ, ಮೋದಿ ಪಶ್ಚಿಮ ಬಂಗಾಳಕ್ಕೆ ತೆರಳುವ ಮೊದಲು ಒಡಿಶಾದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮಾರ್ಚ್ 6ರಂದು ಅವರು ಕೋಲ್ಕತ್ತಾದಲ್ಲಿ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಬರಾಸತ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದಾದ ಬಳಿಕ ಮೋದಿ ಬಿಹಾರಕ್ಕೆ ತೆರಳಿ ಬೆಟ್ಟಿಯಾದಲ್ಲಿ ಹಲವು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕು ಸ್ಥಾಪನೆ ನೆರವೇರಿಸಲಿದ್ದಾರೆ.

ಇಟಾನಗರದಲ್ಲಿ ಹಲವು ಯೋಜನೆಗಳ ಉದ್ಘಾಟನೆ ಮಾರ್ಚ್ 7 ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರಧಾನಿ ಮೋದಿ ತೆರಳಲಿದ್ದಾರೆ, ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಾರ್ಚ್ 8 ರಂದು ದೆಹಲಿಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅಸ್ಸಾಂಗೆ ತೆರಳಲಿದ್ದಾರೆ. ಪುಟ 2

### ಅಭಿವೃದ್ಧಿ ಹೊಂದಿದ ಭಾರತ 2047 ಕುರಿತು ಸಚಿವರೊಂದಿಗೆ ಪ್ರಧಾನಿ

# ಮೋದಿ ವಿಚಾರ ಮಂಥನ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಕೇಂದ್ರ ಸಚಿವ ಸಂಪುಟ ಸಭೆ ನಡೆಯಿತು. ಮೂಲಗಳ ಪ್ರಕಾರ, ಈ ಸಭೆಯಲ್ಲಿ ಕೇಂದ್ರ ಸರ್ಕಾರವು 'ಅಭಿವೃದ್ಧಿ ಹೊಂದಿದ ಭಾರತ 2047 ಬಗ್ಗೆ ಹೆಚ್ಚು ಚರ್ಚೆ ನಡೆಸಿತು. ಇದರೊಂದಿಗೆ ಮುಂದಿನ ಐದು ವರ್ಷಗಳ ಕ್ರಿಯಾ ಯೋಜನೆ ಬಗ್ಗೆಯೂ ಚರ್ಚಿಸಲಾಯಿತು. ಮುಂಬರುವ ಲೋಕಸಭೆ ಚುನಾವಣೆಗೂ ಮುನ್ನ ನಡೆದ ಕೊನೆಯ ಸಂಪುಟ ಸಭೆ ಇದಾಗಿದೆ.

ಇದರಲ್ಲಿ ವಿವಿಧ ಸಚಿವಾಲಯಗಳು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದವು. ಮೇ 2024 ರಲ್ಲಿ ಹೊಸ ಸರ್ಕಾರ ರಚನೆಯಾಗುವಾಗ ಸಂಪುಟ ಸಭೆಯಲ್ಲಿ ಚರ್ಚಿಸಲಾದ ಕಾರ್ಯಸೂಚಿಗಳ ಕುರಿತು ಕ್ರಿಯಾ ಯೋಜನೆಯನ್ನು ಸಹ ಸಿದ್ಧಪಡಿಸಲಾಗಿದೆ ಎಂದು ಹೇಳಲಾಗುತ್ತಿದೆ. ಈ ಕ್ರಿಯಾ ಯೋಜನೆ 100 ದಿನಗಳವರೆಗೆ ಇರುತ್ತದೆ.

ನವದೆಹಲಿಯ ಚಾಣಕ್ಯಪುರಿಯಲ್ಲಿರುವ ಸುಷ್ಮಾ ಸ್ವರಾಜ್ ಭವನದಲ್ಲಿ ಪ್ರಧಾನಿ ಮೋದಿ ನೇತೃತ್ವದಲ್ಲಿ ಈ ಸಂಪುಟ ಸಭೆ ನಡೆಯಿತು. ಮುಂಬರುವ ಲೋಕಸಭೆ ಚುನಾವಣೆಯ ದೃಷ್ಟಿಯಿಂದ ಈ ಸಂಪುಟ ಸಭೆ ಅತ್ಯಂತ ಮಹತ್ವದ್ದಾಗಿತ್ತು. ಇದರಲ್ಲಿ ಅಭಿವೃದ್ಧಿ ಹೊಂದಿದ ಭಾರತಕ್ಕೆ ಸಂಬಂಧಿಸಿದ ಕ್ರಿಯಾ ಯೋಜನೆ ಜತೆಗೆ ಮುಂದಿನ 100 ದಿನಗಳ ಮಾರ್ಗಸೂಚಿ ಕುರಿತು ಚರ್ಚಿಸಲಾಯಿತು. ಇದರೊಂದಿಗೆ ಮುಂಬರುವ ಲೋಕಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಚುನಾವಣಾ ಸಿದ್ಧತೆಗೆ ಸಂಬಂಧಿಸಿದಂತೆ ಪ್ರಧಾನಿ ಮೋದಿ ಅವರು ತಮ್ಮ ಸಚಿವರು ಮತ್ತು ನಾಯಕರಿಗೆ





ಹಲವು ಪ್ರಮುಖ ಸೂಚನೆಗಳನ್ನು ನೀಡಿದರು.

**2,700 ಕ್ಕೂ ಹೆಚ್ಚು ಸಭೆಗಳನ್ನು ನಡೆಸಲಾಯಿತು:** ವಿವಿಧ ಹಂತಗಳಲ್ಲಿ 2,700ಕ್ಕೂ ಹೆಚ್ಚು ಸಭೆ, ಕಾರ್ಯಾಗಾರ, ವಿಚಾರ ಸಂಕಿರಣಗಳನ್ನು ಆಯೋಜಿಸಲಾಗಿದೆ. 20 ಲಕ್ಷಕ್ಕೂ ಹೆಚ್ಚು ಯುವಕರಿಂದ ಸಲಹೆಗಳನ್ನು ಸ್ವೀಕರಿಸಲಾಗಿದೆ. ಅಭಿವೃದ್ಧಿ ಹೊಂದಿದ ಭಾರತಕ್ಕಾಗಿ ಮಾರ್ಗಸೂಚಿಯು ಸ್ಪಷ್ಟವಾಗಿ ವ್ಯಕ್ತಪಡಿಸಿದ ರಾಷ್ಟ್ರೀಯ ದೃಷ್ಟಿ, ಆಕಾಂಕ್ಷೆಗಳು, ಗುರಿಗಳು ಮತ್ತು ಕಾರ್ಯಗಳನ್ನು ಹೊಂದಿರುವ ಸಮಗ್ರ ನೀಲನಕ್ಷೆಯಾಗಿದೆ ಎಂದು ಮೂಲಗಳು ತಿಳಿಸಿವೆ.

**ಹಲವು ಸಚಿವಾಲಯಗಳು ಅಭಿಪ್ರಾಯ:** ಲೋಕಸಭಾ ಚುನಾವಣೆಯ ತಯಾರಿಯ ನಡುವೆ ಬಿಜೆಪಿ 195 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಶನಿವಾರ (ಮಾರ್ಚ್ 2) ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ 28 ಮಹಿಳೆಯರು ಮತ್ತು 47 ಯುವ ಅಭ್ಯರ್ಥಿಗಳಿಗೆ ಟಿಕೆಟ್ ನೀಡಲಾಗಿದೆ. ಬಿಜೆಪಿ ಪಟ್ಟಿಯಲ್ಲಿ 34 ಕೇಂದ್ರ ಸಚಿವರು ಮತ್ತು ರಾಜ್ಯ ಸಚಿವರ ಹೆಸರೂ ಸೇರಿದೆ.

'ಅಭಿವೃದ್ಧಿ ಹೊಂದಿದ ಭಾರತ 2047 ಮಾರ್ಗಸೂಚಿ ಕುರಿತು ಚರ್ಚೆ 'ಅಭಿವೃದ್ಧಿ ಹೊಂದಿದ ಭಾರತ 2047' ರ ಮಾರ್ಗಸೂಚಿಯು ಆರ್ಥಿಕ ಬೆಳವಣಿಗೆ, ವ್ಯವಹಾರವನ್ನು ಸುಲಭಗೊಳಿಸುವುದು, ಮೂಲಸೌಕರ್ಯ ಮತ್ತು ಸಾಮಾಜಿಕ ಕಲ್ಯಾಣದಂತಹ ವಿವಿಧ ಅಂಶಗಳನ್ನು ಒಳಗೊಂಡಿದೆ. 2047 ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವಾಗಿ ಪರಿವರ್ತಿಸುವುದು ಈ ಮಾರ್ಗಸೂಚಿಯ ಅಂತಿಮ ಗುರಿಯಾಗಿದೆ.

### ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ

# ಗಂಭೀರತೆ ಅರಿತು ಪ್ರಕರಣ ದಾಖಲಿಸಿಕೊಂಡ ಎನ್‌ಐಎ

**ಬೆಂಗಳೂರು:** ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಆದ ಬಾಂಬ್ ಸ್ಫೋಟ ಘಟನೆ ಸಂಬಂಧ ಎನ್‌ಐಎ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಇನ್ನೆರಡು ದಿನಗಳಲ್ಲಿ ಅಧಿಕೃತವಾಗಿ ತನಿಖೆ ಕೈಗೆತ್ತಿಕೊಳ್ಳಲಿದ್ದಾರೆ. UAPA ಅಡಿ ಹೆಚ್‌ಎಎಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆದ್ರೆ ಪ್ರಕರಣದ ಗಂಭೀರತೆ ಅರಿತು ಎನ್ ಐಎ ಪ್ರಕರಣ ದಾಖಲಿಸಿಕೊಂಡಿದೆ.

ಬಾಂಬ್ ಸ್ಫೋಟ ಸಂಭವಿಸಿದ ಬೆಂಗಳೂರಿನ ರಾಮೇಶ್ವರಂ ಕೆಫೆಗೆ ಭಾನುವಾರ ಭೇಟಿ ನೀಡಿದ ಸಿಸಿಬಿ ಪೊಲೀಸರು ಸ್ಥಳ ಮಹಜರು ನಡೆಸಿದ್ರು. ಸಿಸಿಬಿ ತನಿಖಾಧಿಕಾರಿ ನವೀನ್ ಕುಲಕರ್ಣಿ ಮತ್ತು ಟೀಂ, ರಾಮೇಶ್ವರಂ ಕೆಫೆ ಮ್ಯಾನೇಜರ್, ಸಿಬ್ಬಂದಿ ಸಮ್ಮುಖದಲ್ಲಿ ಮಹಜರು ನಡೆಸಿದ್ರು. ಬಾಂಬರ್ ಎಂಟ್ರಿಯಾದ ಸ್ಥಳ, ಓಡಾಡಿದ್ದ ಸ್ಥಳದಲ್ಲಿ ಪರಿಶೀಲನೆ ಮಾಡಿದ್ರು. ಜೊತೆಗೆ ಶಂಕಿತರನ್ನ ಆಡುಗೋಡಿ ಟೆಕ್ನಿಕಲ್ ಸೆಲ್ ಗೆ ಕರೆತಂದು ವಿಚಾರಣೆ ನಡೆಸಿದ್ರು.

ಬೆಂಗಳೂರಿನ ರಾಮೇಶ್ವರಂ ಕೆಫೆಯ ಬಾಂಬ್ ಸ್ಫೋಟ ಪ್ರಕರಣದ ಆರೋಪಿ ಪತ್ತೆಗಾಗಿ ಪೊಲೀಸರು




ಹರಸಾಹಸ ಪಡ್ತಿದ್ದಾರೆ. ಟೈಮ್ ಟ್ರಾವೆಲ್ ರೀತಿ ಎರಡೂ ಕಡೆ ಹುಡುಕಾಟ ನಡೆಸ್ತಿದ್ರೂ, ಆರೋಪಿಯ ಜಾಡು ಮಾತ್ರ ಸಿಗ್ತಿಲ್ಲ. ಆರೋಪಿ ಪತ್ತೆ ಆಗದಿದ್ರೆ ಪೊಲೀಸರು ರೇಖಾಚಿತ್ರ ಬಿಡುಗಡೆಗೆ ಮುಂದಾಗಿದ್ದಾರೆ.

ರಾಮೇಶ್ವರ ಕೆಫೆಗೆ ಒಂದು ಕಿಮೀ ಇರುವ ಒಂದು ಸ್ಥಳದಲ್ಲಿ ಸಿಸಿಟಿವಿಯಲ್ಲಿ ಸೆರೆಯಾಗಿದ್ದಾನೆ. ಆದ್ರೆ, ಗ್ರಾಫೈಟ್ ಇಂಡಿಯಾ ಸರ್ಕಲ್ ನಲ್ಲಿ ರೋಡ್ ಕ್ರಾಸ್ ಮಾಡಿ ಬಂದು ಬಸ್ ಏರಿದ್ದಾನೆ. ಪುಟ 2

### ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿರುವುದು

# ವರದಿಯಲ್ಲಿ ದೃಢ




**ಬೆಂಗಳೂರು:** ವಿಧಾನಸೌಧದ ಒಳಗೆ ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿರುವುದು ವಿಧಿ ವಿಜ್ಞಾನ ಪ್ರಯೋಗಾಲಯ ಪರೀಕ್ಷೆಯಲ್ಲಿ ದೃಢವಾಗಿದೆ ಎಂದು ಬಿಜೆಪಿ ಹೇಳಿದೆ. ಈ ಕುರಿತು ಟ್ವೀಟ್ ಮಾಡಿರುವ ಬಿಜೆಪಿ ''ವಿಧಾನಸೌಧದ ಒಳಗೆ ಪಾಕಿಸ್ತಾನ ಪರ ಘೋಷಣೆ ಕೂಗಿರುವುದು ಎಫ್‌ಎಸ್‌ಎಲ್ ವರದಿಯಲ್ಲಿ ಬಹಿರಂಗವಾಗಿದೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ್ದನ್ನು ''ನಾಸೀರ್ ಸಾಬ್ ಜಿಂದಾಬಾದ್'' ಎಂದು ತಿರುಚಿ ಕನ್ನಡಿಗರಿಗೆ ಟೋಪಿ ಹಾಕಲು ಹೊರಟ ಹುನ್ನಾರ ಈಗ ಎಫ್‌ಎಸ್‌ಎಲ್ ವರದಿಯಲ್ಲಿ ಬಟಾ ಬಯಲಾಗಿದೆ'' ಎಂದು ಕಾಂಗ್ರೆಸ್ ವಿರುದ್ಧ ಕಿಡಿಕಾರಿದೆ. ಪುಟ 2

### ಶಿವರಾತ್ರಿ ಮುನ್ನ ನಡೆದ ಆಚರಣೆ ವೇಳೆ ಅಗ್ನಿ ಅವಘಡ

# 6 ಮಂದಿ ಸಾವು

**ಮಾರಿಷಸ್:** ಮಾರಿಷಸ್‌ನಲ್ಲಿ ಶಿವರಾತ್ರಿಗೂ ಮುನ್ನ ಹಮ್ಮಿಕೊಳ್ಳಲಾಗಿದ್ದ ಪೂಜೆಯ ವೇಳೆ ಅಗ್ನಿ ಅವಘಡ ಸಂಭವಿಸಿದ್ದು, 6 ಮಂದಿ ಸಾವನ್ನಪ್ಪಿದ್ದಾರೆ. ದೇವರ ವಿಗ್ರಹವು ವಿದ್ಯುತ್ ತಂತಿಗೆ ಸ್ಪರ್ಶಿಸಿದಾಗ ಬೆಂಕಿ ಕಾಣಿಸಿಕೊಂಡಿತ್ತು. ಅಪಘಾತದಲ್ಲಿ ಆರು ಮಂದಿ ಸಾವನ್ನಪ್ಪಿದ್ದು, ಏಳು ಮಂದಿ ಗಾಯಗೊಂಡಿದ್ದು, ಇವರಲ್ಲಿ ಒಬ್ಬರ ಸ್ಥಿತಿ ಚಿಂತಾಜನಕವಾಗಿದೆ. ಪೂರ್ವ ಆಫ್ರಿಕಾದ ಮಾರಿಷಸ್‌ನ ಹಿಂದೂ ಸಮುದಾಯವು ಪವಿತ್ರವೆಂದು ಪರಿಗಣಿಸುವ ಮಾರ್ಚ್ 8 ರಂದು ಶಿವರಾತ್ರಿ ಹಬ್ಬಕ್ಕೆ ಮುಂಚಿತವಾಗಿ ಯಾತ್ರಿಕರು ಗ್ರ್ಯಾಂಡ್ ಬೇಸಿನ್ ಸರೋವರಕ್ಕೆ ಕಾಲ್ನಡಿಗೆಯಲ್ಲಿ ಪ್ರಯಾಣಿಸುತ್ತಿದ್ದರು. ಪುಟ 2



### ಸಿದ್ಧಾರೂಢ ಮಠದಲ್ಲಿ ಟ್ರಸ್ಟ್- ಭಕ್ತರ ನಡುವೆ ಗಲಾಟೆ

# ಎಚ್ಚರಿಕೆ ಕೊಟ್ಟ ಭಕ್ತರು



**ಹುಬ್ಬಳ್ಳಿ:** ಹುಬ್ಬಳ್ಳಿಯ ಸದ್ಗುರು ಸಿದ್ಧಾರೂಢ ಸ್ವಾಮಿಗಳ ಮಠದಲ್ಲಿ ಮಠದ ಟ್ರಸ್ಟ್ ಕಮಿಟಿ ಮತ್ತು ಭಕ್ತರ ನಡುವೆ ತೀವ್ರ ವಾಗ್ವಾದ ನಡೆದಿದೆ. ಶಿವರಾತ್ರಿ ಉತ್ಸವ ಆಚರಣೆ ಹಾಗೂ ಲೆಕ್ಕಪತ್ರ ಮಂಡನೆ ವಿಚಾರಕ್ಕೆ ಸಭೆ ಕರೆಯಲಾಗಿತ್ತು. ಈ ವೇಳೆ ಭಕ್ತರು ಖರ್ಚು ವೆಚ್ಚದ ಬಗ್ಗೆ ಮಾಹಿತಿ ಕೇಳಿದ್ದು ಮಠದ ಟ್ರಸ್ಟ್ ಮಾಹಿತಿ ನೀಡಲು ನಿರಾಕರಿಸಿದೆ. ಈ ವೇಳೆ ಭಕ್ತರು ಹಾಗೂ ಟ್ರಸ್ಟ್ ಕಮಿಟಿ ನಡುವೆ ಗಲಾಟೆ, ವಾಗ್ವಾದ ನಡೆದಿದೆ.

ಸಿದ್ಧಾರೂಢ ಸ್ವಾಮಿಗಳ ಮಠದ ಟ್ರಸ್ಟ್ ಕಮಿಟಿ ಕರೆದಿದ್ದ ಸಭೆಯಲ್ಲಿ ಭಾಗಿಯಾದ ಭಕ್ತರು, ಮಠದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕೆಲಸಗಳ ಖರ್ಚುವೆಚ್ಚದ ಬಗ್ಗೆ ಮಾಹಿತಿ ಕೇಳಿದರು. ಕಳಪೆ ಕಾಮಗಾರಿ, ಹಣ ದುರ್ಬಳಕೆ, ಅನವಶ್ಯಕ ಕರ್ಚಿನ ಕುರಿತು ಭಕ್ತರು ಆಕ್ಷೇಪ ಹೊರ ಹಾಕಿದರು. ಆದರೆ ಸಿದ್ಧಾರೂಢ ಮಠದ ಟ್ರಸ್ಟ್ ಕಮಿಟಿ ಭಕ್ತರಿಗೆ ಉತ್ತರ ನೀಡಲು ನಿರಾಕರಿಸಿತು. ಟ್ರಸ್ಟ್ ಕಮಿಟಿ ಅಧ್ಯಕ್ಷರು ಮತ್ತು ಧರ್ಮದರ್ಶಿಗಳ ನಡೆಗೆ ಭಕ್ತರು ಆಕ್ರೋಶ ಹೊರ ಹಾಕಿದ್ದು ಸಭೆಯಲ್ಲಿ ಪರಸ್ಪರ ವಾಗ್ವಾದ, ಗದ್ದಲ ನಡೆಯಿತು. ಪುಟ 2

### ಪಾಕಿಸ್ತಾನದಲ್ಲಿ ಭಾರಿ ಮಳೆ

# 37 ಮಂದಿ ಸಾವು

**ಲಾಹೋರ್:** ಪಾಕಿಸ್ತಾನದಲ್ಲಿ ಭಾರೀ ಮಳೆಯಿಂದಾಗಿ, ಅನೇಕ ಮನೆಗಳು ಕುಸಿದು ಕನಿಷ್ಠ 37 ಮಂದಿ ಸಾವನ್ನಪ್ಪಿದ್ದಾರೆ. ಕಳೆದ 48 ಗಂಟೆಗಳಲ್ಲಿ ದೇಶಾದ್ಯಂತ ಭಾರೀ ಮಳೆಯಿಂದಾಗಿ ಕನಿಷ್ಠ 37 ಜನರು ಸಾವನ್ನಪ್ಪಿದ್ದಾರೆ ಮತ್ತು 50 ಜನರು ಗಾಯಗೊಂಡಿದ್ದಾರೆ. ಮಳೆಗೆ ಹಲವು ಮನೆಗಳು ಕುಸಿದಿದ್ದು, ಭೂಕುಸಿತದಿಂದ ರಸ್ತೆಗಳು ಬಂದ್ ಆಗಿವೆ. ಪಾಕಿಸ್ತಾನದಲ್ಲಿ ಭಾರೀ ಹಿಮಪಾತವಾದ ಸಮಯದಲ್ಲೇ ಇದು ಸಂಭವಿಸಿದೆ. ಪುಟ 2



# ಜಮೀನು ವಿವಾದ: ತಂದೆಗೆ ಹೊಡೆದು, ತಾಯಿಯ ಕೂದಲೆಳೆದ ಮಗ

**ಆಂಧ್ರ:** ಜಮೀನು ವಿವಾದಕ್ಕೆ ಸಂಬಂಧಿಸಿದಂತೆ ವ್ಯಕ್ತಿಯೊಬ್ಬ ತನ್ನ ಪೋಷಕರಿಗೆ ಥಳಿಸಿರುವ ಘಟನೆ ಆಂಧ್ರಪ್ರದೇಶದಲ್ಲಿ ನಡೆದಿದೆ. ತಾಯಿಯ ಕೂದಲು ಎಳೆದು ಮಗ ಮೃತನಂತೆ ವರ್ತಿಸಿದ ಅಮಾನವೀಯ ಘಟನೆ ವರದಿಯಾಗಿದೆ. ತಾಯಿಯನ್ನು ತಳ್ಳಿ ನೆಲದ ಮೇಲೆ ಬೀಳಿಸಿ, ಬಳಿಕ ತಂದೆಗೂ ಕಪಾಳಕ್ಕೆ ಹೊಡೆದಿದ್ದಾನೆ. ಆ ಸಂದರ್ಭದಲ್ಲಿ ಚಿಕ್ಕ ಹುಡುಗಿಯೂ ಅಲ್ಲಿದ್ದಳು, ಯಾರೂ ಮುಂದೆ ಬಂದು ಘಟನೆಯನ್ನು ತಡೆಯಲು ಪ್ರಯತ್ನ ನಡೆಸಲಿಲ್ಲ.

ಆರೋಪಿಯನ್ನು ಶ್ರೀನಿವಾಸುಲು ರೆಡ್ಡಿ ಎಂದು ಗುರುತಿಸಲಾಗಿದೆ. ಪೊಲೀಸರು ಆತನ ವಿರುದ್ಧ ಪ್ರಕರಣ ದಾಖಲಿಸಿಕೊಂಡು ವಶಕ್ಕೆ ಪಡೆದಿದ್ದಾರೆ. ವಾಸ್ತವವಾಗಿ, ಆರೋಪಿಯು ತನ್ನ ಹೆತ್ತವರು ತನ್ನ ಅಣ್ಣನಿಗೆ ಭೂಮಿಯನ್ನು ನೀಡಿದ್ದರಿಂದ ಈತ ಕೋಪಗೊಂಡಿದ್ದ. ನಿರ್ಧಾರವನ್ನು ಬದಲಾಯಿಸುವಂತೆ ಅವನು ಪದೇ ಪದೇ ಒತ್ತಾಯಿಸುತ್ತಿದ್ದ.

ಈ ಕುರಿತು ಸ್ಥಳೀಯ ಪೊಲೀಸ್ ಯುವರಾಜು ಮಾತನಾಡಿ, ತಂದೆ-ತಾಯಿಯೊಂದಿಗೆ ಅನುಚಿತವಾಗಿ ವರ್ತಿಸುವವರಿಗೆ ಶಿಕ್ಷೆಯಾಗಲಿದೆ. ಇಂತಹ ದೌರ್ಜನ್ಯದ ಬಗ್ಗೆ ಪೋಷಕರು ದೂರು ದಾಖಲಿಸಬೇಕು ಎಂದು ಅವರು ಹೇಳಿದರು.



ಶನಿವಾರ ಅನ್ನಮಯ್ಯ ಜಿಲ್ಲೆಯಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಶ್ರೀನಿವಾಸಲು ರೆಡ್ಡಿ ಎಂದು ಗುರುತಿಸಲಾದ ವ್ಯಕ್ತಿಯನ್ನು ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ಬಂಧಿಸಲಾಗಿದೆ. ಶ್ರೀನಿವಾಸುಲು ತನ್ನ ಅಣ್ಣ ಮನೋಹರ್ ರೆಡ್ಡಿಗೆ ನೀಡಿದ ಮೂರು ಎಕರೆ ಜಮೀನಿನ ಬಗ್ಗೆ ಅತೃಪ್ತಿ ಹೊಂದಿದ್ದ, ಹಾಗಾಗಿ ಅದನ್ನು ಬದಲಾಯಿಸಬೇಕೆಂದು ಆತನ ಪೋಷಕರಾದ ಲಕ್ಷ್ಮಮ್ಮ ಮತ್ತು ವೆಂಕಟ್ರಮಣ ಬಯಸಿದ್ದರು. ಪುಟ 2

# ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದ ಅಧಿಕಾರಿ

**ಚಾಮರಾಜನಗರ:** ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಕೊಳವೆ ಬಾವಿ ಕೊರೆಸಲು ಅರ್ಜಿದಾರರಿಂದ ರೂ 10 ಸಾವಿರ ಲಂಚ ಪಡೆಯುತ್ತಿದ್ದ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ನಾಗರಾಜು ಎಂಬುವವರು ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ತಾಲ್ಲೂಕಿನ ಫಲಾನುಭವಿಯೊಬ್ಬರು ಗಂಗಾ ಕಲ್ಯಾಣ ಯೋಜನೆಗೆ ಅರ್ಜಿ ಸಲ್ಲಿಸಿದ್ದರು. ಅವರ ಜಮೀನಿನಲ್ಲಿ ಕೊಳವೆ ಬಾವಿ ಕೊರೆಸಬೇಕಾಗಿತ್ತು. ಕೆಲಸ ಮಾಡಿಕೊಡಲು ನಾಗರಾಜು ಅವರು 10 ಸಾವಿರ ಲಂಚ ಕೇಳಿದ್ದರು. ಈ ಬಗ್ಗೆ ಫಲಾನುಭವಿ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು.

ಶನಿವಾರ ನಗರದಲ್ಲಿ ನಾಗರಾಜು, ದೂರುದಾರರಿಂದ ಹಣ ಪಡೆಯುತ್ತಿದ್ದ ಸಂದರ್ಭದಲ್ಲಿ ಲೋಕಾಯುಕ್ತ ಪೊಲೀಸರ ಕೈಗೆ ಸಿಕ್ಕಿ ಬಿದ್ದಿದ್ದಾರೆ. ಅವರನ್ನು ಬಂಧಿಸಿ, ?10 ಸಾವಿರ ನಗದನ್ನು ವಶಪಡಿಸಿಕೊಂಡಿದ್ದಾರೆ.

ಲೋಕಾಯುಕ್ತ ಡಿವೈಎಸ್‌ಪಿ ಮ್ಯಾಥ್ಯೂ ಥಾಮಸ್ ಮಾರ್ಗದರ್ಶನದಲ್ಲಿ ಇನ್‌ಸ್ಪೆಕ್ಟರ್ ಶಶಿಕುಮಾರ್ ಮತ್ತು ತಂಡ ಕಾರ್ಯಾಚರಣೆ ನಡೆಸಿದೆ.

# ಸಮಸ್ತ ಸೈನಿಕರಿಗೆ ಗೌರವ ನೀಡುವ ಕಾರ್ಯ ಮಾಡೋಣ

**ಮೈಸೂರು:** ಭಾರತೀಯ ಸೈನ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಭೂಪಡೆ, ವಾಯುಪಡೆ, ನೌಕಾಪಡೆಯ ಸಮಸ್ತ ಸೈನಿಕರಿಗೆ ಆತ್ಮಸ್ಥೈರ್ಯ ,ಧೈರ್ಯ ,ಶಕ್ತಿ ಹಾಗೂ ನಾಗರೀಕರ ಗೌರವ ನೀಡುವ ಕಾರ್ಯವನ್ನು ಮಾಡೋಣ ಎಂದು ನಿವೃತ್ತ ಮುಖ್ಯ ಶಿಕ್ಷಕಿ ಕೆ.ವಿ. ಶ್ರೀಮತಿ ರವರು ತಿಳಿಸಿದರು.

ಅವರು ಜೈ ಹಿಂದ್ ಪ್ರತಿಷ್ಠಾನ ಋಗ್ವೇದಿ ಯೂತ್ ಕ್ಲಬ್ ವತಿಯಿಂದ ಶ್ರೀರಾಮಪುರದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ರಕ್ಷಣಾ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಭಾರತ ಜಗತ್ತಿನ ಶಕ್ತಿಶಾಲಿ ರಾಷ್ಟ್ರವಾಗುತ್ತಿದೆ. ಭಾರತವನ್ನು ರಕ್ಷಿಸುತ್ತಿರುವ ಎಲ್ಲಾ ಸೈನಿಕರು ರಾಷ್ಟ್ರಕ್ಕಾಗಿ ತಮ್ಮ ತ್ಯಾಗ ಬಲಿದಾನವನ್ನು ಹಾಗೂ ಸೇವೆಯನ್ನು ನಿರ್ವಹಿಸಿಕೊಂಡು ಬರುತ್ತಿದ್ದಾರೆ. ಮಾರ್ಚ್ ಮೂರನೇ ದಿನ ಪ್ರತಿ ವರ್ಷ ರಾಷ್ಟ್ರೀಯ ರಕ್ಷಣಾ ದಿನ ಆಚರಿಸುವ ಮೂಲಕ ಅವರಿಗೆ ಗೌರವವನ್ನು ತುಂಬುವ ಕಾರ್ಯವನ್ನು ಮಾಡುತ್ತಿರುವುದು ಸಂತೋಷವೆಂದು ತಿಳಿಸಿದರು.

ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ



ಮಾತನಾಡಿ 1933 ರಿಂದ ಪ್ರತಿ ವರ್ಷ ಮಾರ್ಚ್ ಮೂರನೇ ದಿನವನ್ನು ರಾಷ್ಟ್ರೀಯ ರಕ್ಷಣಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಭಾರತದ ರಕ್ಷಣೆಗಾಗಿ 14 ಲಕ್ಷಕ್ಕೂ ಹೆಚ್ಚು ಸೈನಿಕರು ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ. ಭಾರತದ ಭೂಪಡೆ ,ನೌಕಾಪಡೆ, ವಾಯುಪಡೆ ಅತ್ಯಂತ ಶಿಸ್ತು ಹಾಗೂ ದಕ್ಷತೆಯಿಂದ ಕೂಡಿರುವ ಹಾಗೂ ವಿಶ್ವದ ಮಾದರಿ ಸೈನಿಕ ವ್ಯವಸ್ಥೆಯನ್ನು ನಿರ್ಮಾಣ ಮಾಡುತ್ತಿರುವ ರಾಷ್ಟ್ರವಾಗಿದೆ. ಸೈನ್ಯ ಶಕ್ತಿಯೆ ರಾಷ್ಟ್ರ ಶಕ್ತಿ. ರಾಷ್ಟ್ರಕ್ಕೇ ಸಾವಿರಾರು ಸೈನಿಕರು ತಮ್ಮ ಪ್ರಾಣವನ್ನು ಅರ್ಪಿಸಿಕೊಂಡು ಹುತಾತ್ಮರಾಗಿದ್ದಾರೆ. ಪ್ರಥಮ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾರತದ ಸ್ವಾತಂತ್ರ್ಯಕ್ಕಾಗಿ ಬ್ರಿಟಿಷರ ವಿರುದ್ಧ ಹೋರಾಟ ನಡೆಸಿ ಸಾವಿರಾರು ಸೈನಿಕರು ತಮ್ಮ ಪ್ರಾಣವನ್ನು ಅರ್ಪಿಸಿಕೊಂಡರು. 1933 ರಲ್ಲಿ ಮಾರ್ಚ್ 3 ಪ್ರಥಮವಾಗಿ ಭಾರತ ರಾಷ್ಟ್ರೀಯ ಸೈನ್ಯ ದಿನಾಚರಣೆಯನ್ನು ಆಚರಿಸಿಕೊಂಡು ಬಂದಿದೆ. ಪ್ರತಿಯೊಬ್ಬರು ಸೈನಿಕರ ಭದ್ರತೆಯನ್ನು , ರಾಷ್ಟ್ರ ಸೈನ್ಯ ವ್ಯವಸ್ಥೆಯನ್ನು ಗೌರವಿಸಿ, ಭಾರತದ ರಾಷ್ಟ್ರ ಸೈನ್ಯದ ಶಕ್ತಿಯನ್ನು ಹೆಚ್ಚಿಸೋಣ ಎಂದರು.

ಹೊಸಕೋಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಅನಿತಾ ರವರು ದೇಶಭಕ್ತಿ ಗೀತೆಗಳನ್ನು ಹಾಡಿದರು. ದೇಶದ ಒಳಗೆ ಮತ್ತು ಹೊರಗೆ ನಡೆಯುವ ಅನೇಕ ಸಮಸ್ಯೆಗಳ ಹೋರಾಟದಲ್ಲಿ ಭಾರತದ ಸೈನ್ಯ ಶಕ್ತಿ ಮೀರಿ ಕಾರ್ಯನಿರ್ವಹಿಸುತ್ತದೆ . ಯುದ್ಧ ಹಾಗೂ ಪ್ರಕೃತಿ ವಿಕೋಪದ ಸಂದರ್ಭದಲ್ಲಿ ತಮ್ಮ ಪ್ರಾಣವನ್ನು ಲೆಕ್ಕಿಸದೆ ರಾಷ್ಟ್ರೀಯ ನಾಗರೀಕರನ್ನು ರಕ್ಷಿಸುವ ಕಾರ್ಯದಲ್ಲಿ ತೊಡಗುವ ಸೈನಿಕರನ್ನು ನಾವೆಲ್ಲರೂ ಗೌರವಿಸೋಣ ಎಂದರು.ಕಾರ್ಯಕ್ರಮದಲ್ಲಿ ಗುಂಡ್ಲುಪೇಟೆ ರಮೇಶ್ ,ಋಗ್ವೇದಿ ಯೂಥ್ ಕ್ಲಬ್ ಅಧ್ಯಕ್ಷರಾದ ಶರಣ್ಯ, ಕಾರ್ತಿಕ್, ಶ್ರಾವ್ಯ , ಕುಸುಮ ಋಗ್ವೇದಿ,ವಿಜಯ್ ಕುಮಾರ್ ಉಪಸ್ಥಿತರಿದ್ದರು.

# ಪಂಚಮಿತ್ರ ಪೋರ್ಟಲ್ ಲೋಕಾರ್ಪಣೆ ಮಾಡಿದ ಸಚಿವ ಎಚ್.ಸಿ.ಮಹದೇವಪ್ಪ

**ಮೈಸೂರು :** ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಹಲವಾರು ಸೇವೆಗಳನ್ನು ಪಡೆಯಲು ಅನುಕೂಲವಾಗುವ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಭಿವೃದ್ಧಿಪಡಿಸಿರುವ ಪಂಚಮಿತ್ರ ಪೋರ್ಟಲ್ ಅನ್ನು ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಸಿ.ಮಹಾದೇವಪ್ಪ ಅವರು ಇಂದು ಜಲದರ್ಶಿನಿ ಅತಿಥಿ ಗೃಹದಲ್ಲಿ ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಸಚಿವರು, ಸಾರ್ವಜನಿಕರು ತಮಗೆ ಅವಶ್ಯಕವಿರುವ ವಿವಿಧ ಮಾಹಿತಿ ಮತ್ತು ವಿವರಗಳನ್ನು ಪಡೆಯಲು, ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಸೇವೆಗಳಿಗೆ ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಲು, ಸಲ್ಲಿಸಿದ ಅರ್ಜಿಗಳ ಸ್ಥಿತಿಗತಿಯನ್ನು ಪರಿಶೀಲಿಸಲು ಹಾಗೂ ಕುಂದುಕೊರತೆಗಳನ್ನು ದಾಖಲಿಸಲು ಪಂಚಮಿತ್ರ ವೇದಿಕೆಯು ಅನುಕೂಲವಾಗಲಿದೆ. ಈ ಸೌಲಭ್ಯವನ್ನು ಎಲ್ಲಾ ಸಾರ್ವಜನಿಕರು ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು, ಸಹಾಯಕ ಕಾರ್ಯದರ್ಶಿ ಕುಲದೀಪ್, ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಂ.ಎಸ್. ಗಿರಿಧರ್, ಬಿ.ಕೆ.ಮನು, ಸಿ.ಕೃಷ್ಣ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಕೆ.ರುಕ್ಮಾಂಗದ, ಪ್ರಕಾಶ್ ಹಾಜರಿದ್ದರು.



# ಎಲ್ಲ ಆಸ್ಪತ್ರೆಯಲ್ಲೂ ಚಿಕಿತ್ಸೆ ಅಂಚೆ ನೌಕರರ ಒತ್ತಾಯ

**ಮೈಸೂರು:** ಸಿಜಿಎಚ್‌ಎಸ್ (ಕೇಂದ್ರ ಸರ್ಕಾರ ಆರೋಗ್ಯ ಯೋಜನೆ) ಅಡಿಯಲ್ಲಿ ಎಲ್ಲ ಮಲ್ಟಿಸ್ಪೆಷಾಲಿಟಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ನೇರವಾಗಿ ಹಾಗೂ ನಗದು ರಹಿತವಾಗಿ ಚಿಕಿತ್ಸೆಗೆ ಅವಕಾಶ ಕಲ್ಪಿಸಬೇಕು ಎಂದು ಅಂಚೆ ನೌಕರರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಅಖಿಲ ಭಾರತ ಅಂಚೆ ನೌಕರರ ಸಂಘ (ಪೋಸ್ಟ್‌ಮನ್ ಮತ್ತು ಎಂಟಿಎಸ್) ಮೈಸೂರು ಜಿಲ್ಲಾ ಘಟಕದಿಂದ ಇಲ್ಲಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ನಡೆದ 40ನೇ ದ್ವೈವಾರ್ಷಿಕ ಅಧಿವೇಶನದಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಪ್ರಸ್ತುತ ಸಿಜಿಎಚ್‌ಎಸ್ ಆಸ್ಪತ್ರೆಗೆ ಹೋಗಿ ಅವರಿಂದ ರೆಫರ್ ಮಾಡಿಸಿಕೊಂಡು ಹೋಗಬೇಕಾದ ಸ್ಥಿತಿ ಇದೆ. ಇದು ತಪ್ಪಬೇಕು ಎಂದು ಕೋರಿದರು.

ಸಂಘದಿಂದ ಮುಂದಿನ ವರ್ಷ ಮೈಸೂರಿನಲ್ಲಿ ರಾಜ್ಯಮಟ್ಟದ ಅಧಿವೇಶನ ನಡೆಸಲು ಹಾಗೂ ಸಾವಿರ ಮಂದಿ ಪ್ರತಿನಿಧಿಗಳನ್ನು ಸೇರಿಸಬೇಕು ಎಂದು ನಿರ್ಣಯವನ್ನೂ ಕೈಗೊಳ್ಳಲಾಯಿತು.

ಮುಂದಿನ ಎರಡು ವರ್ಷಗಳ ಅವಧಿಗೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ವಿಭಾಗೀಯ (ಮೈಸೂರು ಜಿಲ್ಲೆ) ಕಾರ್ಯದರ್ಶಿಯಾಗಿ ಎಚ್.ಸುಂದರಯ್ಯ (ಸತತ 12ನೇ ಬಾರಿಗೆ), ಅಧ್ಯಕ್ಷರಾಗಿ ಅಣ್ಣಯ್ಯ, ಖಜಾಂಚಿಯಾಗಿ ಎಂ.ಎನ್. ಗಿರಿಧರ್ ಆಯ್ಕೆಯಾದರು. 15 ಮಂದಿ ಕಾರ್ಯಕಾರಿ ಸಮಿತಿ ಸದಸ್ಯರನ್ನು ಆಯ್ಕೆ ಮಾಡಲಾಯಿತು.

ಇದಕ್ಕೂ ಮುನ್ನ ಮಾತನಾಡಿದ ಸುಂದರಯ್ಯ, ಎರಡು ವರ್ಷಕ್ಕೊಮ್ಮೆ ಅಧಿವೇಶನ ನಡೆಸುತ್ತೇವೆ. ಆದರೆ, ನೌಕರರು ನಿರೀಕ್ಷಿತ ಪ್ರಮಾಣದಲ್ಲಿ ಭಾಗವಹಿಸುತ್ತಿಲ್ಲ. ಇದು ವಿಷಾದನೀಯ ಎಂದರು.

ಸಂಘದಿಂದ ಮಹಿಳಾ ನೌಕರರಿಗೆ ಅನುಕೂಲ ಕಲ್ಪಿಸಿಕೊಡುತ್ತಿದ್ದೇವೆ. ಆದರೆ, ಸಂಘಟನೆಯ ಮನೋಭಾವ ಇತ್ತೀಚಿನ ನೌಕರರಲ್ಲಿ ಕಂಡು ಬರುತ್ತಿದೆ. ಸೌಲಭ್ಯಗಳನ್ನು ಪಡೆದುಕೊಳ್ಳುವುದಕ್ಕಾಗಿ ಸಂಘಟನೆಯನ್ನು ಉಳಿಸಿ ಬೆಳೆಸಬೇಕು. ಈ ಮನೋಭಾವ ಎಲ್ಲ ನೌಕರರಲ್ಲೂ ಬರಬೇಕು. ನಮಗಾಗಿ ಹಿಂದಿನ ಹಿರಿಯ ನೌಕರರ ಹೋರಾಡಿದ ಪರಿಣಾಮ ಅನುಕೂಲಗಳನ್ನು ಪಡೆದುಕೊಳ್ಳುತ್ತಿದ್ದೇವೆ ಎಂಬುದನ್ನು ಮರೆಯಬಾರದು ಎಂದು ಹೇಳಿದರು.

ಮೈಸೂರು ವಲಯ ಪ್ರತಿನಿಧಿ ಬೇಬಿ ಜೋಸೆಫ್ ಮಾತನಾಡಿ, ದೇಶದಲ್ಲಿ ನಮ್ಮ ಸಂಘಟನೆ ಬಹಳಷ್ಟು ಬಲಶಾಲಿಯಾಗಿದೆ. ನಮಗೆ ಬೆಂಬಲದ ಅಗತ್ಯವಿಲ್ಲ. ಆದರೆ, ಕೆಲವು ಸಂಘಟನೆಗಳು ನಮಗೆ ಇಂದು ಅರ್ಧದಿನ ರಜೆ ನೀಡುತ್ತಿರುವುದಕ್ಕೆ ನಾವು ಕಾರಣ, ನಾವು ಕೋರಿದ್ದರಿಂದಾಗಿ ದೊರೆಯುತ್ತಿದೆ ಎಂದು ಹೇಳಿಕೊಂಡು ಓಡಾಡುತ್ತಿದ್ದಾರೆ. ನಮ್ಮ ಹೋರಾಟದ ಶ್ರಮದಿಂದ ಸೌಲಭ್ಯಗಳು ದೊರೆಯುತ್ತಿವೆಯೇ ಹೊರತು ಬೇರೆ ಯಾರಿಂದಲ್ಲೂ ಅಲ್ಲ ಎಂದು ತಿಳಿಸಿದರು.

ಸಂಘದ ಅಭಿವೃದ್ಧಿಗೆ ಶ್ರಮಿಸಿದ ಉಪಾಧ್ಯಕ್ಷ ಸೈಯದ್ ಜಮೀಲ್, ಮಾಜಿ ಅಧ್ಯಕ್ಷ ಎಚ್ .ಜಿ.ರಾಜು, ಮಾಜಿ ಕಾರ್ಯದರ್ಶಿಗಳಾದ ಎಚ್.ಎಸ್.ನಾಗರಾಜ್, ಜಿ.ಗುರುಸ್ವಾಮಿ ಅವರನ್ನು ಅಭಿನಂದಿಸಲಾಯಿತು. ವಿಭಾಗೀಯ ಕಾರ್ಯದರ್ಶಿ ಮತ್ತು ವಲಯ ಕಾರ್ಯಾಧ್ಯಕ್ಷ ಎಚ್.ಸುಂದರಯ್ಯ, ಖಂಜಾಚಿ ಎಂ.ಎನ್. ಗಿರಿಧರ್, ಮಾಜಿ ಕಾರ್ಯದರ್ಶಿ ಮುತ್ತುಕುಮಾರ್ ಹಾಜರಿದ್ದರು.



## ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ, ಜಾವಗಲ್ ಶ್ರೀನಾಥ್ ಸೇರಿ ನಾಲ್ವರಿಗೆ ಗೌರವ ಡಾಕ್ಟರೇಟ್ ಪ್ರದಾನ

# ಮೈಸೂರರು ವಿವಿ ಘಟಿಕೋತ್ಸವ

**ಮೈಸೂರು :** ವೇದ ಕಾಲದಿಂದ ಇಂದಿನವರೆಗೂ ಭಾರತೀಯರು ಎಲ್ಲಾ ಕ್ಷೇತ್ರಗಳಲ್ಲಿ ಅನುಪಮವಾದ ಜ್ಞಾನವನ್ನು ಗಳಿಸಿದ್ದಾರೆ. ಖಗೋಳ ವಿಜ್ಞಾನದಿಂದ ಭೂವಿಜ್ಞಾನ, ಗಣಿತ, ವೈದ್ಯಕೀಯ ಮತ್ತು ಇತರ ಹಲವು ಕ್ಷೇತ್ರಗಳಲ್ಲಿ ಭಾರತೀಯರ ಕೊಡುಗೆ ಇಡೀ ಜಗತ್ತಿಗೆ ಮಹತ್ವದ್ದಾಗಿದೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಮೈಸೂರು ವಿಶ್ವವಿದ್ಯಾಲಯದ 104ನೇ ಘಟಿಕೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಪ್ರದಾಯವು ಬಹಳ ಪುರಾತನವಾಗಿದೆ ಮತ್ತು ಪ್ರಾಚೀನ ಕಾಲದಿಂದಲೂ ವಸುದೇವಂ ಕುಟುಂಬಕಂ ತತ್ವಶಾಸ್ತ್ರ ಮತ್ತು ಧ್ಯಾನದ ಮೇಲೆ ಕೇಂದ್ರೀಕೃತವಾಗಿದೆ ಮತ್ತು ಸರ್ವೇ ಭವಂತು ಸುಖಿನೋ, ಸರ್ವೇ ಸಂತು ನಿರಾಮಯ? ಎಂಬ ಮನೋಭಾವದಿಂದ ಪ್ರೇರಿತವಾಗಿದೆ ಎಂದರು.

ನಮ್ಮ ಸಂಸ್ಕೃತಿ ಯಾವಾಗಲೂ ವಿಶ್ವಭ್ರಾತೃತ್ವ, ವಿಶ್ವ ಶಾಂತಿ, ಸಮಾನತೆ ಮತ್ತು ಸಾಮರಸ್ಯವನ್ನು ಪ್ರೇರೇಪಿಸುತ್ತದೆ. ಆಧುನಿಕ ಜ್ಞಾನವನ್ನು ಮೌಲ್ಯಗಳೊಂದಿಗೆ ಸಂಯೋಜಿಸುವ ಮೂಲಕ ಅಂತಹ ಶಿಕ್ಷಣ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಅವಶ್ಯಕತೆಯಿದೆ.

ವೇದ-ವೇದಾಂಗದ ಹೊರತಾಗಿ, ತಕ್ಷಶಿಲಾ ಮತ್ತು ನಳಂದ ವಿಶ್ವವಿದ್ಯಾಲಯಗಳು ವಿಜ್ಞಾನ, ತಂತ್ರಜ್ಞಾನ, ಗಣಿತ, ಖಗೋಳಶಾಸ್ತ್ರ, ರಾಜ್ಯಶಾಸ್ತ್ರ, ನೀತಿಶಾಸ್ತ್ರ, ಅರ್ಥಶಾಸ್ತ್ರ, ವ್ಯಾಕರಣ ಇತ್ಯಾದಿ ಅನೇಕ ವಿಷಯಗಳಿಗೆ ಪ್ರಸಿದ್ಧವಾಗಿವೆ.

ಈ ವಿಶ್ವವಿದ್ಯಾಲಯಗಳಲ್ಲಿ ಅಧ್ಯಯನ ಮಾಡಲು ಪ್ರಪಂಚದಾದ್ಯಂತದ ವಿದ್ಯಾರ್ಥಿಗಳು ಬಂದಿದ್ದಾರೆ. ಈ ವಿಶ್ವವಿದ್ಯಾಲಯಗಳಲ್ಲಿ ಪ್ರಸಿದ್ಧ ಭಾರತೀಯ ವಿದ್ವಾಂಸರು ಚರಕ್, ಸುಶ್ರುತ, ಆರ್ಯಭಟ್ಟ, ಚಾಣಕ್ಯ ಮುಂತಾದವರು ಜ್ಞಾನವನ್ನು ಪಡೆದರು ಮತ್ತು ಜ್ಞಾನದ ವಿವಿಧ ಕ್ಷೇತ್ರಗಳಲ್ಲಿ ಅವರ ಮಹತ್ವದ ಕೊಡುಗೆಯಿಂದಾಗಿ ವಿಶ್ವಗುರು ಎಂದು ಪರಿಗಣಿಸಲ್ಪಟ್ಟರು ಎಂದು ಹೇಳಿದರು.

ಧರ್ಮ ಮತ್ತು ಸಂಸ್ಕೃತಿಯನ್ನು ಸಂರಕ್ಷಿಸಲು, ರಾಷ್ಟ್ರದ ಏಕತೆ ಮತ್ತು ಸಮಗ್ರತೆಯನ್ನು ಕಾಪಾಡಿಕೊಳ್ಳಲು, ಸಮಾಜದಲ್ಲಿ ಸಮಾನತೆ ಮತ್ತು ಸೌಹಾರ್ದತೆಯನ್ನು ಕಾಪಾಡಿಕೊಳ್ಳಲು ಮತ್ತು ಜಗತ್ತಿಗೆ ಹೊಸ ದಿಕ್ಕನ್ನು ನೀಡಲು




ಉತ್ತಮ ಶಿಕ್ಷಣ ಸಹಕಾರಿಯಾಗುವುದರ ಜೊತೆಗೆ ಇಡೀ ಮಾನವಕುಲಕ್ಕೆ ಒಳ್ಳೆಯದನ್ನು ಮಾಡುತ್ತದೆ ಎಂದು ತಿಳಿಸಿದರು.

ಸ್ವಾತಂತ್ರ್ಯದ ನಂತರ ದೇಶವು ಎಲ್ಲಾ ಕ್ಷೇತ್ರಗಳಲ್ಲಿ ಅಭೂತಪೂರ್ವ ಪ್ರಗತಿಯನ್ನು ಸಾಧಿಸಿದೆ ಮತ್ತು ದೇಶದ ಆರ್ಥಿಕತೆಯು ಪ್ರಬಲವಾಗಿದೆ. ಇಂದು ನಮ್ಮ ಆರ್ಥಿಕತೆಯು ವಿಶ್ವದ 5 ನೇ ಅತಿದೊಡ್ಡ ಆರ್ಥಿಕತೆಯಾಗಿದೆ.

ದೇಶವನ್ನು ಮತ್ತಷ್ಟು ಬಲಪಡಿಸುವ ಮೂಲಕ ವಿಶ್ವದ ಅತಿದೊಡ್ಡ ಆರ್ಥಿಕತೆಯನ್ನು ಮಾಡಲು ನಿರ್ಧರಿಸಲಾಗಿದೆ. ಪರಿಸರ ಅಸಮತೋಲನ ಇಂದು ಜಗತ್ತಿನಲ್ಲಿ ಗಂಭೀರ ಸಮಸ್ಯೆಯಾಗಿದೆ. ಪರಿಸರ ಸಂರಕ್ಷಣೆ ಮತ್ತು ಪ್ರಚಾರ ನಮ್ಮೆಲ್ಲರ ಹೊಣೆಯಾಗಿದೆ.

ನೀರು, ಅರಣ್ಯ ಮತ್ತು ವಾಯು ಸಂರಕ್ಷಣೆಗೆ ಹೆಚ್ಚಿನ ಕೆಲಸ ಮಾಡುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಸಂರಕ್ಷಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ಮೈಸೂರು ನಗರವು ತನ್ನ ಐತಿಹಾಸಿಕ ಸ್ಮಾರಕಗಳು ಮತ್ತು ವಿಶಿಷ್ಟ ವಾಸ್ತುಶಿಲ್ಪ ಮತ್ತು ಅದರ ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಗೆ ಹೆಸರುವಾಸಿಯಾಗಿದೆ ಮತ್ತು ದಕ್ಷಿಣ ಭಾರತದ ಶಿಕ್ಷಣದ ಕೇಂದ್ರವಾಗಿದೆ.

ಮೈಸೂರು ವಿಶ್ವವಿದ್ಯಾಲಯವನ್ನು ಜುಲೈ 27, 1916 ರಂದು ಸ್ಥಾಪಿಸಲಾಯಿತು, ಇದು ದೇಶದ ಆರನೇ ಅತ್ಯಂತ ಹಳೆಯ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ರಾಜ್ಯದ ಮೊದಲ ವಿಶ್ವವಿದ್ಯಾಲಯವಾಗಿದೆ.

ಈ ವಿಶ್ವವಿದ್ಯಾಲಯವು ನ ಹಿ ಜ್ಞಾನನೇ ಸದೃಶಂ? ಮತ್ತು ಸತ್ಯಮೇವೋದ್ಧ ರಮ್ಯಹಂ ಎಂಬ ಧ್ಯೇಯವಾಕ್ಯಗಳ ಪ್ರಕಾರ ತನ್ನ ಗುರಿಯನ್ನು ಸಾಧಿಸಲು ಪ್ರಾರಂಭದಿಂದಲೂ ಕೆಲಸ ಮಾಡುತ್ತಿದೆ, ಅಂದರೆ ಜ್ಞಾನಕ್ಕೆ ಸಮಾನವಾದದ್ದು ಯಾವುದೂ ಇಲ್ಲ ಮತ್ತು ನಾನು ಯಾವಾಗಲೂ ಸತ್ಯವನ್ನು ಬೆಂಬಲಿಸುತ್ತೇನೆ.

ಈ ವಿಶ್ವವಿದ್ಯಾಲಯವು ಈ ದೇಶಕ್ಕೆ ಅನೇಕ ವಿಜ್ಞಾನಿಗಳು, ತತ್ವಜ್ಞಾನಿಗಳು ಮತ್ತು ರಾಜಕಾರಣಿಗಳನ್ನು ನೀಡಿದೆ, ಅವರು ಕರ್ನಾಟಕ ಮತ್ತು ಭಾರತದ ನಿರ್ಮಾಣದಲ್ಲಿ ಜ್ಞಾನ ಮತ್ತು ವಿಜ್ಞಾನ ಕ್ಷೇತ್ರದಲ್ಲಿ ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಸಮಾಜ, ದೇಶ, ಜ್ಞಾನ, ವಿಜ್ಞಾನ, ಕ್ರೀಡಾ ಕ್ಷೇತ್ರದಲ್ಲಿ ಧರ್ಮ, ಸಂಸ್ಕೃತಿ, ಸಂವರ್ಧನೆ ಹಾಗೂ ಸಂರಕ್ಷಣೆಗಾಗಿ ಅತ್ಯುತ್ತಮ ಹಾಗೂ ಅನುಪಮ ಕಾರ್ಯಗಳನ್ನು ಮಾಡಿರುವ ಮಹಾನ್ ವ್ಯಕ್ತಿಗಳನ್ನು ವಿಶ್ವವಿದ್ಯಾಲಯವು ಗೌರವಿಸುತ್ತಿರುವುದು ಸಂತಸದ ಸಂಗತಿ.

ಈ ಘಟಿಕೋತ್ಸವ ಸಮಾರಂಭದಲ್ಲಿ ಗೌರವಾನ್ವಿತ ಶ್ರೀ ಎಸ್.ಎಂ. ಕೃಷ್ಣಾ , ಪ್ರಾಧ್ಯಾಪಕ ಡಾ. ಭಾಷ್ಯಂ ಸ್ವಾಮೀಜಿ ಮತ್ತು ಶ್ರೀ ಎಂ.ಆರ್. ಸೀತಾರಾಮ್ ಅವರಿಗೆ ಗೌರವ ಪದವಿ ನೀಡಿ ಗೌರವಿಸಲಾಗಿದೆ.

103ನೇ ಘಟಿಕೋತ್ಸವ ಸಮಾರಂಭದಲ್ಲಿ ವಿಶ್ವವಿಖ್ಯಾತ ಕ್ರಿಕೆಟಿಗರಾದ ಗೌರವಾನ್ವಿತ ಶ್ರೀ ಜಾವಗಲ್ ಶ್ರೀನಾಥ್ ಅವರಿಗೆ ಗೌರವ ಪದವಿ ನೀಡಿ ಗೌರವಿಸಲು ನಿರ್ಧರಿಸಲಾಗಿತ್ತು ಆದರೆ ಅವರ ಬಿಡುವಿಲ್ಲದ ಕಾರಣ ಅಂದು ಬರಲಾಗಲಿಲ್ಲ.

ಈ ಘಟಿಕೋತ್ಸವದಲ್ಲಿ ಅವರನ್ನೂ ಗೌರವಿಸಲಾಗಿದೆ. ಈ ಸಾಧಕರ ಸಾಧನೆ ಪ್ರತಿಯೊಬ್ಬರಿಗೂ ಸ್ಫೂರ್ತಿ. ಈ ಸಾಧಕರ ಸಾಧನೆ ಹೀಗೆ ನಿರಂತರವಾಗಿರಲಿ ಎಂದು ಆಶಿಸುತ್ತೇನೆ ಎಂದರು. ಉನ್ನತ ಶಿಕ್ಷಣ ಸಚಿವರಾದ ಡಾ. ಎಂ. ಸಿ.ಸುಧಾಕರ್, ಜಯದೇವ ನಿವೃತ್ತ ನಿರ್ದೇಶಕರಾದ ಡಾ. ಸಿ ಎನ್ ಮಂಜುನಾಥ್, ಕುಲಪತಿ ಎನ್. ಕೆ ಲೋಕನಾಥ್ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ಆನೆ ದಾಳಿಗೆ ನಿವೃತ್ತ ನಿರ್ದೇಶಕ ಬಲಿ

**ಚನ್ನಪಟ್ಟಣ:** ಕಳೆದ ಗುರುವಾರ ವಾಯುವಿಹಾರಕ್ಕೆಂದು ತೆರಳಿದ್ದ ವೇಳೆ ಆನೆ ದಾಳಿಯಿಂದ ಗಂಭೀರವಾಗಿ ಗಾಯಗೊಂಡಿದ್ದ ಕನ್ನಡ ಸಂಸ್ಕೃತಿ ಇಲಾಖೆಯ ನಿವೃತ್ತ ನಿರ್ದೇಶಕ ರಾಜು (68) ಚಿಕಿತ್ಸೆ ಫಲಕಾರಿಯಾಗದೇ ಭಾನುವಾರ ಮೃತಪಟ್ಟಿದ್ದಾರೆ. ತಾಲೂಕಿನ ಮತ್ತೀಕೆರೆ-ಶೆಟ್ಟಿಹಳ್ಳಿಯ ಗ್ರಾಮದ ರಾಜು ಪ್ರತಿನಿತ್ಯ ಮುದುಗೆರೆ ಬಳಿಯ ಅರಣ್ಯ ಸಂಶೋಧನಾ ಕೇಂದ್ರದ ಬಳಿ ವಾಯುವಿಹಾರಕ್ಕೆ ತೆರಳುತ್ತಿದ್ದರು. ಗುರುವಾರ ಎಂದಿನಂತೆ ಇವರು ವಾಯುವಿಹಾರಕ್ಕೆ ತೆರಳಿದ್ದ ವೇಳೆ ಮುದುಗೆರೆ ಪ್ಲಾಂಟೇಶನ್ ಹೋಗುವ ದಾರಿಯಲ್ಲಿ ಆನೆಗಳ ಹಿಂಡು ಎದುರಾಗಿತ್ತು. ಇದರಲ್ಲಿ ಒಂದು ಆನೆ ರಾಜು ಅವರ ಮೇಲೆ ದಾಳಿ ನಡೆಸಿ ಅವರನ್ನು ಸೊಂಡಲಿನಿಂದ ತಳ್ಳಿತ್ತು. ಈ ವೇಳೆ ರಾಜು ಅವರು ಹಳ್ಳಕ್ಕೆ ಬಿದ್ದು, ಅವರ ತಲೆ, ಪಕ್ಕೆ ಎಲುಬು, ಭುಜ, ಬಲಗಾಲಿಗೆ ಏಟಾಗಿತ್ತು. ಪ್ರಜ್ಞಾಹೀನರಾಗಿ ಬಿದ್ದಿದ್ದ ಅವರನ್ನು ಸ್ಥಳೀಯರು ತಾಲೂಕಿನ ಚಾಮುಂಡೇಶ್ವರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿನ ಮಹಾವೀರ್ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗೆ ದಾಖಲಿಸಲಾಗಿತ್ತು.

# ವಾಹನ ಡಿಕ್ಕಿ ವ್ಯಕ್ತಿ ಸಾವು

**ಚನ್ನಪಟ್ಟಣ:** ಅಪರಿಚಿತ ವಾಹನ ಡಿಕ್ಕಿ ಹೊಡೆದ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ತಾಲೂಕಿನ ಮತ್ತೀಕೆರೆ ಗ್ರಾಮದ ಬಳಿ ಬೆಂ-ಮೈ ಎಕ್ಸ್‌ಪ್ರೆಸ್ ವೇನಲ್ಲಿ ನಡೆದಿದೆ. ತಾಲೂಕಿನ ಮತ್ತೀಕೆರೆ ಗ್ರಾಮದ ಬಳಿಯ ಶಿವಳ್ಳಿ ಹೋಟೆಲ್ ಹಾಗೂ ವೈಶಾಲಿ ಹೋಟೆಲ್ ಮಧ್ಯದಲ್ಲಿ ಬೆಂ-ಮೈ ಹೆದ್ದಾರಿಯಲ್ಲಿ ಅಪರಿಚಿತ ವಾಹನವೊಂದು ಅಪರಿಚಿತ ವ್ಯಕ್ತಿಗೆ ಡಿಕ್ಕಿ ಹೊಡೆದು ಅವರು ಮೃತಪಟ್ಟಿದ್ದಾರೆ. ಮೃತ ದೇಹದ ಮೇಲೆ ಬೇರೆ ವಾಹನಗಳು ಚಲಿಸಿದ್ದು, ವ್ಯಕ್ತಿಯ ಶವ ಮಾಂಸದ ಮುದ್ದೆಯಂತಾಗಿದೆ. ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿಯ ಶವವನ್ನು ಬೆಂಗಳೂರಿನ ರಾಜಾರಾಜೇಶ್ವರಿ ಆಸ್ಪತ್ರೆಯ ಶವಗಾರದಲ್ಲಿ ಇರಿಸಲಾಗಿದೆ ಈ ಸಂಬಂಧ ಚನ್ನಪಟ್ಟಣ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



**ಚಿಕ್ಕನಾಯಕನಹಳ್ಳಿ ತಾಲೂಕು ಹುಳಿಯಾರು ಇಂದಿರಾನಗರದಲ್ಲಿನ ಪಲ್ಸ್ ಪೋಲೀಯೋ ಅಭಿಯಾನವನ್ನು ಪಪಂ ಅಧ್ಯಕ್ಷ ಕೆಎಂಎಲ್ ಕಿರಣ್ ಉದ್ಘಾಟಿಸಿದರು. ಪಪಂ ಸದಸ್ಯೆ ಬೀಬೀಫಾತೀಮಾ, ಅಂಗನವಾಡಿ ನೌಕರರ ಸಂಘದ ಅಧ್ಯಕ್ಷೆ ಪೂರ್ಣಮ್ಮ ಮತ್ತಿತರರು ಇದ್ದಾರೆ.**

# ಇಂದು ಅಶೋಕಪುರಂ ರೈಲು ನಿಲ್ದಾಣದ ಸೌಲಭ್ಯಗಳ ಉದ್ಘಾಟನೆ

**ಮೈಸೂರು:** ಅಶೋಕಪುರಂ ರೈಲು ನಿಲ್ದಾಣದಲ್ಲಿನ ಮೂಲಸೌಕರ್ಯ ಸೌಲಭ್ಯಗಳನ್ನು ನವೀಕರಿಸಲಾಗಿದ್ದು, ಮಾರ್ಚ್ 4 ರಂದು ಸಂಸದ ಪ್ರತಾಪ್ ಸಿಂಹ ಅವರು ನಿಲ್ದಾಣದ ಎರಡನೇ ಪ್ರವೇಶ ಸೇರಿದಂತೆ ನಿಲ್ದಾಣದಲ್ಲಿ ಉನ್ನತೀಕರಿಸಿದ ಸೌಲಭ್ಯಗಳನ್ನು ಉದ್ಘಾಟಿಸಲಿದ್ದಾರೆ.



ಹೆಚ್ಚುವರಿ ಪ್ಲಾಟ್ ಫಾರ್ಮ್ ಗಳು, ಹೊಸ ಎರಡನೇ ಪ್ರವೇಶ ಮತ್ತು ವಿಸ್ತರಿತ ವಾಹನ ನಿಲ್ದಾಣ ಸೌಲಭ್ಯಗಳಂತಹ ಸೌಲಭ್ಯ ವರ್ಧನೆಗಳೊಂದಿಗೆ ಪ್ರಯಾಣಿಕರ ಸಂಖ್ಯೆಯಲ್ಲಿನ ಭವಿಷ್ಯದ ಹೆಚ್ಚಳವನ್ನು ಸರಿಹೊಂದಿಸಬಹುದಾಗಿದೆ. ಸ್ಥಳೀಯ ಸಾರಿಗೆ ಜಾಲಗಳೊಂದಿಗೆ ಸುಧಾರಿತ ಸಂಪರ್ಕ ಮತ್ತು ತಡೆರಹಿತ ಚಲನಾ ಸೌಲಭ್ಯಗಳು ದಟ್ಟಣೆಯನ್ನು ಮತ್ತಷ್ಟು ಕಡಿಮೆ ಮಾಡುತ್ತವೆ. ಇದಲ್ಲದೆ, ಅಶೋಕಪುರಂನಲ್ಲಿ ಮುಂಗಡ ಟಿಕೆಟಿಂಗ್ ವ್ಯವಸ್ಥೆ ಮತ್ತು ಪ್ರಯಾಣಿಕರ ಮಾಹಿತಿ ವ್ಯವಸ್ಥೆಗಳನ್ನು ಅಳವಡಿಸುವುದು ಈ ಕಾರ್ಯಾಚರಣೆಗಳನ್ನು ಸುಗಮಗೊಳಿಸುತ್ತವೆ ಮತ್ತು ಮೈಸೂರು ಜಂಕ್ಷನ್ ನಲ್ಲಿನ ಹೊರೆಯನ್ನು ಕಡಿಮೆ ಮಾಡುತ್ತವೆ. ಈ ಮಹತ್ವದ ನಿಲ್ದಾಣ ಮರುರೂಪಿಸುವ ಉಪಕ್ರಮವನ್ನು ಒಟ್ಟು 32.5 ಕೋಟಿ ವೆಚ್ಚದಲ್ಲಿ ಮಾಡಲಾಗಿದೆ. ಇದರಲ್ಲಿ 22 ಕೋಟಿಗಳನ್ನು ಸಂಚಾರ ಸೌಲಭ್ಯಗಳ ಉನ್ನತೀಕರಣಕ್ಕೆ ಮತ್ತು 10.5 ಕೋಟಿ ಪ್ರಯಾಣಿಕರ ಸೌಕರ್ಯಗಳನ್ನು ವೃದ್ಧಿಸಲು ಉಪಯೋಗ ಮಾಡಲಾಗಿದೆ.

ಮೂಲತಃ ಮೂರು ಪ್ಲಾಟ್ ಫಾರ್ಮ್ ಗಳು, ಮೂರು ಚಾಲನೆಯಲ್ಲಿರುವ ಮಾರ್ಗಗಳು ಮತ್ತು ಎರಡು ಸ್ಟೇಬ್ಲಿಂಗ್ ಲೈನ್ ಗಳನ್ನು ಹೊಂದಿರುವ ಅಶೋಕಪುರಂ ರೈಲ್ವೆ ನಿಲ್ದಾಣವು ಮೈಸೂರು ನಗರ ರೈಲು ನಿಲ್ದಾಣದಿಂದ ಕೇವಲ 5.2 ಕಿಮೀ ದೂರದಲ್ಲಿದ್ದೂ, ಮೈಸೂರಿಗೆ ನಿರ್ಣಾಯಕವಾದ ಎರಡನೇ ನಿಲ್ದಾಣವಾಗಿ ಅಭಿವೃದ್ಧಿಗೊಂಡಿದೆ. ಅಶೋಕಪುರಂ ನಿಲ್ದಾಣವು ವ್ಯಾಪಕವಾದ ಪುನರಾಭಿವೃದ್ಧಿಯ ನಂತರ ತನ್ನ ಮೂಲಸೌಕರ್ಯವನ್ನು ವಿಸ್ತರಿಸಿಕೊಂಡು, ಈಗ ಐದು ಚಾಲನೆಯಲ್ಲಿರುವ ಹಳಿಮಾರ್ಗಗಳು, ಐದು ಪ್ಲಾಟ್‌ಫಾರ್ಮ್‌ಗಳು ಮತ್ತು ಎರಡು ಸ್ಟೇಬ್ಲಿಂಗ್ ಲೈನ್ ಗಳನ್ನು ಒಳಗೊಂಡಿದೆ.




**ಪಲ್ಸ್ ಪೋಲಿಯೋ ಅಭಿಯಾನ**

**ಕೋಲಾರ ನಗರದ ಕೆ ಜಿ ಮೊಹಲ್ಲಾ ದಲ್ಲಿ ಮಾನ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಪದ್ಮ ಬಸವಂತಪ್ಪ ರವರು ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಅವರೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜಗದೀಶ್, ಡಾ. ವಿಜಯಕುಮಾರ್, ಡಾ.ವಿಜಯಮ್ಮ, ಡಾ.ನಾರಾಯಣ ಸ್ವಾಮಿ ಡಾ.ರಮೇಶ್ ಸೇರಿ ಮತ್ತಿತರರು ಭಾಗವಹಿಸಿದ್ದರು. 0ಯಿಂದ 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಹನಿಗಳನ್ನು ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿ ಗೊಳಿಸಲು ಅವರು ವಿನಂತಿಸಿದರು.**

# ಪ್ರತಿಯೊಬ್ಬರು ಮಕ್ಕಳಿಗೆ ಪೋಲಿಯೋ ಹನಿ ಹಾಕಿಸಿ- ರೋಗದಿಂದ ರಕ್ಷಿಸಿ

**ಚಾಮರಾಜನಗರ:** ಆಗತಾನೆ ಹುಟ್ಟಿದ ಮಗುವಿನಿಂದ 5 ವರ್ಷದೊಳಗಿನ ಮಕ್ಕಳಿಗೆ ಪ್ರತಿಯೊಬ್ಬರು ಪೋಲಿಯೋ ಹನಿ ಹಾಕಿಸಿ ಮಕ್ಕಳನ್ನು ಮಾರಕವಾಗಿ ಕಾಡುವ ಪೋಲಿಯೋ ರೋಗದಿಂದ ರಕ್ಷಿಸುವಂತೆ ಶಾಸಕರು ಹಾಗೂ ಮೈಸೂರು ಸೇಲ್ಸ್ ಇಂಟರ್ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಜಿಲ್ಲಾಸ್ಪತ್ರೆಯ ಹೆರಿಗೆ ವಿಭಾಗದ ಅವರಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ 'ರಾಷ್ಟ್ರೀಯ ಪಲ್ಸ್ ಪೋಲಿಯೋ' ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಕ್ಕಳ ಬಾಯಿಗೆ ಪೋಲಿಯೋ ಲಸಿಕೆ ಹನಿ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪೋಲಿಯೋ ರೋಗ 30 ವರ್ಷಗಳ ಹಿಂದೆ ಮಕ್ಕಳಿಗೆ ಮಾರಕವಾಗಿ ಪರಿಣಮಿಸಿತ್ತು. ಪೋಲಿಯೋ ವೈರಸ್‌ನಿಂದ ಮಕ್ಕಳನ್ನು ರಕ್ಷಿಸಲು ಸರ್ಕಾರವು 1995ರಿಂದ ಪ್ರತಿವರ್ಷವೂ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದೆ. ಈ ಹಿಂದೆ ತಾಯಂದಿರು. ಪೋಷಕರು ಮಕ್ಕಳಿಗೆ ಪೋಲಿಯೋ ಹನಿ ಹಾಕಿಸಲು ಇಂಜರಿಯುತ್ತಿದ್ದರು. ಪ್ರಸ್ತುತ ಜನರು ಜಾಗೃತರಾಗಿದ್ದಾರೆ. ಪ್ರತಿಯೊಬ್ಬರು ತಪ್ಪದೆ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವಂತೆ ಶಾಸಕರಾದ ಪುಟ್ಟರಂಗಶೆಟ್ಟಿ ಅವರು ಸಲಹೆ ಮಾಡಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಂಗವಾಗಿ ಜಿಲ್ಲೆಯಾದ್ಯಂತ 3ರಿಂದ 4 ದಿನಗಳ ಕಾಲ ಹಮ್ಮಿಕೊಳ್ಳಲಾಗಿರುವ ಪೋಲಿಯೋ ಹನಿ ಹಾಕುವ ಕಾರ್ಯಕ್ರಮದಲ್ಲಿ ಬೆಳಿಗ್ಗೆ 8ರಿಂದ ಸಂಜೆ 5 ಗಂಟೆಯವರೆಗೆ ಅಂಗನವಾಡಿ ಕೇಂದ್ರಗಳು, ಬಸ್ ಹಾಗೂ ರೈಲ್ವೆ ನಿಲ್ದಾಣ ಸೇರಿದಂತೆ ಜನನಿಬಿಡ ಸ್ಥಳಗಳಲ್ಲಿ ಪೋಲಿಯೋ ಹನಿ ಹಾಕಲಾಗುತ್ತದೆ. ಭವಿಷ್ಯದ ಸತ್ಪ್ರಜೆಗಳನ್ನು ರೂಪಿಸುವ ನಿಟ್ಟಿನಲ್ಲಿ 5 ವರ್ಷದೊಳಗಿನ



ಯಾವ ಮಗುವು ಪೋಲಿಯೋ ಲಸಿಕೆ ಹನಿಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು ಎಂದರು. ಭಾರತ ಪೋಲಿಯೋ ಮುಕ್ತ ದೇಶವಾಗಿದೆ. 2014ರಿಂದ ಭಾರತದ ಯಾವುದೇ ಭಾಗದಲ್ಲಿ ಪೋಲಿಯೋ ಕಾಣಿಸಿಕೊಂಡಿಲ್ಲ. ನೆರೆ ದೇಶಗಳಲ್ಲಿ ಪೋಲಿಯೋ ಪ್ರಕರಣಗಳಿರುವುದರಿಂದ ಮುನ್ನೆಚ್ಚರಿಕೆಯಾಗಿ ಆಗತಾನೆ ಹುಟ್ಟಿದ ಮಗುವಿನಿಂದ 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿ ಹಾಕಲಾಗುತ್ತಿದೆ. ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಸಹ ಎಲ್ಲಾ ತಾಯಂದಿರು, ಪೋಷಕರು ತಮ್ಮ ಮಕ್ಕಳಿಗೆ ತಪ್ಪದೆ ಪೋಲಿಯೋ ಹನಿ ಹಾಕಿಸಿ ರೋಗದ ಸಂಪೂರ್ಣ ನಿರ್ಮೂಲನೆಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಿದಂಬರ ಅವರು ಪೋಲಿಯೋ ವೈರಸ್ ನೀರು ಮತ್ತು ಆಹಾರದ ಮೂಲಕ ದೇಹವನ್ನು ಸೇರಿ ಪ್ರತಿಯೊಂದು ನರಗಳಿಗೂ ವ್ಯಾಪಿಸಿ ಮಾಂಸಖಂಡಗಳು ಶಕ್ತಿ, ಸ್ವಾಧೀನ ಕಳೆದುಕೊಳ್ಳುವಂತೆ ಮಾಡಲಿದೆ. ಪೋಲಿಯೋ ಹನಿ ಹಾಕಿಸಲು ಉದಾಸೀನತೆ ಬೇಡ. ಮಕ್ಕಳನ್ನು ಪೋಲಿಯೋ ರೋಗದಿಂದ ರಕ್ಷಿಸಲು ಕಳೆದ 30 ವರ್ಷಗಳಿಂದ ನಿರಂತರವಾಗಿ ಪೋಲಿಯೋ ಹನಿ ಹಾಕಲಾಗುತ್ತಿದ್ದು, ಜಿಲ್ಲೆಯಲ್ಲಿ ಈ ಬಾರಿ 5 ವರ್ಷದೊಳಗಿನ 65835 ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಗುರಿ ಹೊಂದಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶ್ರೀಕಂಠರಾಜೇ ಅರಸ್, ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಡಾ. ಮಂಜುನಾಥ್, ಜಿಲ್ಲಾ ಆರ್ .ಸಿ.ಎಚ್. ಅಧಿಕಾರಿ ಡಾ. ಮಂಜುನಾಥ್, ಜಿಲ್ಲಾ ಸರ್ಜನ್ ಡಾ. ಕೃಷ್ಣಪ್ರಸಾದ್, ಸ್ಥಾನಿಕ ವೈದ್ಯಾಧಿಕಾರಿ ಡಾ. ಮಹೇಶ್, ಪಲ್ಸ್ ಪೋಲಿಯೋ ಜಿಲ್ಲಾ ನೋಡೆಲ್ ಅಧಿಕಾರಿ ಡಾ. ಜಯರಾಜ್, ತಾಲೂಕು ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ್, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರಾದ ದುಶ್ಯಂತ್, ನಗರ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ. ಅ.ಖ. ಉಮಾರಾಣಿ, ಜಿಲ್ಲಾ ಆರೋಗ್ಯ ಮತ್ತು ಶಿಕ್ಷಣ ಅಧಿಕಾರಿ ದೊರೆಸ್ವಾಮಿ ನಾಯಕ್, ಸರ್ಕಾರಿ ಶುಶ್ರೂಷಕ ಕಾಲೇಜಿನ ಪ್ರಾಂಶುಪಾಲರಾದ ಖುದ್ರತ್, ಜಿಲ್ಲಾ ಶುಶ್ರೂಷಕ ಅಧಿಕಾರಿ ಶಾಂತಮ್ಮ, ಲಯನ್ಸ್ ಸಂಸ್ಥೆಯ ಗಿರೀಶ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಶೇಷಾದ್ರಿಪುರಂ ರಾಯರ ಮಠದಲ್ಲಿ ಗುರುಗಳ ಪಟ್ಟಾಭಿಷೇಕ

**ಬೆಂಗಳೂರು :** ಶೇಷಾದ್ರಿಪುರದ ಪ್ಲಾಟ್ ಫಾರಂ ರಸ್ತೆಯಲ್ಲಿರುವ (ಮಂತ್ರಿ ಮಾಲ್ ಮೆಟ್ರೋ ರೈಲ್ವೆ ನಿಲ್ದಾಣದ ಎದುರು) ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಮಾರ್ಚ್ 11 ರಿಂದ 16ರ ವರೆಗೆ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಪಟ್ಟಾಭಿಷೇಕ ಮತ್ತು ವರ್ಧಂತ್ಯೋತ್ಸವ ಸಮಾರಂಭವನ್ನು ಆಯೋಜಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ : ಶ್ರೀಮದ್ಭಾಗವತಪ್ರವಚನ : ಮಾರ್ಚ್ 11 ರಿಂದ 16 ಪ್ರತಿದಿನ ಸಂಜೆ 6-00 ಗಂಟೆಗೆ ಮ||ಶಾ||ಸಂ|| ಶ್ರೀ ಉಡುಪಿ ಕೃಷ್ಣಾಚಾರ್ಯರಿಂದ ಶ್ರೀಮದ್ಭಾಗವತ ಪ್ರವಚನ. ಭಜನಾಮೃತ: ಪ್ರತಿದಿನ ಸಂಜೆ 5-00 ರಿಂದ 6-00. ಮಾರ್ಚ್ 11 : ಶ್ರೀ ವಿಜಯ ವಿಠಲ ಭಜನಾ ಮಂಡಳಿ (ವಿದ್ಯಾರಣ್ಯಪುರ), ಮಾರ್ಚ್ 12 : ಅಂಭ್ರಣಿ ಭಜನಾ ಮಂಡಳಿ (ರಾಜಾಜಿನಗರ), ಮಾರ್ಚ್ 13 : ಅಲಕನಂದ ಭಜನಾ ಮಂಡಳಿ (ಬಸವೇಶ್ವರನಗರ), ಮಾರ್ಚ್ 14 : ರುಕ್ಮಿಣಿ ಮಹಿಳಾ ಸಂಘ (ರಾಜಾಜಿನಗರ), ಮಾರ್ಚ್ 15 : ಶ್ರೀ ವಿಜಯ ವಿಠಲ ಭಜನಾ ಮಂಡಳಿ (ಈಜುಕೊಳದ ಬಡಾವಣೆ). ಹರಿನಾಮಸಂಕೀರ್ತನೆ : ಮಾರ್ಚ್ 16, ಶನಿವಾರ ಸಂಜೆ 7-00ಕ್ಕೆ ಹರಿನಾಮ ಸಂಕೀರ್ತನೆ : ಗಾಯನ : ಶ್ರೀಮತಿ ಸುಷ್ಮಾ ಶ್ರೇಯಸ್, ಕೀ-ಬೋರ್ಡ್ : ಶ್ರೀ ಅಮಿತ್ ಶರ್ಮಾ, ತಬಲಾ : ಶ್ರೀ ಸರ್ವೋತ್ತಮ. ಈ ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಹಾಗೂ ಹರಿವಾಯುಗಳ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಮಠದ ಪದಾಧಿಕಾರಿಗಳು ವಿನಂತಿಸಿದ್ದಾರೆ.

# ಪೋಲಿಯೋ ಲಸಿಕೆ ಅಭಿಯಾನ

**ವಿಜಯಪುರ:** ರಾಜ್ಯಾದ್ಯಂತ ಮಾರ್ಚ್ 3 ರಿಂದ 6ರವರೆಗೆ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಮಾರ್ಚ್ 3 ಪೋಲಿಯೋ ಭಾನುವಾರವಾಗಿ ಸರಕಾರ ಘೋಷಣೆ ಮಾಡಿದೆ ಎಂದು ಕೋರಮಂಗಲ ಗ್ರಾಮ ಪಂಚಾಯಿತಿ ಸದಸ್ಯರಾದ ದಂಡಿಗಾನಹಳ್ಳಿ ದೇವರಾಜ್ ಹೇಳಿದರು.

ವಿಜಯಪುರ ಹೋಬಳಿಯ ದಂಡಿಗಾನಹಳ್ಳಿ ಗ್ರಾಮದಲ್ಲಿ ಆರೋಗ್ಯ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ವತಿಯಿಂದ ಅಂಗನವಾಡಿ ಕೇಂದ್ರದಲ್ಲಿ ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ದೇಶದಲ್ಲಿ ಪೋಲಿಯೋಹನಿ ನೀಡಲು ಪ್ರಾರಂಭವಾಗಿ ಹತ್ತಾರು ವರ್ಷಗಳು ಕಳೆದಿದ್ದು ದೇಶದಲ್ಲಿ ಯಾವುದೇ ಪೋಲಿಯೋ ಪ್ರಕರಣಗಳು ಕಾಣದಿದ್ದರೂ ಮುಂದಿನ ದಿನಗಳಲ್ಲಿ ಪೋಲಿಯೋ ಬರಬಾರದೆನ್ನುವ ಕಾರಣಕ್ಕಾಗಿ ಪೋಲಿಯೋ ಹನಿಗಳನ್ನು ಐದು ವರ್ಷದ ಒಳಗಿನ ಮಕ್ಕಳಿಗೆ ಕೊಡಿಸಬೇಕೆಂದು 5 ವರ್ಷದೊಳಗಿನ ಯಾವುದೇ ಮಗು ಲಸಿಕೆಯಿಂದ ವಂಚಿತವಾಗಂತೆ ಅಧಿಕಾರಿಗಳು ಆರೋಗ್ಯ ಇಲಾಖೆ ಮತ್ತು ಜನಪ್ರತಿನಿಧಿಗಳು ಕ್ರಮ ವಹಿಸಬೇಕು ಎಂದು ಹೇಳಿದರು. ಅಂಗನವಾಡಿ ಕಾರ್ಯಕರ್ತೆ ಮೇರಿ, ಆಶಾ ಕಾರ್ಯಕರ್ತೆ ಸವಿತಾ, ಆರೋಗ್ಯ ಇಲಾಖೆಯ ಮಮತಾ ಮತ್ತಿತರರು ಭಾಗವಹಿಸಿದ್ದರು.



# ಸಾಗಡೆ ಡೈರಿ ಅಧ್ಯಕ್ಷರಾಗಿ ಕೃಷ್ಣಶೆಟ್ಟಿ, ಉಪಾಧ್ಯಕ್ಷರಾಗಿ ನಂಜುಂಡನಾಯಕ ಆಯ್ಕೆ

**ಚಾಮರಾಜನಗರ:** ತಾಲೂಕಿನ ಸಾಗಡೆ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಬಿಜೆಪಿ ಬೆಂಬಲಿತ ಕೃಷ್ಣಶೆಟ್ಟಿ, ಉಪಾಧ್ಯಕ್ಷ ರಾಗಿ ಕಾಂಗ್ರೆಸ್ ಬೆಂಬಲಿತ ನಂಜುಂಡ ನಾಯಕ ಅವಿರೋಧ ವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಕಚೇರಿಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕೃಷ್ಣಶೆಟ್ಟಿ, ಉಪಾಧ್ಯಕ್ಷ ಸ್ಥಾನಕ್ಕೆ ನಂಜುಂಡ ನಾಯಕ ನಾಮಪತ್ರ ಸಲ್ಲಿಸಿದರು ಈ ಎರಡು ಸ್ಥಾನ ಗಳಿಗೂ ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣೆ ಅಧಿಕಾರಿ ವಿ.ಹೇಮಂತ್ ಕುಮಾರ್ ನೂತನ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯನ್ನು ಘೋಷಿಸಿದರು. ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೃಷ್ಣ, ನಿರ್ದೇಶಕರಾದ ನಂಜುಂಡನಾಯಕ,ಮಂಜು, ನಾಗಮ್ಮ, ಪದ್ಮ, ಪುಟ್ಟಮ್ಮ, ಬಿ. ಶಿವಲಿಂಗಪ್ಪ, ಪ್ರಭುಸ್ವಾಮಿ, ಮಹದೇವಶೆಟ್ಟಿ, ಬಿ.ಬಸವಶೆಟ್ಟಿ, ನಂಜಶೆಟ್ಟಿ ಭಾಗವಹಿಸಿದ್ದರು.. ನೂತನ ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾದ ಕೃಷ್ಣಶೆಟ್ಟಿ, ನಂಜುಂಡನಾಯಕ ಅವರನ್ನು ಜಿಲ್ಲಾ ಬಿಜೆಪಿ ಯುವ ಮೋರ್ಚಾದ ಕಾರ್ಯಕಾರಿಣಿ ಸದಸ್ಯ ಗುರುಪ್ರಸಾದ್ ಎಸ್, ಗ್ರಾ.ಪಂ.ಸದಸ್ಯರಾದ ರವಿಕುಮಾರ್, ದೀಪು, ಮುಖಂಡ ತಿರುಪತಿನಾಯಕ, ವೆಂಕಟರಾಮನಾಯಕ, ನಂಜಶೆಟ್ಟಿ ಹಾಜರಿದ್ದರು.




# ನ್ಯಾಷನಲ್ ಕಾಲೇಜು ಮೈದಾನದಲ್ಲಿ ನಮ್ಮ ಸರಸ್ ಮೇಳ-2024

**ಬೆಂಗಳೂರು:** ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ವತಿಯಿಂದ ಮಹಿಳೆಯರ ಸಬಲೀಕರಣ, ಸ್ವಾವಲಂಬನೆ ದೃಷ್ಟಿಯಿಂದ ರಾಜ್ಯ ಸರ್ಕಾರವು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು. ಈ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಮಹಿಳೆಯರ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ ಬೆಂಗಳೂರು ನಗರದ ನ್ಯಾಷನಲ್ ಕಾಲೇಜು ಮೈದಾನದಲ್ಲಿ 'ನಮ್ಮ ಸರಸ್ ಮೇಳ-2024' ಹಮ್ಮಿಕೊಳ್ಳಲಾಗಿದೆ.

ಬೃಹತ್ ವಸ್ತುಪ್ರದರ್ಶನ ಮತ್ತು ಮಾರಾಟಕ್ಕಾಗಿ 'ನಮ್ಮ ಸರಸ್ ಮೇಳ'ವು ಫೆಬ್ರವರಿ 29ರಿಂದ ಆರಂಭವಾಗಿದ್ದು ಮಾರ್ಚ್ 09ರವರೆಗೆ ಹತ್ತು ದಿನಗಳ ಕಾಲ ನಡೆಯಲಿದೆ. ಈ ಮೇಳವನ್ನು ಮೂರನೇ ಬಾರಿಗೆ ಹಮ್ಮಿಕೊಳ್ಳಲಾಗುತ್ತಿದೆ. ಈ ಮೇಳದಲ್ಲಿ ದೇಶದ 250 ಸ್ವಸಹಾಯ ಗುಂಪುಗಳು ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದಾರೆ.

ಬೆಂಗಳೂರಿನಲ್ಲಿ ಆಯೋಜಿಸಿರುವ ನಮ್ಮ ಸರಸ್ ಮೇಳಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ಸಾರ್ವಜನಿಕರು ಸ್ವ-ಸಹಾಯ ಮಹಿಳೆಯರು ತಯಾರು ಮಾಡಿರುವ ಉತ್ಪನ್ನಗಳನ್ನು ವೀಕ್ಷಿಸಬಹುದು ಮತ್ತು ಖರೀದಿಸಬಹುದಾಗಿದೆ.

ದೇಶದ ವಿವಿಧ ರಾಜ್ಯಗಳಿಂದ ಹಾಗೂ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಿಂದ ತನ್ನದೇ ಕಲೆ, ಕೌಶಲ್ಯಗಳ ಮೂಲಕ ತಯಾರಾಗುವ ಆಟದ ಸಾಮಾನುಗಳು, ಮರದ ಗೊಂಬೆಗಳು, ಸೀರೆಗಳು, ಆಕ?ಣೆಯ ಬಟ್ಟೆಗಳು, ಕಸೂತಿಗಳು, ನಾರಿನ ಉತ್ಪನ್ನದ ವಸ್ತುಗಳು, ಮಸಾಲ ಪದಾರ್ಥಗಳು, ಸಿರಿಧಾನ್ಯ ಉತ್ಪನ್ನಗಳು, ಮೌಲ್ಯವರ್ಧಿತ ಕರಾವಳಿ ಉತ್ಪನ್ನಗಳು, ಬಾಳೆ ನಾರಿನಿಂದ ಉತ್ಪಾದಿಸಿದ ಉತ್ಪನ್ನಗಳು, ಗೃಹಾಲಂಕಾರಿಕ ವಸ್ತುಗಳು, ಆಯುರ್ವೇದ ಔ?ಧಿಗಳು, ಪಾರಂಪರಿಕ ವಸ್ತುಗಳು, ಗೃಹೋಪಯೋಗಿ ವಸ್ತುಗಳು, ನವೀನ ವಿನ್ಯಾಸದ ಆಭರಣಗಳು ಸೇರಿದಂತೆ ವಿವಿಧ ಬಗೆಯ ತಿಂಡಿ-ತಿನಿಸುಗಳು, ಈ ಮೇಳದಲ್ಲಿ ಮಾರಾಟ ಮಾಡಲಾಗುತ್ತಿದೆ.

ಪಶ್ಚಿಮ ಬಂಗಾಳ, ತಮಿಳುನಾಡು, ಆಂಧ್ರ ಪ್ರದೇಶ, ಮಹಾರಾಷ್ಟ್ರ ಸೇರಿದಂತೆ ಕರಕುಶಲ ಉದ್ಯಮದ ವಸ್ತುಗಳು, ವಿವಿಧ ಖಾದ್ಯಗಳು, ಆಹಾರ ಮೌಲ್ಯವರ್ಧಕ ವಸ್ತುಗಳ ಮಳಿಗೆಗಳು ಇದ್ದು, ಸಾಂಪ್ರದಾಯಕ ಕಲೆಗಳಾದ ಕಸೂತಿ, ಮೇಕೆ ಚರ್ಮದ ಮೇಲಿನ ಆಕರ್ಷಕ ಬಣ್ಣದ ಚಿತ್ತಾರಗಳು, ಬಿದಿರಿನಿಂದ ಮೂಡಿಬಂದ ಕಲಾಕೃತಿಗಳು ಇಳಕಲ್ ಸೀರೆ, ರೇಷ್ಮೆ ಸೀರೆ, ಉತ್ತರ ಕರ್ನಾಟಕದ ಕುರಿ ಉಣ್ಣೆಯ ಉತ್ಪನ್ನಗಳಾದ ಶಾಲು, ಟೋಪಿ ಮತ್ತು ಇತರೆ ಪದಾರ್ಥಗಳು ಮನಸೆಳೆಯುತ್ತಿದೆ.

ಮೇಳದಲ್ಲಿ ವಿವಿಧ ರಾಜ್ಯಗಳು ಮತ್ತು ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಪ್ರಸಿದ್ದಿ ಹೊಂದಿರುವ ಖಾದ್ಯಗಳ ಪ್ರದರ್ಶನ ಮಾಡಲಾಗುತ್ತಿದ್ದು, ಇದಕ್ಕಾಗಿ ಪ್ರತ್ಯೇಕ ಮಳಿಗೆಗಳನ್ನು ಸ್ಥಾಪಿಸುವ ಮೂಲಕ ಜನತೆಗೆ ವೈವಿಧ್ಯಮಯ ತಿಂಡಿ ತಿನಿಸುಗಳ ರುಚಿ ಸವಿಯುವಂತೆ ಮಾಡಲಾಗಿದೆ.

ಮಾರ್ಚ್ 04ರಂದು ಎನ್‌ಆರ್‌ಎಲ್‌ಎಂ ವತಿಯಿಂದ ಉತ್ಪನ್ನಗಳ ಮೌಲ್ಯ ಮತ್ತು ಸರಪಳಿ ವಿಧಾನಗಳ ಬಗ್ಗೆ ಶಿಬಿರ ಏರ್ಪಡಿಸಲಾಗಿದೆ. ಇದರೊಂದಿಗೆ, ಪೂರ್ವ ವಲಯ ಸ್ವ-ಸಹಾಯ ಗುಂಪುಗಳ ಸದಸ್ಯರು ಹಾಗೂ ಎನ್‌ಆರ್‌ಎಲ್ ಎಂ ತಂಡವು ಫ್ಯಾಷನ್ ಶೋ, ಮೈಮ್, ಜಾನಪದ ನೃತ್ಯಗಳ ಪ್ರದರ್ಶನ ನೀಡಲಿದ್ದಾರೆ.

ಮಾರ್ಚ್ 05ರಂದು ಉತ್ಪನ್ನಗಳ ಸಿದ್ಧಪಡಿಸುವಿಕೆ ವಿಧಾನಗಳು, ಬ್ರಾಂಡಿಂಗ್ ಹಾಗೂ ಮಾರುಕಟ್ಟೆ ವಿಸ್ತರಣೆ ಮತ್ತು ಅಭಿವೃದ್ಧಿಯ ಬಗ್ಗೆ ನ್ಯಾನೋ ಮೀಡಿಯಾ ಮತ್ತು ಎಎನ್‌ಟಿಎಸ್ ಸ್ಕಿಲ್ ಸಂಸ್ಥೆ ನಡೆಸಿಕೊಡಲಿದೆ. ಫ್ಯಾ?ನ್ ಶೋ. ಮೈಮ್, ಜಾನಪದ ನೃತ್ಯವನ್ನು ಸ್ವ-ಸಹಾಯ ಗುಂಪುಗಳ ಮಹಿಳಾ ಸದಸ್ಯರು ಮತ್ತು ಇಂಡಿಯನ್ ಇನ್ಸ್ಟಿಟ್ಯೂಟ್ ಫ್ಯಾಷನ್ ಸಂಸ್ಥೆಯವರು ಪ್ರದರ್ಶನ ನೀಡಲಿದ್ದಾರೆ.

ಮಾರ್ಚ್ 06ರಂದು ಪಶುಪಾಲನೆ ಜೀವನೋಪಾಯದ ಸುಸ್ಥಿರ ಬದುಕು ಮತ್ತು ಸಮುದಾಯದ ಸಹಭಾಗಿತ್ವದ ಬಗ್ಗೆ ತರಬೇತಿ ನೀಡಲಾಗುತ್ತದೆ. ಆರ್.ವಿ. ಪದವಿ ಕಾಲೇಜು ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ ನೀಡಲಿದ್ದಾರೆ.

ಮಾರ್ಚ್ 07ರಂದು ಬ್ಯಾಂಕಿಂಗ್ ವ್ಯವಹಾರದ ಬಗ್ಗೆ, ಹಣಕಾಸು ನಿರ್ವಹಣೆ ಮತ್ತು ವಿಧಾನಗಳ ಬಗ್ಗೆ ಎಸ್‌ಆರ್‌ಎಲ್‌ಎಂ ತಂಡ ಹಾಗೂ ಬ್ಯಾಂಕ್ ಮುಖ್ಯಸ್ಥರು ನಡೆಸಿಕೊಡಲಿದ್ದಾರೆ. ರಾಜೀವ್ ಗಾಂಧಿ ನರ್ಸಿಂಗ್ ಕಾಲೇಜು ಮತ್ತು ವೈದ್ಯಕೀಯ ಸಂಸ್ಥೆಯ ಫ್ಯಾಷನ್ ವಿಭಾಗದವರು ಫ್ಯಾಷನ್ ಶೋ, ಜಾನಪದ ಪ್ರದರ್ಶನ ನಡೆಯಲಿದೆ.

ಮಾರ್ಚ್ 08ರಂದು ಆನ್‌ಲೈನ್ ಮಾರುಕಟ್ಟೆ, ವಹಿವಾಟು, ಉತ್ಪನ್ನಗಳ ಆಕರ್ಷಕ ಮಾರಾಟದ ಬಗ್ಗೆ ಸಂವಾದ ಏರ್ಪಡಿಸಲಾಗಿದೆ. ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಉಡುಪಿ ಸ್ವ-ಸಹಾಯ ಗುಂಪುಗಳ ಮಹಿಳೆಯರು ಯಕ್ಷಗಾನ, ಹುಲಿ ಕುಣಿತ, ಕಂಗಿಳು, ಸಂಗೀತ ಕಾರ್ಯಕ್ರಮಗಳನ್ನು ನಡೆಸಿಕೊಡಲಿದ್ದಾರೆ. ಮಾರ್ಚ್ 09ರಂದು ಸಮಾರೋಪ ಸಮಾರಂಭ ಹಾಗೂ ಪ್ರಶಸ್ತಿಗಳ ವಿತರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅಭಿಯಾನದ ನಿರ್ದೇಶಕರು ರಾಷ್ಟ್ರೀಯ ಜೀವನೋಪಾಯ ಅಭಿಯಾನ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ವಿಧಾನಸಭೆ ಉಪಸಭಾಧ್ಯಕ್ಷ ರುದ್ರಪ್ಪ ಮಾನಪ್ಪ ಲಮಾಣಿ ಭರವಸೆ

# ಲಂಬಾಣಿ ಮಕ್ಕಳಿಗೆ ಉಚಿತ ವಸತಿ ಶಾಲೆ

**ಹುಳಿಯಾರು:** ಲಂಬಾಣಿ ಸಮುದಾಯ ಮಕ್ಕಳ ಶೈಕ್ಷಣಿಕ ಭವಿಷ್ಯದ ದೃಷ್ಟಿಯಿಂದ ಸೇವಾಲಾಲ್ ಜನ್ಮಸ್ಥಳವಾದ ಶಿವಮೊಗ್ಗ ಜಿಲ್ಲೆ ಸೂರಗೊಂಡನಕೊಪ್ಪದಲ್ಲಿ 15 ಎಕರೆ ಜಾಗದಲ್ಲಿ 41 ಕೋಟಿ ರೂ. ವೆಚ್ಚದಲ್ಲಿ ಸರ್ಕಾರದಿಂದ ಉಚಿತ ವಸತಿ ಶಾಲೆ ಆರಂಭಿಸುವುದಾಗಿ ಕರ್ನಾಟಕ ವಿಧಾನಸಭೆ ಉಪಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಭರವಸೆ ನೀಡಿದರು.



ಚಿಕ್ಕನಾಯಕನಹಳ್ಳಿ ತಾಲೂಕು ಶ್ರೀ ಸೇವಾಲಾಲ್ ಮರಿಯಮ್ಮದೇವಿ ತಾಂಡಾಭಿವೃದ್ಧಿ ಟ್ರಸ್ಟ್ ವತಿಯಿಂದ ಹುಳಿಯಾರಿನ ಎಂಪಿಎಸ್ ಆವರಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 285 ನೇ ಶ್ರೀ ಸೇವಾಲಾಲ್ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಮ್ಮ ಧನಾತ್ಮಕ ಚಿಂತನೆಯಿಂದ ಸಮುದಾಯದಲ್ಲಿ ಜಾಗೃತಿ ಮೂಡಿಸಿದ ಸಂತ ಸೇವಾಲಾಲ್ ಜಯಂತಿಯನ್ನು ಆಚರಿಸುವ ಮೂಲಕ ನಮ್ಮ ಸಮುದಾಯದವರೆಲ್ಲರನ್ನು ಒಗ್ಗೂಡಿಸಲು ಸಾಧ್ಯವಾಗುತ್ತಿದೆ. ಸರ್ಕಾರದಿಂದ ಸೇವಾಲಾಲ್ ಜಯಂತಿ ಆಚರಿಸಲು ನಾನು ಸಚಿವನಾಗಿ ಆದೇಶ ಮಾಡಿಸಿದ್ದೆ ಎಂದ ಅವರು ಶಬರಿಮಲೆಯಂತೆ ಇಲ್ಲೂ ಕೂಡ ಮಾಲೆ ಧರಿಸುವ ಪರಿಪಾಠವಿದ್ದು, ಈ ಮಾಲಾಧಾರಣ ಸಮಯದಲ್ಲಿ ಮದ್ಯಪಾನದಂತಹ ದುಶ್ಚಟಗಳನ್ನು ಬಿಡುವುದರಿಂದ ನಂತರದ ದಿನಗಳಲ್ಲೂ ಸಹ ದುಶ್ಚಟಗಳಿಂದ ದೂರವಿರಲು ಸಾಧ್ಯವಾಗಿದೆ ಎಂದರು.

ಸಮಾರಂಭದಲ್ಲಿ ನಡೆದ ಪ್ರತಿಭಾ ಪುರಸ್ಕಾರದಲ್ಲಿ ಶೇಕಡ 90 ಕ್ಕೂ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳನ್ನು ಪುರಸ್ಕರಿಸಿರುವುದು ಸಂತಸದ ವಿಚಾರವಾಗಿದ್ದು, ಸಮುದಾಯದಲ್ಲಿ ಬಡತನವಿದ್ದರು, ಏನೇ ಸಮಸ್ಯೆ ಇದ್ದರೂ ಸಹ ಮಕ್ಕಳನ್ನು ಚೆನ್ನಾಗಿ ಓದಿಸಿ ಆ ಮೂಲಕ ಅವರನ್ನು ಸಮಾಜದ ಆಸ್ತಿಯನ್ನಾಗಿ ಮಾಡುತ್ತಿರುವುದು ಶ್ಲಾಘನೀಯ ವಿಚಾರವಾಗಿದ್ದು, ಯಾವುದೇ ಕಾರಣದಿಂದಲೂ ಮಕ್ಕಳ ಶಿಕ್ಷಣವನ್ನು ಕುಂಠಿತಗೊಳಿಸಬಾರದು, ಶಿಕ್ಷಣ ಮಾತ್ರದಿಂದಲೇ ಅಭಿವೃದ್ಧಿಯ ಸಾಧ್ಯ ಎಂದರು

ಸರ್ಕಾರದ ನವದೆಹಲಿ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರು ಸೇವಾಲಾಲ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ ಕಳ್ಳಂಬೆಳ್ಳ ಕ್ಷೇತ್ರದಲ್ಲಿ ನಾನು ಎದುರಿಸಿ 6 ಚುನಾವಣೆಯಲ್ಲೂ ತಾಲೂಕಿನ ಲಂಬಾಣಿ ಸಮುದಾಯದವರು ನನ್ನ ಜೊತೆ ಇದ್ದರು. ಹಾಗಾಗಿಯೇ ಶಿರಾದಲ್ಲಿ ಸುಸಜ್ಜಿದ ಸೇವಾಲಾಲ್ ಭವನ ನಿರ್ಮಾಣ ಮಾಡಿದ್ದೇನೆ. ಹುಳಿಯಾರು ಸುತ್ತಮುತ್ತಲೂ ಹೆಚ್ಚು ಲಂಬಾಣಿಗರಿರುವುದರಿಂದ ಇಲ್ಲಿಯೂ ಸಹ ಮುಖ್ಯಮಂತ್ರಿಗಳ ಮನವೊಲಿಸಿ 1 ಎಕರೆ ಜಾಗದಲ್ಲಿ ಸೇವಾಲಾಲ್ ಭವನ ನಿರ್ಮಿಸಿ ನಮ್ಮ ಅವಧಿಯಲ್ಲೇ ಲೋಕಾರ್ಪಣೆ ಮಾಡೋಣ ಎಂದು ಭರವಸೆ ನೀಡಿದರು.

> “ಲಂಬಾಣಿಗರು ಈಗಲೂ ತಮ್ಮ ಪೂರ್ವಿಕರ ವಿಶಿಷ್ಠ ಉಡುಗೆ ತೊಡುಗೆ, ನೃತ್ಯ, ಕಲೆಗಳನ್ನು ರಕ್ಷಿಸಿಕೊಂಡು ಬಂದಿದ್ದಾರೆ. ಈ ಕಲೆಯನ್ನು ಮುಂದಿನ ಪೀಳಿಗೆಗೂ ಉಳಿಸಿ ಬೆಳೆಸುವ ಹೊಣೆ ಯುವ ಜನತೆಯ ಮೇಲಿದೆ. ಹಾಗಾಗಿ ನಮ್ಮದಲ್ಲದ ಡಿಜೆ ಸಂಸ್ಕೃತಿಯನ್ನು ತಮ್ಮ ಕಾರ್ಯಕ್ರಮದಲ್ಲಿ ಬಳಕೆ ಮಾಡದೆ ನಮ್ಮ ಕಲೆಯನ್ನೇ ಪ್ರದರ್ಶಿಸಲು ಒತ್ತು ಕೊಡಬೇಕಿದೆ. ಪೋಷಕರು ತಮ್ಮ ಮಕ್ಕಳನ್ನು ಐಎಎಸ್, ಐಪಿಎಸ್ ಅಧಿಕಾರಿಗಳನ್ನು ಮಾಡುವ ಗುರಿ ಇಟ್ಟುಕೊಂಡು ಓದಿಸಬೇಕು.
>
> **ಶ್ರೀ ಶಿವಪ್ರಕಾಶ ಮಹಾರಾಜ್ ಸ್ವಾಮೀಜಿ** ಕೊಟ್ಟೂರು ಬಂಜಾರ ಶಕ್ತಿಪೀಠ

> “ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಈ ಭಾಗದಲ್ಲಿ ಸೇವಾಲಾಲ್ ಭವನ ನಿರ್ಮಿಸುವ ಉದ್ದೇಶ ಹೊಂದಿರುವುದು ಶ್ಲಾಘನೀಯ. ಈ ನಿಟ್ಟನಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಅಗತ್ಯವಿರುವ ಒಂದೂವರೆ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿಸಲು ಮುಂದಾಗುತ್ತೇನೆ ಇಲ್ಲಿನ ಸಾಕಷ್ಟು ತಾಂಡದ ಯಜಮಾನರುಗಳಿಂದ ದೇವಾಲಯ ನಿರ್ಮಾಣಕ್ಕೆ ಅನುದಾನ ಕೋರಿರುವುದು ಗಮನಕ್ಕೆ ಬಂದಿದ್ದು ಈ ಬಗ್ಗೆ ಸಂಬಂಧಪಟ್ಟ ಸಚಿವರ ಬಳಿ ಮಾತನಾಡಿ, ಹಣ ಬಿಡುಗಡೆಗೊಳಿಸುವ ವ್ಯವಸ್ಥೆ ಮಾಡಿಸುತ್ತೇನೆ.
>
> **ರುದ್ರಪ್ಪ ಮಾನಪ್ಪ ಲಮಾಣಿ** ಉಪಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ

> “ತಾಲೂಕಿನಲ್ಲಿ 56 ಕ್ಕೂ ಹೆಚ್ಚು ತಾಂಡಗಳಿದ್ದು ಸಾಕಷ್ಟು ಜನಸಂಖ್ಯೆ ಇರುವ ಸಮುದಾಯದವರು, ಭಿನ್ನಾಭಿಪ್ರಾಯಕ್ಕೆ ಅವಕಾಶ ಮಾಡಿಕೊಡದೆ ಸಮಾಜದ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಒಗ್ಗಟ್ಟು ಪ್ರದರ್ಶಿಸಿದಲ್ಲಿ, ಸರ್ಕಾರದಿಂದ ಸಾಕಷ್ಟು ಸವಲತ್ತು ಪಡೆಯಬಹುದಾಗಿದೆ. ಹುಳಿಯಾರಿನಲ್ಲಿ ಅಗತ್ಯ ಸರ್ಕಾರಿ ಭೂಮಿ ಗುರ್ತಿಸಿದರೆ ಸಮುದಾಯ ಭವನ ನಿರ್ಮಿಸಲು ಸರ್ಕಾರದಿಂದ 1 ಕೋಟಿ ಅನುದಾನ ಕೊಡಿಸುವ ಭರವಸೆಯನ್ನು ಟಿ.ಬಿ.ಜಯಚಂದ್ರ ನೀಡಿದ್ದು, ಇದಕ್ಕೆ ತಾವು ಕೂಡ ಕೈಜೋಡಿಸಲಿದ್ದು , ಆ ಬಗ್ಗೆ ಸಮುದಾಯದವರು ಮುಂದುವರೆಯಬೇಕು.
>
> **ಕೆ.ಎಸ್.ಕಿರಣ್ ಕುಮಾರ್** ಮಾಜಿ ಶಾಸಕರು, ಹುಳಿಯಾರು.

ಶಾಸಕ ಸಿ.ಬಿ.ಸುರೇಶ್‌ಬಾಬು ಅವರು ಮಾತನಾಡಿ ತಾಲೂಕಿನ ಆಲದಕಟ್ಟೆಯಲ್ಲಿ ಮನೆಮನೆಗೂ ಸರ್ಕಾರಿ ನೌಕರರಿದ್ದಾರೆ. ಅವರಂತೆ ಎಲ್ಲಾ ತಾಂಡ್ಯದ ಮಕ್ಕಳು ಮೊದಲು ಶೈಕ್ಷಣಿಕವಾಗಿ ಮುಂದೆ ಬಂದು ನಂತರ ಉದ್ಯೋಗ, ಆರ್ಥಿಕ, ರಾಜಕೀಯ ಕ್ಷೇತ್ರದಲ್ಲೂ ಮುಂದೆ ಬರಬೇಕಿದೆ. ಎಲ್ಲಾ ಸಣ್ಣಪುಟ್ಟ ಸಮಾಜದವರೂ ರಾಜಕೀಯವಾಗಿ ಬೆಳೆಯಬೇಕೆಂದು ಈ ಹಿಂದೆ ನಾನು ಸೋತಿದ್ದರೂ ಸಹ ಕುಮಾರಸ್ವಾಮಿ ಅವರ ಬಳಿ ಹಠ ಮಾಡಿ ಲಂಬಾಣಿ ಸಮುದಾಯದ ರಘುನಾಥ್ ಅವರನ್ನು ಜಿಪಂ ಅಧ್ಯಕ್ಷರನ್ನಾಗಿ ಮಾಡಿದೆ. ಈಗ ಈ ಸಮುದಾಯದಲ್ಲಿ ಅನೇಕರು ಜಿಪಂ, ತಾಪಂ, ಗ್ರಾಪಂ ಸದಸ್ಯರಾಗಿರುವುದು ಸಂತೋಷದಾಯಕ ಎಂದರು.

ಚಿತ್ರದುರ್ಗದ ಬಂಜಾರಗುರುಪೀಠದ ಶ್ರೀ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಹಾಗೂ ಕೊಟ್ಟೂರು ಬಂಜಾರ ಶಕ್ತಿಪೀಠದ ಶ್ರೀ ಶಿವಪ್ರಕಾಶ ಮಹಾರಾಜ್ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು. ಮಾಜಿ ಶಾಸಕ ಕೆ.ಎಸ್.ಕಿರಣ್‌ಕುಮಾರ್, ಜಿಪಂ ಮಾಜಿ ಅಧ್ಯಕ್ಷ ಹಾಗೂ ಶ್ರೀ ಸೇವಾಲಾಲ್ ಮರಿಯಮ್ಮದೇವಿ ತಾಂಡಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಜಿ.ರಘುನಾಥ್, ಬೆಸ್ಕಾಂ ಎಇಇ ಎನ್ .ಬಿ.ಗವೀರಂಗಯ್ಯ, ಪಪಂ ಅಧ್ಯಕ್ಷ ಕೆಎಂಎಲ್ ಕಿರಣ್, ಸದಸ್ಯರಾದ ಮಂಜಾನಾಯ್ಕ, ಬೀಬೀ ಫಾತೀಮಾ, ಜಿಪಂ ಮಾಜಿ ಸದಸ್ಯೆ ಲೋಹಿತಾಬಾಯಿ ಇದ್ದರು.

# ಸಾಲೂರು ಶ್ರೀಗಳಾದ ಶಾಂತಮಲ್ಲಿಕಾರ್ಜುನ ಸ್ವಾಮಿ ದರ್ಶನಾಶೀರ್ವಾದ

**ಚಾಮರಾಜನಗರ:** ರಾಮನಗರ ಜಿಲ್ಲೆಯ ಕನಕಪುರ ಸಂಗಮದ ಕಾವೇರಿ ನದಿ ತೀರದಲ್ಲಿ ಪಾದಯಾತ್ರೆ ಬರುತ್ತಿರುವ ಮಲೆ ಮಹದೇಶ್ವರ ಭಕ್ತಾಧಿಗಳಿಗೆ ಸಾಲೂರು ಶ್ರೀಗಳಾದ ಶಾಂತಮಲ್ಲಿಕಾರ್ಜುನ ಸ್ವಾಮಿ ದರ್ಶನಾಶೀರ್ವಾದ ನೀಡಿ ಭಕ್ತರು ಜೋತೆ ನದಿ ದಡ ದಾಟಿ ಅಲ್ಲಿನ ವ್ಯವಸ್ಥೆಯನ್ನು ವೀಕ್ಷಿಸಿದರು.

ಪ್ರಕೃತಿ ಪ್ರತಿಯೊಬ್ಬ ಮನುಷ್ಯನ ಅಗತ್ಯಗಳನ್ನು ಪೂರೈಸುತ್ತದೆ ಅದರಂತೆ ''ಭೂಮಿಯು ಸುಂದರವಾದ ವಧುವಿನಂತೆ, ಅವಳ ಸೌಂದರ್ಯವನ್ನು ಹೆಚ್ಚಿಸಲು ಯಾವುದೇ ಮಾನವ ನಿರ್ಮಿತ ಆಭರಣಗಳ ಅಗತ್ಯವಿಲ್ಲ ಆದ್ದರಿಂದ ಮನುಷ್ಯರಾದ ನಾವುಗಳು ಪ್ರಕೃತಿಯನ್ನು ಆರಾಧಿಸಬೇಕು, ಪೂಜಿಸಬೇಕು, ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಮಲೆ ಮಹದೇಶ್ವರರ ಸನ್ನಿಧಾನಕ್ಕೆ ಲಕ್ಷಾಂತರ ಭಕ್ತರು ಪಾದಯಾತ್ರೆಯಲ್ಲಿ ಬರುತ್ತಿದ್ದಾರೆ ಪಾದಯಾತ್ರೆ ಮಾಡುವ ಮಾರ್ಗವೆಲ್ಲವೂ ಬೆಟ್ಟ ಗುಡ್ಡಗಳು ಅರಣ್ಯ, ಪ್ರದೇಶದ ನದಿಯಿಂದ ಆವೃತ್ತವಾಗಿದೆ ನಮ್ಮ ಪ್ರಕೃತಿನ್ನು ಸಂರಕ್ಷಿಸ ಬೇಕಾಗಿರುವುದು ನಮ್ಮೆಲ್ಲರ ಕರ್ತವ್ಯ ಆಹಾರ ಪದಾರ್ಥಗಳು ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡದೆ ಒಂದು ಕಡೆ ಹಾಕಿ ಸ್ವಚ್ಛತೆಯನ್ನು ಕಾಪಾಡಿ. ಈ ಸಾರಿ ಚಾಮರಾಜನಗರ , ರಾಮನಗರ ಜಿಲ್ಲಾಡಳಿತ, ಅರಣ್ಯ ಇಲಾಖೆಯು, ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದು ಭಕ್ತರಿಗೆ ಅನುಕೂಲವಾಗುವಂತೆ ವ್ಯವಸ್ಥೆ ಮಾಡಿರುವುದು ಶ್ಲಾಘನೀಯ, ಕನಕಪುರದ ಮಹದೇವನಾಯ್ಕ ಹಾಗೂ ಅನೇಕ ಭಕ್ತರ ಅಲ್ಲಲ್ಲಿ ದಾಸೋಹ ಮಜ್ಜಿಗೆ ಪಾನಕ ವ್ಯವಸ್ಥೆಯು ಅಚ್ಚುಕಟ್ಟಾಗಿದೆ. ಪಾದಯಾತ್ರೆಯಲ್ಲಿ ಬರುವ ಭಕ್ತಾದಿಗಳಿಗೆ ಪ್ರಾಧಿಕಾರವತಿಂದ ವಿಶೇಷ ದರ್ಶನ ವ್ಯವಸ್ಥೆ ಮಾಡಿರುವುದು ಸಂತೊಷ ಎಂದು ಹರ್ಷ ವ್ಯಕ್ತ ಪಡಿಸಿದರು.





ಪಲ್ಸ್ ಪೋಲಿಯೋ ಅಭಿಯಾನ

ಹುಳಿಯಾರು ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರದ ಪಲ್ಸ್ ಪೋಲೀಯೋ ಕಾರ್ಯಕ್ರಮವನ್ನು ತಾಲೂಕು ಆಡಳಿತಾಧಿಕಾರಿ ಡಾ.ಯಶವಂತ್ ಉದ್ಘಾಟಿಸಿದರು. ಆರೋಗ್ಯ ಶಿಕ್ಷಣಾಧಿಕಾರಿ ವೆಂಕಟರಾಮಯ್ಯ, ತಾಲೂಕು ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್, ಫಾರ್ಮಸಿ ಅಧಿಕಾರಿ ಮೆಹಬೂಬ್ ಷರೀಫ್ ಇದ್ದಾರೆ.

# 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಿ

**ವಿಜಯಪುರ:** ಭಾರತ ದೇಶದಲ್ಲಿ ಕಳೆದ ಮೂರು ನಾಲ್ಕು ವರ್ಷಗಳಿಂದ ಯಾವುದೇ ಪೋಲಿಯೋ ಪ್ರಕರಣ ಕಾಣದಿದ್ದು ಈಗಾಗಲೇ ಭಾರತ ದೇಶ ಪೋಲಿಯೋ ನಿರ್ಮೂಲನೆ ಗೊಂಡಿದೆ(ಯೆರಾಡಿಕೇಶನ್ ) ಎಂದು ಸರ್ಕಾರ ಘೋಷಿಸಿದ್ದು, ಮುಂದಿನ ಹಂತ ಸಂಪೂರ್ಣ ಪೋಲಿಯೋ ಮುಕ್ತ(ಟರ್ಮಿನೇಷನ್) ಎಂದು ಘೋಷಿಸಬೇಕಾಗಿದೆ ಎಂದು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಡಾ. ಶ್ರೀಧರ್ ತಿಳಿಸಿದರು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರೋಟರಿ ಸಂಸ್ಥೆ ಹಾಗೂ ಆರೋಗ್ಯ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಪೋಲಿಯೋ ಹನಿ ನೀಡುವ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಇದೇ ಸಂದರ್ಭದಲ್ಲಿ ಮಾತನಾಡಿದ ರೋಟರಿ ಸಂಸ್ಥೆಯ ಪಲ್ಸ್ ಪೋಲಿಯೋ ಚೇರ್ ಪರ್ಸನ್ ಬಸವರಾಜುರವರು ಮಾತನಾಡಿ 2011ರಲ್ಲಿ ಪಶ್ಚಿಮ ಬಂಗಾಳದಲ್ಲಿ ಕೊನೆ ಪ್ರಕರಣ ಕಂಡುಬಂದಿದ್ದು, ಮುಂದಿನ ಸಾಲಿನಲ್ಲಿ ಪಲ್ಸ್ ಪೋಲಿಯೋ ನಿರ್ಮೂಲನೆಗಾಗಿ, ಹೋರಾಟ ಪ್ರಾರಂಭವಾಗಿ ದಶಮಾನೋತ್ಸವ ಆಚರಿಸಬೇಕಾಗಿದೆ ಎಂದು ತಿಳಿಸಿದರು. ರೋಟರಿ ಸಂಸ್ಥೆ ಅಧ್ಯಕ್ಷರಾದ ಮಂಜುಳಾ ರವರು ಮಾತನಾಡಿ ಸರ್ಕಾರದೊಂದಿಗೆ ರೋಟರಿ ಸಂಸ್ಥೆಯು ಅಂತರರಾಷ್ಟ್ರೀಯ ರೋಟರಿ ನೆರವಿನೊಂದಿಗೆ ಪೋಲಿಯೋ ನಿರ್ಮೂಲನೆಯಲ್ಲಿ ತೊಡಗಿಕೊಂಡಿದ್ದು ವಿಶ್ವದಲ್ಲಿ ಆರೋಗ್ಯ ತರಲು ಎರಡು ಹನಿ ಪೋಲಿಯೋ ಹನಿಯನ್ನು ಮಕ್ಕಳಿಗೆ ಕೊಡಿಸುವಂಥವರಾಗಬೇಕೆಂದು ಇದಕ್ಕಾಗಿ ಕಳೆದ ಎರಡು ದಿನಗಳ ಮುನ್ನವೇ ರೋಟರಿ ಶಾಲಾ ಮಕ್ಕಳಿಂದ ಪಟ್ಟಣದ ಮುಖ್ಯಬೀದಿಗಳಲ್ಲಿ ಪೋಲಿಯೋ ನಿರ್ಮೂಲನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಎಂದು ತಿಳಿಸಿದರು.



ಪುರಸಭಾ ಅಧ್ಯಕ್ಷರಾದ ವಿಮಲಾ ಬಸವರಾಜುರವರು ಮಕ್ಕಳಿಗೆ ಪೋಲಿಯೋ ಹನಿ ನೀಡುವ ಮೂಲಕ ಚಾಲನೆ ನೀಡಿದರು. ಉಪಾಧ್ಯಕ್ಷ ಕೇಶವಪ್ಪ ಸಮುದಾಯ ಆರೋಗ್ಯ ಕೇಂದ್ರದ ವೈದ್ಯರುಗಳಾದ ಡಾ. ಉದಯ್, ನೇತ್ರ ತಜ್ಞರಾದ ವೀಣಾ, ಫಾರ್ಮಸಿಷ್ಟ ಕುಮುದ, ಬಿಂದು,ಲ್ಯಾಬ್ ಮಂಜುನಾಥ್ ಕಲಾ,ರತ್ನಮ್ಮ ಉಪಸ್ಥಿತರಿದ್ದರು.

## 2023-24 ಸಾಲಿನ ಪರಿಷ್ಕೃತ, 2024-25 ನೇ ಸಾಲಿನ 1.15 ಕೋಟಿ ರೂ.ಗಳ ಉಳಿತಾಯ ಬಜೆಟ್

# ಚಾಮರಾಜನಗರ ನಗರಸಭೆಯಲ್ಲಿ ಉಳಿತಾಯ ಬಜೆಟ್ ಮಂಡನೆ

**ಚಾಮರಾಜನಗರ:** ಚಾಮರಾಜನಗರ ನಗರಸಭೆ ಕಚೇರಿ ಸಭಾಂಗಣದಲ್ಲಿ ನಗರಸಭೆ ಆಡಳಿತಾಧಿಕಾರಿ, ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ 2023-24 ಸಾಲಿನ ಪರಿಷ್ಕೃತ, 2024-25 ನೇ ಸಾಲಿನ 1.15 ಕೋಟಿ ರೂ.ಗಳ ಉಳಿತಾಯ ಬಜೆಟ್ ಮಂಡಿಸಿದರು.

ಆಸ್ತಿ ತೆರಿಗೆ, ದಂಡ, ಉಪಕರ ಸಂಗ್ರಹ, ಶುಲ್ಕ, ಸಾರ್ವಜನಿಕ ಶೌಚಾಲಯಗಳ ಬಾಡಿಗೆ, ಘನತ್ಯಾಜ್ಯ ವಸ್ತು ನಿರ್ವಹಣಾಕರ, ಅಂಗಡಿ ಮಳಿಗೆಗಳ ಬಾಡಿಗೆ, ತರಕಾರಿ ಮಾರುಕಟ್ಟೆ ಶುಲ್ಕ, ಉದ್ಯಮ ಪರವಾನಗಿ, ಹೆಚ್ಚುವರಿ ಮುದ್ರಾಂಕ ಶುಲ್ಕ, ಖಾತೆ ಬದಲಾವಣೆ ಶುಲ್ಕಗಳು, ಜಾಹೀರಾತು ತೆರಿಗೆ ಶುಲ್ಕ, ಬಸ್ ನಿಲ್ದಾಣ ಪಾರ್ಕಿಂಗ್ ಶುಲ್ಕ ಸೇರಿದಂತೆ ಇತರೇ ಮೂಲಗಳಿಂದ ಪ್ರಸಕ್ತ ಸಾಲಿಗೆ 1286 ಲಕ್ಷ ರೂ.ಗಳ ಆದಾಯವನ್ನು ಕ್ರೋಡಿಕರಿಸಲು ಉದ್ದೇಶಿಸಲಾಗಿದೆ. ಎಸ್‌ಎಫ್ಸಿ ವಿಶೇಷ ಅನುದಾನ, ಎಸ್ಸಿಎಸ್ಟಿ, ಟಿಎಸ್ಪಿ, ಮುಕ್ತನಿಧಿ ಅನುದಾನ, ಕುಡಿಯುವ ನೀರು, 15 ನೇ ಹಣಕಾಸು ಆಯೋಗದ ಅನುದಾನ, ಸ್ವಚ್ಛಗೃಹ ಕಲಿಕಾ, ಕೇಂದ್ರ ಅನುದಾನ, ಸ್ವಚ್ಛ ಭಾರತ್ ಅನುದಾನ, ವಿದ್ಯುತ್ ಚಿತಾಗಾರ ನಿರ್ಮಾಣಕ್ಕೆ ವಿಶೇಷ ಅನುದಾನ 3,681 ಲಕ್ಷ ರೂ.ಗಳನ್ನು ಪ್ರಸಕ್ತ ಸಾಲಿಗೆ ಕೇಂದ್ರ ಹಾಗೂ ರಾಜ್ಯ ಸರಕಾರಗಳಿಂದ ನಿರೀಕ್ಷಿಸಲಾಗಿದೆ ಎಂದರು.

ನಗರದ ಎಲ್ಲಾ ವಾರ್ಡ್ಗಳಲ್ಲಿ ಬೀದಿ ದೀಪ ಅಳವಡಿಕೆ, ನಾಮಫಲಕ ಅಳವಡಿಕೆ, ರಸ್ತೆ ಬದಿ ಚರಂಡಿ, ಮಳೆ ನೀರು ಚರಂಡಿ ನಿರ್ಮಾಣ, ವಾಣಿಜ್ಯ ಸಂಕೀರ್ಣ ನಿರ್ಮಾಣ, ಸ್ಮಶಾನ, ಉದ್ಯಾನ ಅಭಿವೃದ್ಧಿ, ಒಳಚರಂಡಿ ಕಾಮಗಾರಿ ಯಂತ್ರೋಪಕರಣಗಳ ಖರೀದಿ, ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ 59.26 ಲಕ್ಷ ರೂ.ವೆಚ್ಚ ಮಾಡಲಾಗುತ್ತದೆ. ನಗರಸಭೆ ಸಿಬ್ಬಂದಿ ವೇತನ ಸೇರಿದಂತೆ ಇತರೇ ಕಾಮಗಾರಿಗಳಿಗೆ 58.11.73 ಲಕ್ಷ ರೂ.ವೆಚ್ಚ ಮಾಡಲಾಗುತ್ತದೆ ಎಂದರು.



### ಉದ್ದೇಶಿತ ಕಾಮಗಾರಿ

ಪ್ರಸಕ್ತ ಸಾಲಿನ ಬಜೆಟ್ ನಲ್ಲಿ ಐಡಿಎಂಎಸ್ಟಿ ಯೋಜನೆ ಮಳಿಗೆ ಬಾಡಿಗೆಯಿಂದ ಲಭ್ಯವಿರುವ 140 ಲಕ್ಷ, ನಗರಸಭೆ ಬಾಡಿಗೆಮಳಿಗೆಯಿಂದ ಲಭ್ಯವಿರುವ 35 ಲಕ್ಷ ಸೇರಿ 175 ಲಕ್ಷ ರೂ.ವೆಚ್ಚದಲ್ಲಿ ವಾಣಿಜ್ಯಸಂಕೀರ್ಣ ನಿರ್ಮಾಣ, ಚಾಮರಾಜನಗರ ಸಿಮ್ಸ್ ಬಳಿ ಎಸ್‌ಎಫ್ಸಿ ವಿಶೇಷ ಅನುದಾನ 250 ಲಕ್ಷ ರೂ. ವೆಚ್ಚದಲ್ಲಿ ವಿದ್ಯುತ್ ಚಿತಾಗಾರ ನಿರ್ಮಾಣ, ನಗರಸಭೆಯ ಎಲ್ಲ ವಾರ್ಡ್ಗಳಿಗೆ ನಾಮಫಲಕ ಅಳವಡಿಸಲು 40 ಲಕ್ಷ, ನಗರಸಭೆ ವ್ಯಾಪ್ತಿಯ 5 ಉದ್ಯಾನದ ಅಭಿವೃದ್ಧಿಗೆ 60 ಲಕ್ಷ ರೂ.ಗಳನ್ನು ಮೀಸಲಿಡಲಾಗುವುದು. ನಗರದ ಕ್ರೀಡಾಪಟುಗಳು ಹಾಗು ನಾಗರೀಕರ ಅನೂಕೂಲಕ್ಕಾಗಿ ಕ್ರೀಡಾ ಇಲಾಖೆಯಿಂದ ವಿಶೇಷ 3ಕೋಟಿ ಅನುದಾನ ಪಡೆದು, ಸೂಕ್ತ ಸ್ಥಳ ಗುರ್ತಿಸಿ, ಈಜುಕೊಳ ನಿರ್ಮಿಸಲಾಗುವುದು. ಪರಿಶಿಷ್ಟಜಾತಿ, ಪರಿಶಿಷ್ಟವರ್ಗದ ಜನರು ವಾಸಿಸುವ ವಾರ್ಡ್ಗಳಲ್ಲಿ ಡಿಜಿಟಲ್ ಗ್ರಂಥಾಲಯ ಆರಂಭಿಸಲು ಚಿಂತನೆ ನಡೆಸಿದ್ದೇವೆ ಎಂದು ತಿಳಿಸಿದರು. ಘನತ್ಯಾಜ್ಯ ನಿರ್ವಹಣೆಗೆ 15ನೇ ಹಣಕಾಸು ಯೋಜನೆಯಡಿ, 22 ಲಕ್ಷ ರೂ.15 ನೇ ಹಣಕಾಸು ಯೋಜನೆಯಡಿ, 22 ಲಕ್ಷರೂ.ವೆಚ್ಚದಲ್ಲಿ 2 ಟ್ರಾಕ್ಟರ್, ಟ್ರೇಲರ್, 42 ಲಕ್ಷ ರೂ. ವೆಚ್ಚದಲ್ಲಿ ಕಾಂಪ್ಯಾಕ್ಟರ್ ಖರೀದಿಸಲು ಅನುದಾನ ಮೀಸಲಿಡಲಾಗಿದೆ ಎಂದರು. ನಗರಸಭೆ ಬಜೆಟ್ ಮಂಡಿಸಿದ ನಗರಸಭೆ ಆಡಳಿತಾಧಿಕಾರಿ, ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರ ಬಜೆಟ್ ಬಗ್ಗೆ ನಗರಸಭೆ ಸದಸ್ಯರು ಮೆಚ್ಚುಗೆ ವ್ಯಕ್ತಪಡಿಸಿ. ಅನುಮೋದನೆ ನೀಡಿದರು.

### ಆದಾಯ ಕ್ರೋಡಿಕರಣಕ್ಕೆ ಹೆಚ್ಚು ಒತ್ತು ನೀಡಿ

ಚಾಮರಾಜನಗರ ನಗರಸಭೆ ಕಚೇರಿ ಸಭಾಂಗಣದಲ್ಲಿ ಶನಿವಾರ ನಡೆದ ಬಜೆಟ್ ಮಂಡನೆ ವೇಳೆ ನಗರಸಭೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆದಾಯದ ಕ್ರೋಡಿಕರಣಕ್ಕೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ನಗರಸಭೆ ಸದಸ್ಯರು ಆಗ್ರಹಿಸಿದರು. ಎಸ್ಡಿಪಿಐ ಸದಸ್ಯ ಮಹೇಶ್ ಲೋಕೋಪಯೋಗಿ ಇಲಾಖೆ, ಅರಣ್ಯ ಇಲಾಖೆ ವಸತಿಗೃಹ, ಪೋಲಿಸ್ ವಸತಿಗೃಹಗಳಿಂದ 5ರಿಂದ 10 ಕೋಟಿ ರೂ.ಬಾಕಿಬರಬೇಕು. ಅದರ ವಸೂಲಾತಿಗೆ ಕ್ರಮವಹಿಸಬೇಕು, ಕಾವೇರಿ ನೀರು ಸರಬರಾಜಾಗುವ ಮಾರ್ಗಮಧ್ಯದ ಗ್ರಾಮಗಳ ಜನರು ಕುಡಿಯುವ ನೀರು ತೆಗೆದುಕೊಳ್ಳುತ್ತಿದ್ದು, ಅವರಿಂದ ನೀರಿನಕರ ವಸೂಲು ಮಾಡುವಂತೆ ಸಂಬಂಧಪಟ್ಟ ಪಿಡಿಒಗಳಿಗೆ ಸೂಚನೆ ನೀಡಬೇಕು. ಪೌರಕಾರ್ಮಿಕರಿಗೆ ಪ್ರತಿಮಾಹೆ ವೇತನ ನೀಡಲು ನಗರಸಭೆಗೆ ನಿರ್ದೇಶನ ನೀಡಬೇಕು ಎಂದು ಆಗ್ರಹಿಸಿದರು. ಸದಸ್ಯ ಅಬ್ರಾರ್ ಅಹಮದ್ ಉದ್ಯಮಪರವಾನಗಿಯನ್ನು ವಿಳಂಬ ಮಾಡದೇ ಸಕಾಲಕ್ಕೆ ಮಾಡಿಕೊಟ್ಟರೇ ನಗರಸಭೆಗೆ ಆದಾಯ ಬರುತ್ತದೆ. ನಗರದ ನಾನಾಕಡೆ ಅಳವಡಿಸುವ ಜಾಹೀರಾತು ಫಲಕಗಳಿಂದ ಸಮರ್ಪಕವಾಗಿ ಶುಲ್ಕ ಸಂಗ್ರಹವಾಗುತ್ತಿಲ್ಲ. ಅದರ ಬಗ್ಗೆಯೂ ನಗರಸಭೆ ಹೆಚ್ಚು ಒತ್ತು ನೀಡಬೇಕು ಎಂದರು. ನಗರಸಭೆ ವ್ಯಾಪ್ತಿಯಲ್ಲಿರುವ ಉದ್ಯಾನಗಳ ಅಭಿವೃದ್ಧಿಗೆ ಹೆಚ್ಚುವರಿ ಅನುದಾನ ಮೀಸಲಿಡಬೇಕು, ನಗರಸಭೆಯ ಎಲ್ಲ ವಾರ್ಡ್ಗಳಿಗೆ ನಾಮಫಲಕ ಅಳವಡಿಕೆ ತುರ್ತಾಗಿ ಆಗಬೇಕು, ವಿದ್ಯುತ್ ಚಿತಾಗಾರ ಕಾಮಗಾರಿಯನ್ನು ತಕ್ಷಣವೇ ಆರಂಭಿಸಬೇಕು ಎಂಬ ಒತ್ತಾಯ ಕೇಳಿಬಂತು. ನಗರಸಭೆ ಆಯುಕ್ತ ಎಸ್.ವಿ.ರಾಮದಾಸ್, ಸದಸ್ಯರು, ಸಿಬ್ಬಂದಿ ಹಾಜರಿದ್ದರು.



## ಯತೀಂದ್ರ ಶ್ರೀ ಪ್ರಶಸ್ತಿ ಪ್ರದಾನ

ಮಂಡ್ಯ ನಗರದ ಅಂಬೇಡ್ಕರ್ ಭವನದಲ್ಲಿ ಯೋಗಿನಾರೇಯಣಯತೀಂದ್ರ ಪ್ರಚಾರ ಸಭಾದ ಸಹಯೋಗದಲ್ಲಿ ಕೈವಾರ ಸದ್ಗುರು ನಾರೇಯಣಯೋಗಿಗಳ ಪರಿಚಯ ಮತ್ತು ಆತ್ಮಬೋಧೆ ಮತ್ತು ಯತೀಂದ್ರ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತು. ನಿವೃತ್ತ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಎಂ.ಆರ್.ಶ್ರೀನಿವಾಸ್ ಅವರಿಗೆ ಯತೀಂದ್ರ ಶ್ರೀ ಪ್ರಶಸ್ತಿಯನ್ನು ಪತ್ರಕರ್ತ ರವೀಂದ್ರಭಟ್ ನೀಡಿದರು. ಮಂಡ್ಯ ವಿವಿ ಕುಲಪತಿ ಡಾ.ಪುಟ್ಟರಾಜು, ಬೆಂಗಳೂರಿನ ಉಪವಿಭಾಗಾಧಿಕಾರಿ ಆರ್.ಶೋಭಿತಾ, ಎಚ್,ಎ.ವೆಂಕಟೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ದಕ್ಷ ಅಧಿಕಾರಿ ಕೆ.ಶಿವರಾಂ ಸೇವೆ ಸ್ಮರಣೀಯ



**ಚಾಮರಾಜನಗರ:** ಕಡು ಬಡತನದಿಂದ ಬೆಳೆದುಬಂದು ನಾಡಿನ ತುಳಿತ ಸಮುದಾಯದ ಜನರಿಗೆ ದಕ್ಷ ಐಎಎಸ್ ಅಧಿಕಾರಿ ಕೆ.ಶಿವರಾಂ ಸೇವೆ ಸ್ಮರಣೀಯ ಎಂದು ಗಣಿ ಉದ್ಯಮಿ ಶ್ರೀನಿಧಿ ಕುದರ್ ತಿಳಿಸಿದರು.

ನಗರದ ಡಾ.ಭಯಬಿ.ಆರ್.ಅಂಬೇಡ್ಕರ್ ಬಡಾವಣೆಯಲ್ಲಿ ಶುಕ್ರವಾರ ಆಯೋಜಿಸಿದ್ದ ಖ್ಯಾತ ಐಎಎಸ್ ಅಧಿಕಾರಿ ಹಾಗೂ ನಟ ಕೆ.ಶಿವರಾಂ ಶ್ರದ್ಧಾಂಜಲಿ ಸಲ್ಲಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಈ ದೇಶ ಕಂಡ ಮಹಾನ್ ನಾಯಕ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಾರಿರುವ ಶಿಕ್ಷಣದ ಮಹತ್ವವನ್ನು ಕೆ.ಶಿವರಾಂ ಅವರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಅವರು ಅಧಿಕಾರಿಯಾಗಿ ತಳಸಮುದಾಯಗಳ ಜನರಿಗೆ ನೀಡಿದ ಯೋಜನೆಗಳು ಇಂದಿಗೂ ಚಾಲ್ತಿಯಲ್ಲಿದೆ. ಅಂತಹ ವ್ಯಕ್ತಿಯನ್ನು ಸಮುದಾಯ ಕಳೆದುಕೊಂಡು ಬಡವಾಗಿದೆ. ಈ ನಾಡು ಮತ್ತು ದಲಿತ ಸಮುದಾಯಕ್ಕೆ ಕೆ.ಶಿವರಾಂ ಅಗಲಿಕೆ ತುಂಬಲಾರದ ನಷ್ಟ ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯೆ ಚಿನ್ನಮ್ಮ, ಕಲಾವತಿ, ಅರಿಹಂತ್ ಫುಲ್ಸ್ ಮಾಲೀಕರ ದಿಲೀಪ್ ಕುದರ್, ಯಜಮಾನರಾದ ಶಿವಣ್ಣ , ನಾಗರಾಜ್, ಗುರುಸ್ವಾಮಿ, ಮುಖಂಡರಾದ ಸಂಪತ್ ಕುಮಾರ್, ಗುಡ್ಡಯ್ಯ, ಪೆಂಡಾಲ್ ಬಸವಣ್ಣ, ಅಂಬೇಡ್ಕರ್ ಯುವಕರ ಸಂಘದ ಉಮೇಶ್ ಸಖಿ, ಸಿದ್ದು, ಗೌತಮ್, ಶ್ರೀಕಂಠ ಹಾಗೂ ಬಡಾವಣೆಯ ನಿವಾಸಿಗಳು ಹಾಜರಿದ್ದರು.

# ನೊಸಗೆರೆ ಗ್ರಾಪಂ ಅಧ್ಯಕ್ಷರಾಗಿ ವಿನಯ್‌ಗೌಡ ಅವಿರೋಧ ಆಯ್ಕೆ

**ಮಾಲೂರು :** ನೊಸಗೆರೆಗ್ರಾಮ ಪಂಚಾಯಿತಿಅಧ್ಯಕ್ಷರಾಗಿ ವಿನಯ್‌ಗೌಡಅವಿರೋಧವಾಗಿಆಯ್ಕೆಯಾಗಿದ್ದಾರೆಎಂದುಚುನಾವಣೆಅಧಿಕಾರಿಚಂದ್ರಕಲಾ ತಿಳಿಸಿದ್ದಾರೆ. ಕಸಬಾ ಹೋಬಳಿ ನೊಸಗೆರೆಗ್ರಾಮ ಪಂಚಾಯಿತಿಯ ಅಧ್ಯಕ್ಷನಾಗಿದ್ದ ಚಂದ್ರಶೇಖರ್ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಇರುವಖಾಲಿ ಇದ್ದಅಧ್ಯಕ್ಷರ ಸ್ಥಾನಕ್ಕೆ ಶನಿವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಗ್ರಾಪಂ ಸದಸ್ಯ ವಿನಯ್‌ಗೌಡರವರು ಒಬ್ಬರು ಮಾತ್ರ ನಾಮಪತ್ರ ಸಲ್ಲಿಸಿದ್ದು ಬೇರೆಯಾವ ಸದಸ್ಯರು ನಾಮಪತ್ರ ಸಲ್ಲಿಸದಕಾರಣ ಚುನಾವಣೆ ಅಧಿನಿಯಮದ ಪ್ರಕಾರ ಮುಂದಿನ ಅವಧಿಗೆ ವಿನಯ್‌ಗೌಡರನ್ನು ನೊಸಗೆರೆಗ್ರಾಮ ಪಂಚಾಯಿತಿಅಧ್ಯಕ್ಷನನ್ನಾಗಿ ಘೋಷಣೆ ಮಾಡಿರುವುದಾಗಿ ತಿಳಿಸಿದರು. ನೂತನಅಧ್ಯಕ್ಷ ವಿನಯ್‌ಗೌಡ ಮಾತನಾಡಿ ಶಾಸಕ ಕೆ ವೈ ನಂಜೇಗೌಡರ ಆಶೀರ್ವಾದ ಹಾಗೂ ಎಲ್ಲಾ ಸದಸ್ಯರುಗಳ ಸಹಕಾರದೊಂದಿಗೆ ನಾನು ಅಧ್ಯಕ್ಷನಾಗಿದ್ದು ನೊಸಗೆರೆಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವಎಲ್ಲಾ ಗ್ರಾಮಗಳ ಮೂಲಭೂತ ಸೌಲಭ್ಯಗಳಿಗೆ ಹೆಚ್ಚಿನಒತ್ತು ನೀಡಿ ನನ್ನಅವಧಿಯಲ್ಲಿ ಮಾದರಿಗ್ರಾಮ ಪಂಚಾಯತಿಯನ್ನಾಗಿ ಮಾಡುವುದಾಗಿ ತಿಳಿಸಿದರು. ನೊಸಗೆರೆಗ್ರಾಮ ಪಂಚಾಯಿತಿಉಪಾಧ್ಯಕ್ಷರಾದ ಸರಸ್ವತಿ ಸದಸ್ಯರಾದರವಿಕುಮಾರ್‌ಈಶ್ವರ್, ರಮೇಶ್ ,ಪ್ರಶಾಂತ್ ವಿ ,ನಾರಾಯಣಸ್ವಾಮಿ, ಜಿ ಸರಸಮ್ಮ, ಅರ್ಪಿಯಎಸ್ ,ರೇಣುಕಾ ,ಚಂದ್ರಶೇಖರ್ ,ರತ್ನಮ್ಮ ,ಲಕ್ಷ್ಮಿಕಾಂತ್ ಮುಖಂಡರಾದ ಸಿ.ಲಕ್ಷ್ಮಿ ನಾರಾಯಣ, ಮಧುಸೂದನ್,ವಿಜಯನರಸಿಂಹ, ಆನೇಪುರ ಹನುಮಂತಪ್ಪ, ಬಾಳಿಗಾನಹಳ್ಳಿ ಶ್ರೀನಿವಾಸ್, ಸಿಎಂ ನಾರಾಯಣಸ್ವಾಮಿ, ವೆಂಕಟೇಶಪ್ಪ, ಪಿಡಿಒ ಸುರೇಶ್ ಬಾಬು, ಕಾರ್ಯದರ್ಶಿ ಸೀತಾರಾಮ್ ಸಿಬ್ಬಂದಿ ಪ್ರಸನ್ನ,ಇ ಸೇರಿದಂತೆತರರು ಉಪಸ್ಥಿತರಿದ್ದರು.



6 ರವರೆಗೆ ಪೋಲಿಯೋ ಲಸಿಕಾಕರಣ

ಚಿಕ್ಕಬಳ್ಳಾಪುರ: ಪೋಲಿಯೋ ಎಂಬುದು ಅಂಗವಿಕಲತೆ ಉಂಟುಮಾಡುವ ಸಾಂಕ್ರಾಮಿಕ ರೋಗವಾಗಿದ್ದು, ಇದು ಪೋಲಿಯೋ ವೈರಸ್‌ನಿಂದ ಹರಡುವುದು. ಪೋಲಿಯೋ ಲಸಿಕೆಯನ್ನು ಹನಿಗಳ ರೂಪದಲ್ಲಿ 0-5 ವರ್ಷದೊಳಗಿನ ಮಕ್ಕಳಿಗೆ ಹಾಕುವುದರಿಂದ ಪೋಲಿಯೋ ಕಾಯಿಲೆಯನ್ನು ತಡೆಗಟ್ಟಬಹುದಾಗಿದೆ. ಇದಕ್ಕಾಗಿ ಭಾರತ ಸರ್ಕಾರ 03ನೇ ಮಾರ್ಚ್ 2024 ಈ ದಿನವನ್ನು ರಾಷ್ಟ್ರೀಯ ಲಸಿಕಾ ದಿನ (ಪೋಲಿಯೋ ಭಾನುವಾರ) ಎಂದು ಆಚರಿಸಲು ತೀರ್ಮಾನಿಸಿದೆ. ಸದರಿ ದಿನದಂದು ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಪೋಲಿಯೋ ಹನಿಗಳನ್ನು ಪೋಲಿಯೋ ಬೂತ್‌ಗಳಲ್ಲಿ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಬೆಳಿಗ್ಗೆ 8-00 ರಿಂದ ಸಂಜೆ 5-00 ಗಂಟೆಯವರೆಗೆ ನೀಡಲಾಗುವುದು. ಅನಿವಾರ್ಯ ಕಾರಣಗಳಿಂದ ಮಕ್ಕಳು ಪೋಲಿಯೋ ಬೂತ್‌ಗಳಿಗೆ ಬರದೇ ಇದ್ದ ಪಕ್ಷದಲ್ಲಿ ಪೋಲಿಯೋ ಬೂತ್ ದಿನದ ನಂತರ ಗ್ರಾಮೀಣ ಪ್ರದೇಶಗಳಲ್ಲಿ 3 ದಿನ ಹಾಗೂ ನಗರ ಪ್ರದೇಶಗಳಲ್ಲಿ 4 ದಿನ ಅಂದರೆ ದಿನಾಂಕ:03.03.2024 ರಿಂದ 06.03.2024ರ ವರೆಗೆ ಅಂಗನವಾಡಿ ಕಾರ್ಯಕರ್ತೆ/ಆಶಾ ಕಾರ್ಯಕರ್ತೆ/ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು ಆಯ್ದ ದಿನಗಳಂದು ಮನೆ ಬೇಟಿ ಮಾಡಿ ಎಲ್ಲಾ ಮಕ್ಕಳಿಗೆ, ಪೋಲಿಯೋ ಲಸಿಕೆ ಹಾಕಿರುವ ಬಗ್ಗೆ ಖಾತರಿಪಡಿಸಿಕೊಳ್ಳಲಾಗುವುದು. ಸಾರ್ವಜನಿಕರು/ತಾಯಂದಿರು ತಮ್ಮ ಸಮೀಪದ ಅಂಗನವಾಡಿ ಕಾರ್ಯಕರ್ತೆ/ಆಶಾ ಕಾರ್ಯಕರ್ತೆ/ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳನ್ನು ಸಂಪರ್ಕಿಸಿ ಪೋಲಿಯೋ ಬೂತ್ ಮಾಹಿತಿ ಪಡೆಯಬಹುದಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ 647 ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದ್ದು ಒಟ್ಟು 2664 ವ್ಯಾಕ್ಸಿನೇಟರ್ಸ್ ಗಳು ಲಸಿಕೆಯನ್ನು ಹಾಕಲಿದ್ದು 1,22,816 (0-5 ವರ್ಷ) ಮಕ್ಕಳಿಗೆ ಲಸಿಕೆ ಹಾಕಲು ಗುರಿ ನಿಗಧಿ ಪಡಿಸಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಮೇಲ್ವಿಚಾರಣೆಗಾಗಿ 140 ಮೇಲ್ವಿಚಾರಕ ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಜಿಲ್ಲೆಯಾದ್ಯಂತ ನಗರ ಪ್ರದೇಶಗಳಲ್ಲಿ ಬಸ್ ನಿಲ್ದಾಣ ಮುಂತಾದ ಜನ ನಿಭಿಡ ಪ್ರದೇಶಗಳಲ್ಲಿ ಪ್ರಯಾಣ ಮಾಡುತ್ತಿರುವ ಮಕ್ಕಳಿಗೆ ಪೋಲಿಯೋ ಹನಿ ಹಾಕಲು 34 ಟ್ರಾನ್ಸಿಟ್ ಬೂತ್‌ಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒತ್ತಡ ನಿವಾರಣೆಗೆ ಕ್ರೀಡೆ ಸಹಕಾರಿ: ಇಕ್ಬಾಲ್ ಹುಸೇನ್

**ರಾಮನಗರ:** ಒತ್ತಡ ನಿವಾರಿಸುವಲ್ಲಿ ಕ್ರೀಡೆ ಸಹಕಾರಿಯಾಗಿದ್ದು, ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕ್ರೀಡೆಗಳಲ್ಲಿ ಭಾಗವಹಿಸುವಂತೆ ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಇಕ್ಬಾಲ್ ಹುಸೇನ್ ಅವರು ಕರೆ ನೀಡಿದರು. ಅವರು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ರಾಮನಗರ ಜಿಲ್ಲಾ ಶಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಮಾತನಾಡಿದರು. ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಕೆಲವೊಮ್ಮೆ ಒತ್ತಡದ ಸನ್ನಿವೇಶವನ್ನು ಎದುರಿಸುತ್ತಾರೆ, ಇಂತಹ ಒತ್ತಡ ಹಾಗೂ ಪ್ರತಿದಿನ ಚಟುವಟಿಕೆಯಿಂದ ಇರುವಲ್ಲಿ ಕ್ರೀಡೆ ಅತ್ಯುತ್ತಮ ಸಾಧನವಾಗಿದೆ, ಸರ್ಕಾರಿ ನೌಕಕರು ಕ್ರೀಡೆಗಳಲ್ಲಿ ಭಾಗವಹಿಸಬೇಕು ಹಾಗೂ ಜಿಲ್ಲಾ ಕ್ರೀಡಾಂಗಣವು ಸುಸಜ್ಜಿತವಾಗಿ ನಿರ್ಮಾಣಗೊಳ್ಳುತ್ತಿದ್ದು, ಅದನ್ನು ಸದುಪಯೋಗಪಡೆದುಕೊಳ್ಳುವಂತೆ ಅವರು ತಿಳಿಸಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಅನಿತಾ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೆ. ಸತೀಶ್ ಉಪಸ್ಥಿತರಿದ್ದರು.

# ಹೆಗ್ಗಳಿಕೆಗೆ ಹೊಂದಿದೆ KSRTC



**ಚಿಕ್ಕಬಳ್ಳಾಪುರ:** ಸಾರ್ವಜನಿಕರ ಸುರಕ್ಷಿತ ಪ್ರಯಾಣಕ್ಕೆ ಕೆಎಸ್ಸಾರ್ಟಿಸಿ ಬಸ್ಸುಗಳು ಇಡೀ ದೇಶದಲ್ಲೇ ಹೆಗ್ಗಳಿಕೆಗೆ ಪಾತ್ರವಾಗಿವೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ಚಿಕ್ಕಬಳ್ಳಾಪುರ ನಗರದ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಲ್ಲಿ ನೂತನ ಅಶ್ವಮೇಧ ಕ್ಲಾಸಿಕ್ ಬಸ್ ಗಳ ಸೇವೆಗೆ ಚಾಲನೆ ನೀಡಿ ಮಾತನಾಡಿದರು.

ಸಾರ್ವಜನಿಕ ಸಾರಿಗೆ ಮತ್ತು ಪ್ರಯಾಣಿಕರ ಸುರಕ್ಷತೆ ವಿಚಾರದಲ್ಲಿ ಕೆಎಸ್ಸಾರ್ಟಿಸಿ ರಾಷ್ಟ್ರಮಟ್ಟದಲ್ಲೇ ಅಲ್ಲದೇ ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಹೆಗ್ಗಳಿಕೆಗೆ ಪಾತ್ರವಾಗಿದೆ. ಪ್ರಯಾಣಿಕರಿಗೆ ನೀಡುತ್ತಿರುವ ಉತ್ತಮ ಸೇವೆ ಒಳಗೊಂಡಂತೆ ಹಲವು ವಿಭಾಗಗಳಲ್ಲಿ ಹತ್ತು ಹಲವು ಗಮನಾರ್ಹ ಪ್ರಶಸ್ತಿಗಳಿಗೆ ಕೆಎಸ್ಸಾರ್ಟಿಸಿ ಭಾಜನವಾಗಿದೆ. ಸರ್ಕಾರದ ಶಕ್ತಿ ಯೋಜನೆಯಿಂದ ಕೋಟ್ಯಂತರ ಮಹಿಳೆಯರಿಗೆ ಅನುಕೂಲವಾಗಿದೆ ಎಂದರು.

ನಮ್ಮ ವಿಭಾಗವು ಸಹ ಪ್ರಗತಿದಾಯಕ ಘಟಕವಾಗಿ ರಾಜ್ಯ ಮಟ್ಟದಲ್ಲಿ ಗಮನ ಸೆಳೆದಿದ್ದು,ನಮ್ಮ ಚಾಲಕರ ಕಾರ್ಯ ಶ್ರದ್ಧೆಯಿಂದ ಇಂದನ ಉಳಿತಾಯದಲ್ಲಿ ಮೊದಲ ಸ್ಥಾನಗಳಿಸಿದೆ.ಹಲವು ಚಾಲಕರು ಅಪಘಾತ ರಹಿತ ಚಾಲನೆ ಮಾಡಿ ಗೌರವಕ್ಕೆ ಪಾತ್ರರಾಗಿದ್ದಾರೆ.ಇಲ್ಲಿನ ಬಸ್ ನಿಲ್ದಾಣವನ್ನು ಬಹಳ ಸ್ವಚ್ಛವಾಗಿ ನಿರ್ವಹಿಸಲಾಗಿದೆ ಮುಂದಿನ ದಿನಗಳಲ್ಲಿಯೂ ಈ ಕಾರ್ಯವನ್ನು ಹೀಗೆ ಮುಂದುವರಿಸಿ ಮಾದರಿಯಾಗಬೇಕು.ಸದ್ಯಕ್ಕೆ ಅಶ್ವಮೇಧ ಕ್ಲಾಸಿಕ್ ಬಸ್ ಗಳ ಸೇವೆಯು ಬೆಂಗಳೂರು ಮತ್ತು ಚಿಕ್ಕಬಳ್ಳಾಪುರ, ಚಿಂತಾಮಣಿ, ಬಾಗೆಪಲ್ಲಿ ನಗರಗಳ ಮಧ್ಯೆ ಚಾಲನೆಯಾಗಿದೆ. ಮುಂದಿನ ದಿನಗಳಲ್ಲಿ ಇತರ ನಗರಗಳಿಗೂ ವಿಸ್ತರಣೆ ಆಗಲಿದೆ ಎಂದು ತಿಳಿಸಿದರು.

ಅಶ್ವಮೇಧ ಕ್ಲಾಸಿಕ್ ಬಸ್ ಗಳ ಸೇವೆಯು ಪ್ರತಿದಿನ ಬೆಂಗಳೂರಿಗೆ ಕೆಲಸಕ್ಕೆ ಹೋಗಿಬರುವವರಿಗೆ, ವ್ಯಾಪಾರಸ್ಥರಿಗೆ ಹೆಚ್ಚು ಅನುಕೂಲವಾಗಿದೆ. ಪ್ರಾಯಾಣದ ಅವಧಿಯನ್ನು ಉಳಿಸಲಿದೆ.ಸಾರ್ವಜನಿಕರು ಈ ಸಾರಿಗೆ ಸೇವೆಯ ಉಪಯೋಗವನ್ನು ನ್ನು ಬಳಸಿಕೊಳ್ಳಬೇಕು. ಚಿಕ್ಕಬಳ್ಳಾಪುರ ಮತ್ತು ಧರ್ಮಸ್ಥಳ ಮಧ್ಯೆ ತುಮಕೂರು, ಸಿರಾ, ಪಂಚನಹಳ್ಳಿ ಮಾರ್ಗವಾಗಿ ಹೊಸ ಬಸ್ ಸೇವೇಯನ್ನು ಇಂದಿನಿಂದ ಆರಂಭಿಸಿರುವುದು ಪ್ರಯಾಣಿಕರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ವಿಭಾಗೀಯ ನಿಯಂತ್ರಣಾಧಿಕಾರಿ ಹಿಮವರ್ಧನ್ ನಾಯ್ಡು ಅಲ್ಲೂರಿ ಅವರು ಮಾತನಾಡಿ, ಸದ್ಯ ವಿಭಾಗೀಯ ವ್ಯಾಪ್ತಿಯಲ್ಲಿ 11 ಅಶ್ವಮೇಧ ಕ್ಲಾಸಿಕ್ ಬಸ್ಸುಗಳು ನಿಲುಗಡೆ,ತಡೆರಹಿತ ಸೇವೆ ನೀಡಿ ಸಂಚರಿಸುತ್ತಿವೆ. ಇನ್ನೂ 50 ಬಸ್ಸುಗಳು ಬರುವ ನಿರೀಕ್ಷೆ ಇದೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಪ್ರತಿ ದಿನ ಸರಾಸರಿ 11.11 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದು, ವಿಭಾಗ ಲಾಭದಲ್ಲಿದ್ದು ಈ ವರ್ಷ ಸುಮಾರು 25 ಕೋಟಿ ಆದಾಯ ಬಂದಿದೆ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್ ತಿಪ್ಪೇಸ್ವಾಮಿ, ಪೌರಾಯುಕ್ತ ಮಂಜುನಾಥ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಎಂ ಜುಂಜಣ್ಣ, ವಿಭಾಗೀಯ ಸಂಚಲನಾಧಿಕಾರಿ ಮಂಜುನಾಥ, ಚಾಲಕರು, ನಿರ್ವಾಹಕರು, ಸಾರ್ವಜನಿಕರು ಇದ್ದರು.

# ನೀರು ಸರಬರಾಜು ಮಾಡಲು ಆದ್ಯತೆ ನೀಡಿ



**ಹನೂರು:** ಬೇಸಿಗೆ ಪ್ರಾರಂಭ ವಾಗುತ್ತಿರುವುದರಿಂದ ಮುಂಜಾಗ್ರತ ಕ್ರಮವಾಗಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಸರಬರಾಜು ಮಾಡಲು ವ್ಯವಸ್ಥೆಗೆ ಪ್ರಥಮ ಆದ್ಯತೆ ನೀಡಬೇಕೆಂದು ಕಾರ್ಯದರ್ಶಿ ಜಿ.ಪಂ. ಹನೂರು ತಾಲೂಕು ಆಡಳಿತಾಧಿಕಾರಿ ಲಕ್ಷ್ಮೀ ಅವರು ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಏರ್ಪಡಿಸಲಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಪಿಡಿಒಗಳ ಸಾಮಾನ್ಯ ಸಭೆಯಲ್ಲಿ ಅವರು ಮಾತನಾಡಿದ ಅವರು ಬರ ನಿರ್ವಹಣೆಗೆ 25 ಲಕ್ಷ ರೂ. ಗಳ ಅನುದಾನ ಮೀಸಲಿದ್ದು ಶಾಸಕರ ಸಮಿತಿ ಅತಿ ಬರಪೀಡಿತ ಪ್ರದೇಶಗಳನ್ನು ಗುರುತು ಮಾಡಿದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಯೋಜನೆ ಅಡಿ ಮರುಪೂರ್ಣ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಪದಾರ್ಥಗಳನ್ನು ನೀಡಲು ಕ್ರಮವಹಿಸಬೇಕು. ಪೌಷ್ಟಿಕ ಆಹಾರ ಸೇವನೆಯ ವ್ಯವಸ್ಥೆ ಕೈಗೊಳ್ಳಿ.

ವಿದ್ಯಾರ್ಥಿಗಳ ಅಗತ್ಯಕ್ಕೆ ಅನುಗುಣವಾಗಿ ಶೌಚಾಲಯಗಳನ್ನು, ಹೆಚ್ಚುವರಿ ಶೌಚಾಲಯಗಳು ಇರುವ ಶಾಲೆಗಳ ಬದಲಿಗೆ ಆವಶ್ಯಕತೆ ಇರುವ ಶಾಲೆಗಳಿಗೆ ಶೌಚಾಲಯ ವ್ಯವಸ್ಥೆ ಕಲ್ಪಿಸಿ. ಎಸ್. ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತಮ ಅಂಕಗಳು

ಬರುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ, ಡಿಜಿಟಲ್ ಗ್ರಂಥಾಲಯ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು. ಕೂಸಿನ ಮನೆ ಸಮರ್ಪಕ ಕಾರ್ಯನಿರ್ವಹಿಸಲು ಕ್ರಮವಹಿಸಬೇಕು, ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ನರೇಗಾ ಯೋಜನೆ ಅಡಿ ಅರಣ್ಯ ಇಲಾಖೆ ಉದ್ಯೋಗ ನೀಡಬೇಕು ಎಂದರು.

ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಆನೆ ಮತ್ತು ಮಾನವ ಸಂಘರ್ಷ ತಡೆಗಟ್ಟಲು ಇಲಾಖೆಯವರು ಅರಣ್ಯ ಸೂಕ್ತ ವ್ಯವಸ್ಥೆಗಳನ್ನು ಕೈಗೊಳ್ಳಬೇಕು ಎಂದರು. ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ವತಿಯಿಂದ ಸಕಲ ಸೌಕರ್ಯಗಳನ್ನು ಒದಗಿಸಬೇಕು ಎಂಬುದು ಸೇರಿದಂತೆ ವಿವಿಧ ಇಲಾಖೆ ಬಗ್ಗೆ ಮಾಹಿತಿ ಪಡೆದು ಸಲಹೆ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿಕಾರ್ಯನಿರ್ವಹಣಾಧಿಕಾರಿ ಉಮೇಶ್, ಎಡಿ ರವೀಂದ್ರ, ಎಇಇ ಆರ್ ಡಿ ಪಿ ಆರ್ ಶಿವಪ್ರಕಾಶ್, ತಾಲೂಕು ವೈದ್ಯಾಧಿಕಾರಿ ಪ್ರಕಾಶ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಸುಂದ್ರಮ್ಮ, ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿವಿಧ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು

### ಮಾಧ್ಯಮಗಳಿಗೆ ಅಭಿನಂದನೆ

**ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ನಿಬಾಯಿಸಿ ರಾಜ್ಯದಲ್ಲೇ ಪ್ರಥಮ ಸ್ಥಾನ ಬರಲು ಜಿಲ್ಲೆಯ ಮಾಧ್ಯಮಗಳ ಪಾತ್ರವನ್ನು ಸ್ಮರಿಸಿ ಅಭಿನಂದನೆ ಸಲ್ಲಿಸಿದರು.**



## ಯಂತ್ರಚಾಲಿತ ಸ್ಕೂಟರ್ ವಿತರಣೆ

ಶ್ರೀರಂಗಪಟ್ಟಣ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ದಿ ನಿಧಿಯ ಶಾಸಕರ ಅನುದಾನದಿಂದ ಕ್ಷೇತ್ರದ 19 ಮಂದಿ ವಿಶೇಷ ಚೇತನರಿಗೆ ಇಂಧನ ಚಾಲಿತ ಸ್ಕೂಟರ್‌ಗಳನ್ನು ಚೆಸ್ಕ್ ಅಧ್ಯಕ್ಷ ಹಾಗೂ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ ಅವರು ತಮ್ಮ ಕಚೇರಿಯ ಆವರಣದಲ್ಲಿ ವಿತರಣೆ ಮಾಡಿದರು. ಫಲಾನುಭವಿಗಳಿಗೆ ಸ್ಕೂಟರ್ ಕೀ ವಿತರಿಸಲಾಯಿತು. ಮುಖಂಡರಾದ ನಾಗರಾಜು, ಕೇಶವ್, ಅಭಿಷೇಕ್, ಶ್ರೀಧರ್ ತೂಬಿನಕೆರೆ ಭಾಗವಹಿಸಿದ್ದರು.

# ಯುವ ಜನತೆ ಅಂಬೇಡ್ಕರ್ ತತ್ವ ಮೈಗೂಡಿಸಿಕೊಳ್ಳಿ



**ಕೊಳ್ಳೇಗಾಲ:** ಕ್ಷೇತ್ರ ವ್ಯಾಪ್ತಿಯ ಪಾಳ್ಯ ಗ್ರಾಮದಲ್ಲಿ ಪ್ರಜಾಪ್ರಭುತ್ವದ ಪಿತಾಮಹ ಸಂವಿಧಾನ ಶಿಲ್ಪಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ವೃತ್ತ ನಾಮಫಲಕ ಉದ್ಘಾಟನೆ ಮಾಡಿ ನಂತರ ಮಾತನಾಡಿದ ಅವರು ಯುವ ಜನತೆ ಜಾಗೃತರಾಗಿ ಬಾಬಾ ಸಾಹೇಬರ ತತ್ವ ಆದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ತಮ್ಮ ಸ್ವ-ಬೆಳವಣಿಗೆಗೆ ಜೊತೆಗೆ ತಮ್ಮ ಗ್ರಾಮಗಳ ಅಭಿವೃದ್ಧಿಗೂ ಶ್ರಮಿಸಬೇಕು.

ಸ್ವತಂತ್ರ ಭಾರತದ ಆಡಳಿತಕ್ಕೆ ಅಗತ್ಯವಾದ ಶ್ರೇಷ್ಠ ಸಂವಿಧಾನವನ್ನು ರಚಿಸಿಕೊಟ್ಟು, ಸರ್ವರಿಗೂ ಸಮಪಾಲು ಮತ್ತು ಸಮಬಾಳ್ವೆಗೆ ಅವಕಾಶ ಕಲ್ಪಿಸಿದ ಮಹಾನ್ ಮಾನವತಾವಾದಿ ಡಾ.ಅಂಬೇಡ್ಕರ್ ಅವರ ಹೆಸರಿನಲ್ಲಿ ನಾಮ ಫಲಕ ಉದ್ಘಾಟನೆ ಮಾಡುತ್ತಿರುವುದು ಉತ್ತಮ ಕೆಲಸವಾಗಿದೆ.

ಯುವ ಜನತೆ ಈ ದೇಶದ ಶಕ್ತಿ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ಮತ್ತು ಸಮಾನತೆ ಸಿಗಬೇಕು ಎಂಬುದು ಬಾಬಾ ಸಾಹೇಬರ ಕನಸಾಗಿತ್ತು. ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ನಾವು ನೀವು ಎಲ್ಲರೂ ಶ್ರಮಿಸೋಣ ಎಂದರು.

ಈ ಸಂದರ್ಭದಲ್ಲಿ ಜೇತವನದ ಮನೋರಂಖಿತ ಬಂತೇಜಿ, ಗ್ರಾ.ಪಂ.ಅಧ್ಯಕ್ಷೆ ಮಂಜುಳ ಮಾದೇಶ್, ಉಪಾಧ್ಯಕ್ಷೆ ಚೈತ್ರ, ವೈದ್ಯಾಧಿಕಾರಿ ಗೌತಮ್, ಗ್ರಾ.ಪಂ. ಸದಸ್ಯರು ಸೇರಿದಂತೆ ವಿವಿಧ ಸಮುದಾಯದ ಮುಖಂಡರು, ಯಜಮಾನರು, ಜೈಭೀಮ್ ವಿದ್ಯಾರ್ಥಿ ಬಳಗ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತಿ ಶಾಲೆಯಲ್ಲಿ ಮಕ್ಕಳ ರಕ್ಷಣಾ ಸಮಿತಿ ರಚನೆಯಾಗಲಿ



**ಚಿಕ್ಕಬಳ್ಳಾಪುರ:** ಶಾಲಾ ಮಕ್ಕಳ ಸುರಕ್ಷತೆ ಹಾಗೂ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸುವ ದೃಷ್ಟಿಯಿಂದ ಸರ್ಕಾರದ ಆದೇಶದಂತೆ ಪ್ರತಿ ಶಾಲೆಯಲ್ಲಿಯೂ ಕಡ್ಡಾಯವಾಗಿ ಮಕ್ಕಳ ರಕ್ಷಣಾ ಸಮಿತಿಗಳನ್ನು ರಚಿಸಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಕೀಲರ ಸಂಘ, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದಲ್ಲಿ ಶನಿವಾರ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ಪಂಚಾಯಿತಿ ಮತ್ತು ಶಾಲಾ ಮಟ್ಟದಲ್ಲಿ ಮಕ್ಕಳ ರಕ್ಷಣಾ ಸಮಿತಿ ರಚನೆಯ ಬಗ್ಗೆ ಕಾನೂನು ಅರಿವು ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮನೆಯಿಂದ ಸುರಕ್ಷಿತವಾಗಿ ಶಾಲೆಗೆ ಹೋದ ಮಕ್ಕಳು ಶಾಲೆಯಿಂದಲೂ ಅಷ್ಟೇ ಸುರಕ್ಷಿತವಾಗಿ ಬರಬೇಕು. ಮಕ್ಕಳು ಶಾಲೆಯಲ್ಲಿರುವ ಅವಧಿಯಲ್ಲಿ ಅವರಿಗೆ ಏನೇ ತೊಂದರೆ ಅಥವಾ ಸಮಸ್ಯೆಯಾದರೂ ಅವರು ಶಾಲೆಯಲ್ಲಿ ಮುಕ್ತವಾಗಿ ಹೇಳಿಕೊಳ್ಳುವಂತಿರಬೇಕು ಮಕ್ಕಳ ಸುರಕ್ಷತೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಲ್ಲಾ ಶಾಲೆಗಳಲ್ಲಿಯೂ ಮಕ್ಕಳ ರಕ್ಷಣಾ ಸಮಿತಿಗಳನ್ನು ರಚಿಸುವಂತೆ 1990 ರಲ್ಲಿಯೇ ಸುತ್ತೋಲೆ ಹೊರಡಿಸಿದೆ. ಆದರೆ, ಸರ್ಕಾರದ ಆದೇಶವನ್ನು ಶಾಲೆಗಳು ಪಾಲಿಸುತ್ತಿಲ್ಲ. ಯಾವುದೇ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಸಮಿತಿಗಳು ರಚನೆಯಾಗಿಲ್ಲ. ಇದು ನಿಜಕ್ಕೂ ಬೇಸರದ ಸಂಗತಿಯಾಗಿದೆ. ಮಕ್ಕಳು ತಮಗೆ ಆದ ತೊಂದರೆಯನ್ನು ಯಾರೊಂದಿಗೆ ಹೇಳಿಕೊಳ್ಳಬೇಕು. ಮಕ್ಕಳು ಮುಕ್ತ ಮತ್ತು ನಿರ್ಭಯ ವಾತಾವರಣದಲ್ಲಿ ಅತ್ಯಂತ ಸುರಕ್ಷಿತವಾಗಿ ಇರಬೇಕು. ಆದ್ದರಿಂದ ಎಲ್ಲಾ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಸಮಿತಿಗಳನ್ನು ಕಡ್ಡಾಯವಾಗಿ ಮತ್ತು ಆದ್ಯತೆಯ ಮೇಲೆ ರಚಿಸಿ ಮಕ್ಕಳಿಗೆ ಅನುಕೂಲ ಮಾಡಿಕೊಡಬೇಕು. ಈಗಾಗಲೇ ಸರ್ಕಾರಿ ಕಚೇರಿಗಳಲ್ಲಿ ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಗಳು ಕ್ರಿಯಾಶೀಲವಾಗಿವೆ. ಹಾಗೆಯೇ ಮಕ್ಕಳ ವಿಚಾರದಲ್ಲಿಯೂ ಶಾಲೆಗಳಲ್ಲಿ ಸಮಿತಿಗಳು ರಚನೆಯಾಗಬೇಕು, ಆ ಮೂಲಕ ಮಕ್ಕಳ ಹಕ್ಕುಗಳು ರಕ್ಷಣೆಯಾಗಬೇಕು. ಸಮಿತಿಗಳು ರಚನೆಯಾಗುವುದರಿಂದ ಮಕ್ಕಳು ಎದುರಿಸುವ ಸಮಸ್ಯೆಗಳನ್ನು ಅರಿಯಲು ಅನುಕೂಲವಾಗುತ್ತದೆ. ಮಕ್ಕಳ ಸಮಸ್ಯೆಗಳು ಶಿಕ್ಷಕರು, ಸರ್ಕಾರಿ ಅಧಿಕಾರಿಗಳು ಮತ್ತು ಪೋಷಕರಿಗೆ ತಿಳಿಯುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಮಕ್ಕಳ ರಕ್ಷಣಾ ಸಮಿತಿಗಳು ಹೆಚ್ಚು ಸಹಕಾರಿಯಾಗಲಿವೆ ಎಂದರು.

ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾತನಾಡಿ, ಹಿರಿಯ ನಾಗರೀಕರು ಸೇರಿದಂತೆ ಸಾರ್ವಜನಿಕರ ಹಲವು ಸಮಸ್ಯೆಗಳು ಗಮನಕ್ಕೆ ಬಂದ ಕೂಡಲೇ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ಸ್ಪಂದಿಸುವಲ್ಲಿ ಸಕ್ರಿಯವಾಗಿದೆ. ಶಾಲಾ ಆಸ್ತಿಗಳ ಒತ್ತುವರಿ ಇನ್ನಿತರ ವಿಚಾರಗಳಲ್ಲಿ ಪ್ರಾಧಿಕಾರ ಹೆಚ್ಚು ಮುತುವರ್ಜಿಯಿಂದ ಕೆಲಸ ಮಾಡಿ ಸಂಬಂಧಪಟ್ಟ ಇಲಾಖೆಗಳಿಗೆ ಸೂಕ್ತ ನಿರ್ದೇಶನವನ್ನೂ ಮಾಡುತ್ತಿದೆ. ಮಕ್ಕಳ ಹಕ್ಕುಗಳ ರಕ್ಷಣೆ ಹಿನ್ನೆಲೆಯಲ್ಲಿ ಜಿಲ್ಲೆಯ ಪ್ರತಿ ಶಾಲೆಯಲ್ಲಿ ಮಕ್ಕಳ ರಕ್ಷಣಾ ಸಮಿತಿಗಳು ರಚನೆಯಾಗಬೇಕು. ಈ ಸಮಿತಿಗಳ ರಚನೆ ಕುರಿತು ಪಂಚಾಯಿತಿಗಳು, ಶಿಕ್ಷಕರಿಗೇ ಮಾಹಿತಿ ಇಲ್ಲ. ಮಕ್ಕಳ ಮೇಲೆ ಯಾರಿಂದಲೂ ಯಾವುದೇ ರೀತಿಯ ದೌರ್ಜನ್ಯಗಳು ನಡೆಯದಂತೆ ಮುನ್ನೆಚ್ಚರಿಕೆಯಾಗಿ ತಡೆಯುವುದೇ ಸಮಿತಿಗಳ ಮುಖ್ಯ ಧ್ಯೇಯವಾಗಿದೆ. ಈಗಾಗಲೇ ಮಿಷನ್ ವಾತ್ಸಲ್ಯ ಎಂಬ ಯೋಜನೆಯಡಿ ಸಾಕಷ್ಟು ಅರಿವು ಮೂಡಿಸಲಾಗುತ್ತಿದ್ದು, ಮಕ್ಕಳ ರಕ್ಷಣೆ ಎಲ್ಲರ ಹೊಣೆ ಎಂಬ ಘೋಷ ವಾಕ್ಯದೊಂದಿಗೆ ಕೆಲಸ ನಡೆಯುತ್ತಿದೆ. ಮಕ್ಕಳ ರಕ್ಷಣೆ ಕೆಲಸ ಮತ್ತಷ್ಟು ಪರಿಣಾಮಕಾರಿಯಾಗಿ ಆಗುವ ಅಗತ್ಯವಿದೆ ಎಂದರು. ಬಾಲ ನ್ಯಾಯನಿಧಿ, ಉಚಿತ ಮಕ್ಕಳ ಸಹಾಯವಾಣಿ 1098 ಸೇರಿದಂತೆ ಹಲವು ಯೋಜನೆಗಳ ಮೂಲಕ ಮಕ್ಕಳು ಸುರಕ್ಷಿತ ವಾತಾವರಣದಲ್ಲಿ ಬದುಕುವಂತೆ ಮಾಡಬಹುದಾಗಿದೆ. ಮಕ್ಕಳ ಮೇಲೆ ದೌರ್ಜನ್ಯಗಳು ನಡೆಯಬಾರದು. ಒಂದು ವೇಳೆ ನಡೆದರೆ ಅದಕ್ಕೆ ಕಾನೂನಿನ ನೆರವನ್ನೂ ಪಡೆದುಕೊಂಡು ಮಕ್ಕಳನ್ನು ರಕ್ಷಿಸಬೇಕಿದೆ. ಎಲ್ಲಿಯೇ ಆಗಲಿ ಮಕ್ಕಳ ಹಕ್ಕುಗಳಿಗೆ ಧಕ್ಕೆಯಾಗುತ್ತಿದ್ದರೆ, ಶೋಷಣೆ ಆಗುತ್ತಿದ್ದರೆ ಗಮನಿಸಿದವರು ಮಕ್ಕಳ ಸಹಾಯವಾಣಿಯನ್ನು ಸಂಪರ್ಕಿಸಿ ಮಾಹಿತಿ ನೀಡುವ ಮೂಲಕ ಸಾಮಾಜಿಕ ಜವಾಬ್ದಾರಿ ತೋರಬೇಕು ಎಂದರು. ಸಾಮಾಜಿಕ ಜಾಲತಾಣಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ನಡೆಯುತ್ತಿದೆ. ಪೋಸ್ಟರ್,ವಿಡಿಯೊ ಮತ್ತು ಕಿರುಚಿತ್ರಗಳ ಮುಖಾಂತರ ಮಕ್ಕಳ ಹಕ್ಕುಗಳ ರಕ್ಷಣೆಯ ವಿಚಾರಗಳಲ್ಲಿ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಸರ್ಕಾರದ ಈ ಸಾಮಾಜಿಕ ಜಾಲತಾಣಗಳಿಗೆ ಭೇಟಿ ನೀಡಬಹುದು. https:/www.facebook.com/icpskarnataka, https:/www.youtube.com/icpskarnatakaಸಂಕಷ್ಟ ಪರಿಸ್ಥಿತಿಯಲ್ಲಿರುವ ಮಕ್ಕಳ ರಕ್ಷಣೆಗಾಗಿ ಸಹಾಯವಾಣಿ ಸಂಖ್ಯೆ 1098 ಅಥವಾ 112 ಸಂಖ್ಯೆಗೆ(24/7) ಕರೆ ಮಾಡಬಹುದು ಎಂದು ಮನವಿ ಮಾಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯದಿಶೆ ಅರುಣಕುಮಾರಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಶ್ರೀನಿವಾಸ್, ಸರ್ಕಾರಿ ವಕೀಲರಾದ ಜಯರಾಮರೆಡ್ಡಿ, ಬಿಜಿಎಸ್ ವಿದ್ಯಾ ಸಂಸ್ಥೆಯ ಡಾ.ಮಧುಸೂದನ್, ವಿಕಾಸ್ ರೆಡ್ಡಿ, ಕೆ.ವಿ.ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕ ಶಿವರಾಂ ಉಪಸ್ಥಿತರಿದ್ದರು.

## ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಮನಗರ:** ರಾಮನಗರ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಮೇಲ್ವಿಚಾರಣಾ ಸಮಿತಿಗೆ ಅಧಿಕಾರೇತರ ಸದಸ್ಯರುಗಳನ್ನು ಆಯ್ಕೆ ಮಾಡಲು ಷರತ್ತುಗಳಿಗೆ ಒಳಪಡಿಸಿ, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಮಿತಿ ಸದಸ್ಯರ ವಿವರ: 3 ಅನುಸೂಚಿತ ಜಾತಿಗೆ ಸೇರಿದ ಅಧಿಕಾರೇತರ ಸದಸ್ಯರು, ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಧಿಕಾರೇತರ ಸದಸ್ಯರು ಹಾಗೂ 3 ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟುಗಳಿಗೆ ಸೇರದ ಇತರೆ ಪ್ರವರ್ಗಕ್ಕೆ ಸೇರಿದ ಅಧಿಕಾರೇತರ ಸದಸ್ಯರು ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಪೂರ್ಣ ವಿವರವನ್ನು ನಮೂದಿಸಿ, ಪೂರಕ ದಾಖಲೆಗಳ ಸಹಿತ ಇದೇ ಮಾ. 27ರೊಳಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, 2ನೇ ಮಹಡಿ, ಪಂಚಾಯತ್ ಭವನ, ಬಿ.ಎಂ. ರಸ್ತೆ, ರಾಮನಗರ. ಈ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, 2ನೇ ಮಹಡಿ ಪಂಚಾಯತ್ ಭವನ, ಬಿಎಂ. ರಸ್ತೆ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ನಗರಸಭೆಯಲ್ಲಿ ಬಹಿರಂಗ ಹರಾಜು

**ಕೋಲಾರ:** ನಗರಸಭೆ ಮಾಲಿಕತ್ವಕ್ಕೆ ಸೇರಿದ ದಿನವಹಿ ಮಾರುಕಟ್ಟೆ ಶುಲ್ಕ, ಹಳೇ ಬಸ್ ನಿಲ್ದಾಣದ ಬಸ್ ಸ್ಟ್ಯಾಂಡ್ ಶುಲ್ಕ ಹಾಗೂ ವಾರದ ಸಂತೆ ಫೀ ವಸೂಲಿ ಮಾಡುವ ಬಗ್ಗೆ ಮಾರ್ಚ್ 05 ರಂದು ಬೆಳಿಗ್ಗೆ 11.00 ಗಂಟೆಗೆ ಕೋಲಾರ ನಗರಸಭೆ ಕಾರ್ಯಾಲಯದ ಸಭಾಂಗಣದಲ್ಲಿ ಬಹಿರಂಗ ಹರಾಜಿನ ಮೂಲಕ ಹರಾಜು ಮಾಡಲಾಗುವುದು. ಆಸಕ್ತಿಯುಳ್ಳವರು ದಿನವಹಿ ಮಾರುಕಟ್ಟೆ ಶುಲ್ಕ ವಸೂಲಿ -60,000, ಹಳೇ ಬಸ್‌ನಿಲ್ದಾಣದ ಖಾಸಗಿ ಬಸ್‌ಗಳ ಬಸ್ ಸ್ಟ್ಯಾಂಡ್ ಶುಲ್ಕ -60,000 ಹಾಗೂ ವಾರದ ಸಂತೆ ಶುಲ್ಕ -30,000 ಹರಾಜು ಪೂರ್ವದಲ್ಲಿ ನಿಗಧಿತ ಠೇವಣಿಯನ್ನು ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದುಯೆಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್



## ಕಾರ್ ಶೇಪರ್ಸ್ ಜೊತೆಗೂಡಿದ ಟರ್ಟಲ್ ವ್ಯಾಕ್ಸ್ ಇಂಡಿಯಾ

ಚಿಕಾಗೋ ಮೂಲದ ಪ್ರಶಸ್ತಿ-ವಿಜೇತ ಕಾರ್ ಕೇರ್ ಕಂಪನಿ ಟರ್ಟಲ್ ವ್ಯಾಕ್ಸ್ ಇಂಕ್, ಇಂದು ಭಾರತದಲ್ಲಿ ಟರ್ಟಲ್ ವ್ಯಾಕ್ಸ್‌ನ ಯಶಸ್ವಿ 5ನೇ ವರ್ಷಾಚರಣೆ ಸಂದರ್ಭದಲ್ಲಿ ಕಾರ್ ಶೇಪರ್ಸ್ ಜೊತೆ ಸೇರಿ ಬೆಂಗಳೂರಿನಲ್ಲಿ, ನಂ. 18/1, ಬಳಗೆರೆ ರಸ್ತೆ, ಕಪೂರ್ ಕೆಫೆ ಪಕ್ಕ, ದೇವಸ್ಥಾನಗಳು, ಬಾಳಗೆರೆ, ವರ್ತೂರು ಎಂಬ ವಿಳಾಸದಲ್ಲಿ ಮತ್ತೊಂದು ಕೋ-ಬ್ರಾಂಡ್ ಕಾರ್-ಕೇರ್ ಸ್ಟುಡಿಯೊವನ್ನು ಪ್ರಾರಂಭಿಸಿದೆ.
ಅತ್ಯಾಧುನಿಕ ಟರ್ಟಲ್ ವ್ಯಾಕ್ಸ್ ಲ ಡೀಟೇಲಿಂಗ್ ತಂತ್ರಜ್ಞಾನಗಳು ಮತ್ತು ತರಬೇತಿ ಪಡೆದ ಸೇವಾ ಸಿಬ್ಬಂದಿಗಳ ತಂಡವನ್ನು ಹೊಂದಿದ ಸುಸಜ್ಜಿತವಾದ ಈ ಟರ್ಟಲ್ ವ್ಯಾಕ್ಸ್ ಕಾರ್ ಕೇರ್ ಸ್ಟುಡಿಯೋ ವ್ಯಾಪಕ ಶ್ರೇಣಿಯ ಕಾರ್ ಡೀಟೇಲಿಂಗ್ ಸರ್ವೀಸ್ ಗಳು ಮತ್ತು ಉತ್ಪನ್ನಗಳನ್ನು ಒದಗಿಸಲಿದೆ. ಕಾರು ಉತ್ಸಾಹಿಗಳ ವೈಯಕ್ತಿಕ ಆಸಕ್ತಿಯನ್ನು ಪೂರೈಸಲೆಂದೇ ಈ ಸ್ಟುಡಿಯೋ ವಿನ್ಯಾಸಗೊಳಿಸಲಾಗಿದೆ. ಸ್ಟುಡಿಯೋವನ್ನು ಟರ್ಟಲ್ ವ್ಯಾಕ್ಸ್ ಗ್ಲೋಬಲ್‌ನ ಅಧ್ಯಕ್ಷರು, ಸಿಇಒ ಡೆನಿಸ್ ಜಾನ್ ಹೀಲಿ ಖಖಖ, ಉಪ ವ್ಯವಸ್ಥಾಪಕ ನಿರ್ದೇಶಕರು, ಇಎಂಇಎ ಮತ್ತು ವಿಪಿ? ಗ್ಲೋಬಲ್ ಎಚ್ಆರ್ ಶ್ರೀ ರಾಬಿನ್ ಆಸ್ಟನ್ ಮತ್ತು ಟರ್ಟಲ್ ವ್ಯಾಕ್ಸ್ ಕಾರ್ ಕೇರ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ. ಸಜನ್ ಮುರಳಿ ಉದ್ಘಾಟಿಸಿದರು. ಕಾರ್ ಶೇಪರ್ಸ್ ಬೆಂಗಳೂರಿಗೆ ವರ್ಷಗಳ ಕಾಲ ಕಾರ್ ಕೇರ್ ಮತ್ತು ಡೀಟೇಲಿಂಗ್ ಕೌಶಲಗಳನ್ನು ಒದಗಿಸಿದ್ದಾರೆ. ಇದೀಗ ಟರ್ಟಲ್ ವ್ಯಾಕ್ಸ್‌ನ ಡೀಟೇಲಿಂಗ್ ನಾವೀನ್ಯತೆ ಮತ್ತು ಪರಿಣತಿ ಜೊತೆಗೆ ಕಾರ್ ಶೇಪರ್ಸ್ ಜೋಡಿಯಾಗಿದೆ ಮತ್ತು ಉತ್ತಮ ಗುಣಮಟ್ಟದ ಗ್ರಾಹಕ ಸೇವೆಯನ್ನು ನೀಡುವ ಗುರಿ ಹೊಂದಿದೆ. ಟರ್ಟಲ್ ವ್ಯಾಕ್ಸ್ ಕಾರ್ ಕೇರ್ ಸ್ಟುಡಿಯೋ ವೃತ್ತಿಪರ ವಾಹನ ನಿರ್ವಹಣೆ ಮಾಡುತ್ತದೆ. ಸ್ಟುಡಿಯೋ ಗ್ರಾಹಕರಿಗೆ ಅತ್ಯುತ್ತಮ ಸೇವೆ ಒದಗಿಸಲು ಇತ್ತೀಚಿನ ತಂತ್ರಜ್ಞಾನಗಳನ್ನು ಬಳಸಿಕೊಳ್ಳುತ್ತದೆ ಮತ್ತು ಟರ್ಟಲ್ ವ್ಯಾಕ್ಸ್‌ನ ಸೆರಾಮಿಕ್ ಮತ್ತು ಗ್ರಾಫೀನ್ ಶ್ರೇಣಿಯಿಂದ ಬಹುಸಂಖ್ಯೆಯ ಕಾರ್ ಕೇರ್ ಪ್ಯಾಕೇಜ್‌ಗಳನ್ನು ನೀಡುತ್ತದೆ.

## ಬ್ರೆಡ್ ದೋಸೆ

### ಪಾಕ ಶಾಲೆ




### ಬೇಕಾಗಿರುವ ಪದಾರ್ಥ

ಬ್ರೆಡ್ ಸ್ಲೈಸ್ - 4, ಉಪ್ಪಿಟ್ಟು ರವೆ - 1 ಕಪ್, ಅಕ್ಕಿ ಹಿಟ್ಟು - 1 ಕಪ್, ದೊಡ್ಡ ಈರುಳ್ಳಿ - 1, ಹಸಿ ಮೆಣಸಿನಕಾಯಿ ಪೇಸ್ಟ್ - 1 ಟೀ ಚಮಚ, ಜೀರ್ಗೆ - 1/2 ಸ್ಪೂನ್, ಎಣ್ಣೆ - ಅಗತ್ಯಕ್ಕೆ ತಕ್ಕಷ್ಟು, ಉಪ್ಪು - ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಮೊದಲು ಬ್ರೆಡ್ ತುಂಡುಗಳನ್ನು ಮಿಕ್ಸಿ ಜಾರ್ಗೆ ಸೇರಿಸಿ ಪುಡಿ ಮಾಡಿಕೊಳ್ಳಿ, ಅದರೊಂದಿಗೆ ರವೆ, ಅಕ್ಕಿಹಿಟ್ಟು, ಉಪ್ಪು, ಜೀರ್ಗೆ ಸೇರಿಸಿ ಮತ್ತೆ ಗ್ರೈಂಡ್ ಮಾಡಿ, ಇದಕ್ಕೆ ಹೊಂದಿಕೊಳ್ಳುವಷ್ಟು ನೀರು ಸೇರಿಸಿ ಮಿಕ್ಸ್ ಮಾಡಿಕೊಳ್ಳಿ. ಈ ಮಿಶ್ರಣವನ್ನು ಒಂದು ಬೌಲ್ನಲ್ಲಿ ಸೇರಿಸಿ, ಅವಶ್ಯಕತೆ ಇದ್ದರೆ ಇನ್ನಷ್ಟು ನೀರು ಸೇರಿಸಿ ದೋಸೆ ಹಿಟ್ಟು ತಯಾರಿಸಿಕೊಳ್ಳಿ, ಈಗ ಸ್ಟೌವ್ ಮೇಲೆ ಪ್ಯಾನ್ ಇಟ್ಟು ಸ್ವಲ್ಪ ಎಣ್ಣೆ ಸವರಿ ದೋಸೆ ಹಾಕಿ, ಈ ದೋಸೆ ಮೇಲೆ ಸಣ್ಣಗೆ ಕತ್ತರಿಸಿದ ಈರುಳ್ಳಿ ಹಾಕಿ ಮೇಲೆ ಇನ್ನಷ್ಟು ತುಪ್ಪ ಅಥವಾ ಎಣ್ಣೆ ಸೇರಿಸಿ. ದೋಸೆ ಕಂದು ಬಣ್ಣಕ್ಕೆ ಬಂದ ನಂತರ ತೆಗೆದು ಪ್ಲೇಟ್ಗೆ ವರ್ಗಾಯಿಸಿ. ಕಾಯಿ ಚಟ್ನಿಯೊಂದಿಗೆ ಈ ಬ್ರೆಡ್ ದೋಸೆಯನ್ನು ಎಂಜಾಯ್ ಮಾಡಿ.
**ಗಮನಿಸಿ:** ಈ ಬ್ರೆಡ್ ದೋಸೆಯಲ್ಲಿ ಸಾಕಷ್ಟು ಆರೋಗ್ಯ ಪ್ರಯೋಜನಗಳಿವೆ. ಆದ್ದರಿಂದ ಮಕ್ಕಳು , ವಯಸ್ಕರಿಗೆ ಯಾವುದೇ ಸಮಸ್ಯೆ ಇಲ್ಲ. ವಿಶೇಷವಾಗಿ ಬ್ರೌನ್ ಬ್ರೆಡ್ ಬಳಸುವುದರಿಂದ ಹೆಚ್ಚಿನ ಪೋಷಕಾಂಶಗಳು ಸಿಗುತ್ತದೆ. ಜೊತೆಗೆ ಇದರಲ್ಲಿ ಅಕ್ಕಿ ಹಿಟ್ಟು ಮತ್ತು ರವೆ ಬಳಸುವುದರಿಂದ ರುಚಿಯೂ ಚೆನ್ನಾಗಿರುತ್ತದೆ. ಆರೋಗ್ಯಕ್ಕೂ ಒಳ್ಳೆಯದು.

## ಐಟಂ ಸಾಂಗ್‌ನಲ್ಲಿ ಕುಣಿಯಲಿದ್ದಾರೆ ಜಾನ್ವಿ ಕಪೂರ್



ಬಾಲಿವುಡ್ ಸುರ ಸುಂದರಿ ಜಾನ್ವಿ ಕಪೂರ್ ಶೀಘ್ರದಲ್ಲೇ ಎನ್ಟಿಆರ್ ಅವರ ದೇವರ ಚಿತ್ರದ ಮೂಲಕ ಟಾಲಿವುಡ್ಗೆ ಎಂಟ್ರಿ ಕೊಡಲಿದ್ದಾರೆ. ಈ ಸಿನಿಮಾದ ಜೊತೆಗೆ ತೆಲುಗಿನಿಂದ ಹಲವು ಆಫರ್ ಗಳನ್ನು ಜಾನ್ವಿ ಕಪೂರ್ ಪಡೆಯುತ್ತಿದ್ದಾರೆ. ಇದೀಗ ಈ ಬ್ಯೂಟಿ ಅಲ್ಲು ಅರ್ಜುನ್ ಅವರ ಪುಷ್ಪ 2 ಚಿತ್ರದಲ್ಲೂ ಕಾಣಿಸಿಕೊಳ್ಳುವ ಸಾಧ್ಯತೆ ಇದೆ ಎಂಬ ಮಾತು ಕೇಳಿ ಬರುತ್ತಿದೆ. ಜಾನ್ವಿ ಕಪೂರ್ ಸದ್ಯ ಬಾಲಿವುಡ್ನಲ್ಲಿ ಉತ್ತಮ ಯಶಸ್ಸನ್ನು ಪಡೆಯುತ್ತಿರುವ ನಟಿ. ಮತ್ತೊಂದೆಡೆ, ರಾಮ್ ಚರಣ್ ಅವರ ಮುಂದಿನ ಚಿತ್ರದಲ್ಲಿ ಜಾನ್ವಿ ಕಪೂರ್ ಕಾಣಿಸಿಕೊಳ್ಳುವ ಸಾಧ್ಯತೆಗಳಿವೆ ಎನ್ನಲಾಗಿದೆ. ಈ ಹಿನ್ನಲೆಯಲ್ಲಿ ಸದ್ಯ ಟಾಲಿವುಡ್ ನಲ್ಲಿ ಟಾಕ್ ಆಫ್ ದಿ ಟೌನ್ ಆಗಿರುವ ಪುಷ್ಪಾ ಚಿತ್ರದಲ್ಲಿ ಈ ಬಾಲಿವುಡ್ ನಟಿಯೂ ಕಾಣಿಸಿಕೊಳ್ಳಲಿದ್ದಾರೆ ಎಂಬ ಮಾತು ಕೇಳಿ ಬರುತ್ತಿದೆ. ಸಮಂತಾ ಪುಷ್ಪ ಚಿತ್ರದಲ್ಲಿ ಐಟಂ ಸಾಂಗ್ ಗೆ ಹೆಜ್ಜೆ ಹಾಕುವ ಮೂಲಕ ಎಲ್ಲರನ್ನು ಅಚ್ಚರಿಗೊಳಿಸಿದ್ದಾರೆ. ಊ ಅಂತಾವಾ ಉಹೂ ಅಂತಾವಾ ಹಾಡು ಈ ಸಿನಿಮಾದ ಹೈಲೈಟ್ ಎನ್ನುವುದರಲ್ಲಿ ಎರಡು ಮಾತಿಲ್ಲ. ಸೋಷಿಯಲ್ ಮೀಡಿಯಾದಲ್ಲಿ ಸೆನ್ಸೇಷನ್ ಆಗಿರುವ ಈ ಹಾಡಿನಂತೆಯೇ ಪುಷ್ಪ 2 ಚಿತ್ರದಲ್ಲಿಯೂ ದೇವಿ ಶ್ರೀ ಪ್ರಸಾದ್ ಹೊಸ ಐಟಂ ಸಾಂಗ್ ಕಂಪೋಸ್ ಮಾಡಿದ್ದಾರೆ ಎಂಬ ಮಾತು ಕೇಳಿ ಬರುತ್ತಿದೆ. ಈ ಐಟಂ ಸಾಂಗ್ಗೆ ಸ್ಟೆಪ್ ಹಾಕಲು ಜಾನ್ವಿ ಕಪೂರ್ ಆಯ್ಕೆಯಾಗುತ್ತಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಆದರೆ ತೆಲುಗಿನಲ್ಲಿ ಕೆರಿಯರ್ ಆರಂಭಿಕ ಹಂತದಲ್ಲಿರುವ ಈ ಹೊತ್ತಿನಲ್ಲಿ ಜಾನ್ವಿ ಇಷ್ಟೊಂದು ರಿಸ್ಕ್ ತೆಗೆದುಕೊಳ್ಳುತ್ತಾರಾ ಎಂಬುದು ದೊಡ್ಡ ಪ್ರಶ್ನೆಯಾಗಿದೆ. ಯಾಕೆಂದರೆ ಪ್ರಾಕ್ಟಿಕಲ್ ಆಗಿ ಯೋಚಿಸಿದರೆ ಪುಷ್ಪ 1ರಲ್ಲಿ ಐಟಂ ಸಾಂಗ್ ಹಾಡಿದ ಸಮಂತಾ ಈಗಾಗಲೇ ತೆಲುಗಿನಲ್ಲಿ ಉತ್ತಮ ಸ್ಟಾರ್ ಸ್ಟೇಟಸ್ ಹೊಂದಿದ್ದರು. ಎಲ್ಲಾ ನಾಯಕರ ಜೊತೆ ಸಿನಿಮಾ ಮಾಡಿದ ಅನುಭವ ಕೂಡ ಹೊಂದಿದ್ದರು. ಸಮಂತಾ ಇಮೇಜ್ಗೆ ಧಕ್ಕೆ ಆಗಿಲ್ಲ. ಆದರೆ ಇಲ್ಲಿ ಜಾನ್ವಿ ಹಾಗಲ್ಲ. ಜಾನ್ವಿ ಇನ್ನೂ ಈಗ ತೆಲುಗಿಗೆ ಎಂಟ್ರಿ ಕೊಟ್ಟಿದ್ದಾರೆ. ದೇವರ ಚಿತ್ರಕ್ಕೂ ಮುನ್ನವೇ ಆಗಸ್ಟ್ 15 ರಂದು ಪುಷ್ಪ ಬಿಡುಗಡೆಯಾಗಲಿದೆ.



## ಮಣ್ಣಿನ ಮಡಕೆ ಪ್ರಯೋಜನ



### ಹೆಲ್ತ್ ಟಿಪ್ಸ್

ಪುರಾಣದಲ್ಲಿ ಮಣ್ಣಿಗೆ ಮಹತ್ವದ ಸ್ಥಾನವಿದೆ. ಪ್ರಾಚೀನ ಕಾಲದಲ್ಲಿ ಜೇಡಿಮಣ್ಣಿನ ಬಳಕೆ ಹೆಚ್ಚಾಗಿತ್ತು. ಪ್ರತಿಯೊಂದು ಕೆಲಸಕ್ಕೂ ಮಣ್ಣನ್ನು ಬಳಸ್ತಾ ಇದ್ದರು. ಭೋಜನ ಮಾಡುವ ಪಾತ್ರೆಯಿರಲಿ, ದೇವರ ಪೂಜೆಯ ವಸ್ತುವಿರಲಿ, ಮನೆಯನ್ನು ಸ್ವಚ್ಛಗೊಳಿಸುವುದಿರಲಿ ಎಲ್ಲದಕ್ಕೂ ಮಣ್ಣನ್ನು ಬಳಸ್ತಾ ಇದ್ರು. ವಾಸ್ತು ಶಾಸ್ತ್ರದ ಪ್ರಕಾರ ಮನೆಯಲ್ಲಿರುವ ಮಡಿಕೆ ಆರೋಗ್ಯ ವೃದ್ಧಿ ಜೊತೆಗೆ ಅದೃಷ್ಟ ಬದಲಾಯಿಸುತ್ತದೆ.

ದೇವರ ಮನೆಯಲ್ಲಿ ಮಣ್ಣಿನಿಂದ ಮಾಡಿದ ದೇವಾನುದೇವತೆಗಳನ್ನು ಪೂಜೆ ಮಾಡುವುದರಿಂದ ಆರ್ಥಿಕ ಸಮಸ್ಯೆ ದೂರವಾಗಿ ಧನಾಗಮನವಾಗುತ್ತದೆ.ಮನೆಗೆ ಅದೃಷ್ಟ ಬರಬೇಕೆಂದಾದಲ್ಲಿ ಆಗ್ನೇಯ ದಿಕ್ಕಿನಲ್ಲಿ ಮಣ್ಣಿನಿಂದ ಮಾಡಿದ ಹಕ್ಕಿಯನ್ನಿಡಿ.

ಮಣ್ಣಿನಿಂದ ಮಾಡಿದ ಮಡಿಕೆಯಲ್ಲಿ ಯಾವುದೇ ಪಾನೀಯ ಸೇವನೆ ಮಾಡುವುದರಿಂದ ರುಚಿ ಹೆಚ್ಚಾಗುತ್ತದೆ. ಹಾಗೆ ಜಾತಕದಲ್ಲಿ ಮಂಗಳ ಗ್ರಹದ ದೋಷವಿದ್ದಲ್ಲಿ ನಿವಾರಣೆಯಾಗುತ್ತದೆ.ಮನೆಯ ಈಶಾನ್ಯ ದಿಕ್ಕಿನಲ್ಲಿ ಹೂಜಿ ಇಡುವುದರಿಂದ ಸಕಾರಾತ್ಮಕ ಶಕ್ತಿ ಮನೆ ಪ್ರವೇಶ ಮಾಡುತ್ತದೆ.ಬೌದ್ಧಿಕ, ಆಧ್ಯಾತ್ಮಿಕ, ಮಾನಸಿಕ ತೊಂದರೆಯಿಂದ ಬಳಲುತ್ತಿರುವವರು ಮಣ್ಣಿನ ಹೂಜಿಯಲ್ಲಿ ಗಿಡಗಳಿಗೆ ನೀರು ಹಾಕಬೇಕು.ಮಣ್ಣಿನ ಮಡಿಕೆಯಲ್ಲಿ ನೀರು ಕುಡಿದ್ರೆ ಬುಧ ಹಾಗೂ ಚಂದ್ರನ ಕೃಪೆಗೆ ಪಾತ್ರರಾಗಬಹುದು. ಮನಸ್ಸಿಗೊಪ್ಪುವ ನೌಕರಿ ಪಡೆಯಲು ಮಣ್ಣಿನ ಹೂಜಿಯಲ್ಲಿ ನೀರು ತುಂಬಿ ಅದನ್ನು ಅರಳಿ ಮರಕ್ಕೆ ಹಾಕಬೇಕು.

## ಕಾಣದ ಧ್ವನಿಗಳ ಆಕಾರಗಳು ಪ್ರದರ್ಶನ





ಪ್ರಗತಿ ದಳವಿ ಜೈನ್ ಅವರು ಮಾರ್ಚ್ 6 ರವರೆಗೆ ಚಿತ್ರಕಲಾ ಪರಿಷತ್ತಿನಲ್ಲಿ ಕಾಣದ ಧ್ವನಿಗಳ ಆಕಾರಗಳನ್ನು ಪ್ರದರ್ಶಿಸುತ್ತಿದ್ದಾರೆ ? ಬೆಳಿಗ್ಗೆ 11 ನಿಂದ ಸಂಜೆ 7ಈ ಕಾರ್ಯಕ್ರಮವನ್ನು ನಳಿನಿ ಎಸ್ ಮಾಳವೀಯ ಅವರು ನಿರ್ವಹಿಸುತ್ತಿದ್ದಾರೆ. ಪ್ರಗತಿ ದಳವಿ ಜೈನ್ ಅವರ ಏಕವ್ಯಕ್ತಿ ಪ್ರದರ್ಶನವು ಅವರ ಇತ್ತೀಚಿನ ಬಹುಶಿಸ್ತೀಯ ಕೃತಿಗಳ ಸುತ್ತ ಕೇಂದ್ರೀಕೃತವಾಗಿದೆ, ಇದರಲ್ಲಿ ಪರಿಕಲ್ಪನಾ ಮತ್ತು ಕಾರ್ಯಕ್ಷಮತೆಯ ಛಾಯಾಚಿತ್ರಗಳು, ಶಿಲ್ಪಕಲೆ ಮತ್ತು ವೀಡಿಯೊ ಸ್ಥಾಪನೆಗಳು, ನೇರ ಪ್ರದರ್ಶನ ಮತ್ತು ವರ್ಣಚಿತ್ರಗಳು ಸೇರಿವೆ.

ಪರಿಕಲ್ಪನಾ ಕೃತಿಗಳು ಅವರ ಕಲಾ ಅಭ್ಯಾಸದ ಸುಮಾರು ಒಂದು ದಶಕದ ಅವಧಿಯನ್ನು ಹೊಂದಿದೆ ಮತ್ತು ಲಿಂಗ ಮತ್ತು ಗುರುತಿನ ರಾಜಕೀಯದಿಂದ ತಿಳಿಸಲಾದ ವೈಯಕ್ತಿಕ ಮತ್ತು ಸಾಮಾಜಿಕ ವಿಷಯಗಳನ್ನು ಅನ್ವೇಷಿಸುತ್ತದೆ. ಆಕೆಯ ಕೆಲಸವು ಹೊರಹೊಮ್ಮುತ್ತದೆ ಮತ್ತು ಸಂಶೋಧನೆಯಿಂದ ದೃಢೀಕರಿಸಲ್ಪಟ್ಟಿದೆ; ಅವರ ವಿಷಯಗಳು ನಮ್ಮ ದೈನಂದಿನ ಜೀವನದ ಭಾಗವಾಗಿರುವ ಜನರು, ಪ್ರಸ್ತುತ, ಆದರೆ ಆಗಾಗ್ಗೆ ಅಗೋಚರ ಮತ್ತು ಬಹು ಧ್ವನಿಗಳನ್ನು ಸಾಕಾರಗೊಳಿಸುತ್ತಾರೆ. ಈಗಿನ ಹಲವು ಮಹಿಳೆಯರು ಆಗಲೇ ಸಮಾಜದ ಅಂಚೆಯಲ್ಲಿದ್ದಾರೆ - ನಮ್ಮ ದೃಷ್ಟಿಗೆ ಬರದಂತೆ, ಗೋಚರಿಸದಂತೆ, ಲಕ್ಷಿತವಾಗದಂತೆ ಅಥವಾ ಯಾರ ಗುರಿಯಿಂದಲಾದರೂ ಅವರ ಗುರುತುಗಳು ಅಮೂಲ್ಯವಲ್ಲ ಎಂಬುದರ ಪರಿಧಿಯಲ್ಲಿ ಇವರು ಇರುತ್ತಾರೆ. ವಿಸ್ತಾರವಾದ ಸ್ಥಿರ ಮತ್ತು ಚಲನಮಾನ ಚಿತ್ರಗಳನ್ನು ಬಳಸಿ, ಪ್ರಗತಿ ಸಾಮಾಜಿಕ ಸಂದರ್ಭಗಳಲ್ಲಿ ವ್ಯವಸ್ಥಾತ್ಮಕ ಶೂನ್ಯತೆಗೆ ಗಮನ ಸೆಳೆಯುತ್ತಾರೆ, ಅಲ್ಲಿ ಅಗೋಚರಿಸುವಎಂಬುದು ಸ್ವಾಭಾವಿಕವಾಗಿರುತ್ತದೆ ಮತ್ತು ಒಂದು ನಿರಾಶ್ರಯ ಪ್ರಕ್ರಿಯೆಯ ಭಾಗವಾಗಿರುತ್ತದೆ. ಸಮಾಜದ ಭಾಗಗಳನ್ನು ಇತರಎಂದು ಮಾಡುವುದು ಸಮಸ್ಯೆಗಳಿಂದ ಮೂಡಿದೆ, ಈ ಸಮಸ್ಯೆಗಳು ವರ್ಷಗಳ ಅಭ್ಯಾಸದಿಂದ ಬರುವಂಥವು, ಮತ್ತು ಭೌಗೋಳಿಕ ಮತ್ತು ರಾಜಕೀಯ ದಿಕ್ಕುಗಳಿಗೆ ಸಂಬಂಧಿಸಿದ ಸಾಮಾಜಿಕ, ಸಾಮಾಜಿಕ-ಆರ್ಥಿಕ ಮತ್ತು ಸಾಂಪ್ರದಾಯಿಕ ಪರಿಪ್ರೇಕ್ಷ್ಯಗಳ ಸುದ್ದಿಗಳಿಂದ ಹುಟ್ಟಿದವು. ಒಬ್ಬ ತೀಕ್ಷ್ಣ ವೀಕ್ಷಕನಾಗಿ, ಪ್ರಗತಿಯು ಸಾರ್ವಜನಿಕ ಮತ್ತು ನಿಕಟ ಸ್ಥಳಗಳಲ್ಲಿ ಜನರ ಮುಖ ಮತ್ತು ದೈಹಿಕ ಅಭಿವ್ಯಕ್ತಿಗಳನ್ನು ಪರಿಶೀಲಿಸುತ್ತದೆ ಮತ್ತು ದೇಹ ಭಾಷೆಯ ಮೂಲಕ ಪ್ರತಿಫಲಿಸುವ ಅಮೂರ್ತ ಭಾವನೆಗಳೊಂದಿಗೆ ಪರಸ್ಪರ ಸಂಬಂಧ ಹೊಂದಿದೆ. ದೇಹ ಮತ್ತು ಮನಸ್ಸಿನ ಪರಸ್ಪರ ಸಂಬಂಧದ ಸುತ್ತ ಚಿತ್ರಕಲೆಯಿಂದ ಪ್ರದರ್ಶನ ಕಲೆಯವರೆಗೆ ಅವರ ಅಭ್ಯಾಸದ ವಿಸ್ತರಣೆಗೆ ಇದು ಕೊಡುಗೆ ನೀಡಿದೆ. ಅವರ ಇತ್ತೀಚಿನ ಒಂದು ಪ್ರಾಜೆಕ್ಟ್ನ ಮುಖ್ಯವಾಗಿ ಈಔಕ (ಫೈಬ್ರೋಡೈಸ್ಪ್ಲೇಸಿಯಾ ಆಸಿಫಿಕ್ಯಾನ್ಸ್ ಪ್ರೊಗ್ರೆಸಿವಾ) ಸುಂದರ ಔಷಧಿಯ ಬಗ್ಗೆ ಜಾಣತನ ರಚಿಸುವುದರ ಮೇಲೆ ಕೇಂದ್ರಿತವಾಗಿದೆ, ಮತ್ತು ಅದರ ಅಸಾಧಾರಣ ಚಿಕಿತ್ಸಾ ರೋಗ, ಮತ್ತು ಅದು ರೋಗಿಗಳ ಮತ್ತು ಅವರ ಆರೋಗ್ಯದ ಕೈಗಳ ಮೇಲೆ ಹೇಗೆ ಪರಿಣಾಮವನ್ನು ಬೀರುತ್ತದೆ ಎಂಬುದರ ಕುರಿತಾಗಿ ಜಾಗರೂಕತೆ ರಚಿಸುವುದಲ್ಲದೆ, ಅದು ತೀವ್ರ, ದುಃಖಕರವಾದ ಅವಸ್ಥೆಯಾಗಿ ಮುನ್ನುಡಿದಂತೆ, ಮಾಂಸಪೇಶಿಗಳನ್ನು ಎಣ್ಣೆಗಳಾಗಿ ಬದಲಾಯಿಸುತ್ತದೆ, ಮತ್ತು ರೋಗಿಗಳನ್ನು ಶಾರೀರಿಕವಾಗಿ ಅಚಲಗೊಳಿಸುತ್ತದೆ, ಅವರನ್ನು ಬಿಸಿಲಿಗೆ ಹಾಕುತ್ತದೆ. ಸ್ಟ್ರೆಚಿಂಗ್ ಮೈ ಡ್ರೀಮ್ಸ್ ಛಾಯಾಚಿತ್ರಗಳು ಮತ್ತು ವೀಡಿಯೊಗಳ ಸರಣಿಯು ಭಾರತೀಯ ರೋಗಿಗಳು ಮತ್ತು ಅವರ ಆರೈಕೆದಾರರೊಂದಿಗಿನ ಸಂಭಾಷಣೆಗಳಿಂದ ಹೊರಹೊಮ್ಮಿತು, ಅವರ ಸಂದರ್ಭಗಳು ಮತ್ತು ಆಕಾಂಕ್ಷೆಗಳನ್ನು ಪರಿಶೀಲಿಸುತ್ತದೆ, ಕಾರ್ಯಕ್ಷಮತೆಯ ಕೃತಿಗಳನ್ನು ರಚಿಸುತ್ತದೆ. ಇದು ಅವರ ಕನಸುಗಳನ್ನು ಹೆಚ್ಚುವರಿ ದೈಹಿಕ ಅನುಭವವಾಗಿ ಮರು/ಪ್ರಸ್ತುತಿಸಿದೆ, ಅಲ್ಲಿ ದೇಹವು ಸೀಮಿತವಾಗಿದೆ, ಆದರೆ ಆಲೋಚನೆಗಳು, ಭಾವನೆಗಳು ಮತ್ತು ಆಸೆಗಳು ಅವಿಚ್ಛಿನ್ನವಾಗಿ ಚಲಿಸುತ್ತವೆ. ಮತ್ತೊಂದು ಪ್ರಾಜೆಕ್ಟ್, ಹರ್ ರಿಮೇನ್ಸ್ಅದು ಹಿಂದಿನ ವರ್ಷ ಪೂರೈಸಿದ್ದು, ಫೋಟೋಗಳ ಸಂರಚನೆಗಳ ಸರಣಿಯಾಗಿದೆ.

## ಕಪ್ಪು ಕಲೆಗೆ ಹೇಳಿ ಗುಡ್ ಬೈ..

### ಬ್ಯೂಟಿ ಟಿಪ್ಸ್



ಹೆಚ್ಚಿನ ಜನರು ಮುಖ, ಕೈ ಹಾಗೂ ಕಾಲಿನ ಸೌಂದರ್ಯಕ್ಕೆ ಹೆಚ್ಚಿನ ಮಹತ್ವ ನೀಡ್ತಾರೆ. ಬೆನ್ನು, ಕುತ್ತಿಗೆಯನ್ನು ಮರೆತು ಬಿಡ್ತಾರೆ. ಸೂರ್ಯನ ಕಿರಣದಿಂದ ಕುತ್ತಿಗೆ ಹಾಗೂ ಬೆನ್ನು ಕಪ್ಪಾಗಿರುತ್ತದೆ. ಚೆಂದದ, ಡೀಪ್ ಬಟ್ಟೆ ಧರಿಸಿದಾಗ ಕುತ್ತಿಗೆ ಹಾಗೂ ಬೆನ್ನಿನ ಕಪ್ಪು ಕಲೆ ಸೌಂದರ್ಯವನ್ನು ಹಾಳು ಮಾಡುತ್ತದೆ.
ಈ ಕಪ್ಪು ಕಲೆ ಹೋಗಲಾಡಿಸಲು ದುಬಾರಿ ಹಣ ನೀಡಿ ಬ್ಯೂಟಿ ಪಾರ್ಲರ್ ಗೆ ಹೋಗಬೇಕಾಗಿಲ್ಲ. ಮನೆಯಲ್ಲಿಯೇ ಸಿಗುವ ವಸ್ತುಗಳನ್ನು ಹಚ್ಚಿ ಕಪ್ಪಾದ ಕುತ್ತಿಗೆಯನ್ನು ಬೆಳ್ಳಗೆ ಮಾಡಿಕೊಳ್ಳಬಹುದು.
**ಸೌತೆಕಾಯಿ:** ಸೌತೆಕಾಯಿಯನ್ನು ಹೆಚ್ಚಾಗಿ ಸಲಾಡ್ ಗೆ ಬಳಸ್ತೇವೆ. ಆದ್ರೆ ಈ ಸೌತೆಕಾಯಿ ರಸ ಕಪ್ಪು ಕಲೆ ಹೋಗಲಾಡಿಸುತ್ತದೆ. ಸೌತೆಕಾಯಿ ತುರಿದು ಅಥವಾ ರಸ ಮಾಡಿ ಅದನ್ನು ಕಪ್ಪು ಕಲೆಯಿರುವ ಜಾಗಕ್ಕೆ ಹಚ್ಚಬೇಕು. ನಿಧಾನವಾಗಿ ಕೈನಿಂದ ಮಸಾಜ್ ಮಾಡಬೇಕು.
ಕಿತ್ತಳೆ ಹಣ್ಣಿನ ಸಿಪ್ಪೆ : ಕಿತ್ತಳೆ ಹಣ್ಣಿನ ಸಿಪ್ಪೆ ತೆಗೆದು ಅದನ್ನು ಒಣಗಿಸಿ ಪುಡಿ ಮಾಡಿ. ಈ ಪುಡಿಯನ್ನು ಹಾಲಿನ ಜೊತೆ ಸೇರಿಸಿ ಪೇಸ್ಟ್ ತಯಾರಿಸಿಕೊಳ್ಳಿ. ಈ ಪೇಸ್ಟನ್ನು ಕುತ್ತಿಗೆ ಹಾಗೂ ಬೆನ್ನಿಗೆ ಹಚ್ಚಿ ಸ್ವಲ್ಪ ಸಮಯ ಬಿಟ್ಟು ತೊಳೆದುಕೊಳ್ಳಿ.
**ಮೊಸರು:** ಚರ್ಮದ ಕಪ್ಪು ಕಲೆ ತೆಗೆಯಲು ಮೊಸರು ಸಹಾಯ ಮಾಡುತ್ತದೆ. ಅದ್ರಲ್ಲಿರುವ ನೈಸರ್ಗಿಕ ಗುಣ ಚರ್ಮವನ್ನು ಸ್ವಚ್ಛಗೊಳಿಸುತ್ತದೆ. ಮೊಸರನ್ನು ಕುತ್ತಿಗೆಗೆ ಹಾಕಿ ಮಸಾಜ್ ಮಾಡಿ ಸ್ವಲ್ಪ ಸಮಯ ಬಿಟ್ಟು ತೊಳೆಯಿರಿ.
**ಟೋಮೋಟೋ ಮತ್ತು ಜೇನು:** ಟೋಮೋಟೋ ರಸ ಹಾಗೂ ಜೇನು ತುಪ್ಪವನ್ನು ಬೆರೆಸಿ ಪೇಸ್ಟ್ ಸಿದ್ಧಪಡಿಸಿಕೊಳ್ಳಿ. ಅದನ್ನು 20 ನಿಮಿಷಗಳ ಕಾಲ ಕುತ್ತಿಗೆಗೆ ಹಚ್ಚಿ ಮಸಾಜ್ ಮಾಡಿ. ಒಂದು ವಾರಗಳ ಕಾಲ ಈ ಮದ್ದು ಬಳಸಿದ್ರೆ, ಕಪ್ಪು ಕಲೆ ಮಾಯವಾಗುತ್ತದೆ.
**ಅಡುಗೆ ಸೋಡಾ:** ಅಡುಗೆ ಸೋಡಾ ಜೊತೆ ನೀರು ಬೆರಸಿ ಮಿಶ್ರಣ ತಯಾರಿಸಿಕೊಳ್ಳಿ. ಅದನ್ನು ಕುತ್ತಿಗೆಗೆ ಹಚ್ಚಿ ಸ್ವಲ್ಪ ಸಮಯ ಬಿಟ್ಟು ಗುಲಾಬಿ ನೀರು ಹಾಕಿ ಸ್ವಚ್ಛಗೊಳಿಸಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವಿದ್ಯಾರ್ಥಿಗಳಲ್ಲಿ ಪ್ರಗತಿ, ದೈನಂದಿನ ಕೆಲಸಗಳಲ್ಲಿ ಬದಲಾವಣೆ, ಸ್ನೇಹಿತರಿಂದ ಧನಾಗಮನ.

**ವೃಷಭ:** ವ್ಯಾಪಾರದಲ್ಲಿ ಅಲ್ಪ ಲಾಭ, ಕೋರ್ಟ್ ವ್ಯವಹಾರಗಳಲ್ಲಿ ಜಯ, ಮನಶಾಂತಿ, ಸ್ಥಿರಾಸ್ತಿ ಮಾರಾಟ, ದ್ವಿಚಕ್ರವಾಹನದಿಂದ ತೊಂದರೆ.

**ಮಿಥುನ:** ಕೆಲಸಗಳು ಅಂತಿಮಕ್ಕೆ ಬರಲಿವೆ, ಪರಸ್ಥಳವಾಸ, ಹಿರಿಯರಿಂದ ನೆರವು, ಅನಾರೋಗ್ಯ.

**ಕಟಕ:** ಮಾನಸಿಕ ಒತ್ತಡ, ಶರೀರದಲ್ಲಿ ಆಲಸ್ಯ, ಆತಂಕ ಹೆಚ್ಚುವುದು, ಅಕಾಲ ಭೋಜನ.

**ಸಿಂಹ:** ವಿವಾದ, ನೋವು, ದೃಷ್ಟಿ ದೋಷದಿಂದ ತೊಂದರೆ, ತಾಳ್ಮೆ ಅಗತ್ಯ, ಶತ್ರು ಭಾದೆ.

**ಕನ್ಯಾ:** ಪರರಿಗೆ ಸಹಾಯ ಮಾಡುವಿರಿ, ಸಕಲ ಕಾರ್ಯಗಳಲ್ಲಿ ಅಡ್ಡಿ, ಆತಂಕ, ಶತ್ರು ಭಾದೆ, ಉದ್ಯೋಗದಲ್ಲಿ ವರ್ಗಾವಣೆ.

**ತುಲಾ:** ಮಾತೃವಿನಿಂದ ಸಹಾಯ, ವಾಹನ ರಿಪೇರಿ, ದುಷ್ಟ ಜನರ ಸಹವಾಸ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು.

**ವೃಶ್ಚಿಕ:** ಆದಾಯಕ್ಕಿಂತ ಖರ್ಚು ಜಾಸ್ತಿ, ಸುಳ್ಳು ಮಾತನಾಡುವಿರಿ, ನೆಮ್ಮದಿ ಇಲ್ಲದ ಜೀವನ, ವಾಸ ಗೃಹದಲ್ಲಿ ತೊಂದರೆ.

**ಧನಸ್ಸು:** ಪರಸ್ತ್ರೀ ಸಹವಾಸದಿಂದ ತೊಂದರೆ, ಅಪವಾದ, ಚಂಚಲ ಮನಸ್ಸು, ಧನ ನಷ್ಟ, ಆಕಸ್ಮಿಕ ಖರ್ಚು

**ಮಕರ:** ಆಲಸ್ಯ ಮನೋಭಾವ, ಕಾರ್ಯ ವಿಕಲ್ಪ, ದ್ವೇಷ, ವಿರೋಧಿಗಳಿಂದ ತೊಂದರೆ, ಗುಪ್ತಾಂಗ ರೋಗಗಳು

**ಕುಂಭ:** ಕುಟುಂಬ ಸೌಖ್ಯ, ಶೀತ ಸಂಬಂಧ ರೋಗಗಳು, ಅಲೆದಾಟ, ಸುಖ ಭೋಜನ, ಯಾರನ್ನು ಹೆಚ್ಚಾಗಿ ನಂಬಬೇಡಿ,

**ಮೀನ:** ನಾನು ರೀತಿಯ ಚಿಂತೆ, ಋಣ ಬಾಧೆ, ಸ್ಥಳ ಬದಲಾವಣೆ, ಅಲಂಕಾರಿಕ ವಸ್ತುಗಳಿಗೆ ಖರ್ಚು, ಪ್ರಿಯ ಜನರ ಭೇಟಿ.

## HPV ಜಾಗೃತಿ ದಿನ




ಅಂತರರಾಷ್ಟ್ರೀಯ HPV ಜಾಗೃತಿ ದಿನವನ್ನು ವಾರ್ಷಿಕವಾಗಿ ಮಾರ್ಚ್ 4 ರಂದು ಆಚರಿಸಲಾಗುತ್ತದೆ. HPVಬಗ್ಗೆ ಜಾಗೃತಿ ಮೂಡಿಸಲು ಇದನ್ನು ಸ್ಥಾಪಿಸಲಾಗಿದೆ. ವ್ಯಾಕ್ಸಿನೇಷನ್ ಮತ್ತು ಇತರ ತಡೆಗಟ್ಟುವ ಕ್ರಮಗಳ ಬಗ್ಗೆ ಜನರಿಗೆ ಶಿಕ್ಷಣ ನೀಡಿ. HPVಯ ಅಪಾಯಗಳು, ಚಿಹ್ನೆಗಳು ಮತ್ತು ರೋಗಲಕ್ಷಣಗಳನ್ನು ಜನರು ಚೆನ್ನಾಗಿ ಅರ್ಥಮಾಡಿಕೊಳ್ಳಲು ಇದು ಅನುಮತಿಸುತ್ತದೆ. ಗರ್ಭಕಂಠದ ಕ್ಯಾನ್ಸರ್ಗೆ ವೈರಸ್ ಪ್ರಮುಖ ಕಾರಣ ಎಂದು ತಿಳಿದುಬಂದಿದೆ. ಈ ವೈರಸ್ ಕೆಲವು ವಿಧದ ಚರ್ಮ ಮತ್ತು ಲೋಳೆಪೊರೆಯ ಕ್ಯಾನ್ಸರ್ಗಳಿಗೆ ಕಾರಣವಾಗುತ್ತದೆ ಎಂದು ತಿಳಿದುಬಂದಿದೆ.

HPV ಬಗ್ಗೆ ಜಾಗೃತಿ ಮೂಡಿಸುವ ಮೂಲಕ ಉತ್ತಮ ಸಾರ್ವಜನಿಕ ಆರೋಗ್ಯವನ್ನು ಉತ್ತೇಜಿಸಲು ಈ ವಿಶೇಷ ದಿನವನ್ನು ಬಳಸಲಾಗುತ್ತದೆ. ಇದು ವಿಶ್ವಾದ್ಯಂತ ಗುರುತಿಸಲ್ಪಟ್ಟ ರಜಾದಿನವಾಗಿದೆ. ವೈರಸ್ ಹರಡುವುದನ್ನು ಪರಿಣಾಮಕಾರಿಯಾಗಿ ತಡೆಯಲು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಸಾರ್ವಜನಿಕರಿಗೆ ತಿಳಿಸುವುದು ಇದರ ಮುಖ್ಯ ಗುರಿಯಾಗಿದೆ. ಅಂತರರಾಷ್ಟ್ರೀಯ HPV ಜಾಗೃತಿ ದಿನವು HPV- ಸಂಬಂಧಿತ ಕ್ಯಾನ್ಸರ್ಗಳಿಂದ ಬದುಕುಳಿದವರನ್ನು ಗುರುತಿಸಲು ಮತ್ತು ಆಚರಿಸಲು ಒಂದು ಅವಕಾಶವಾಗಿದೆ. ಎಚ್.ಪಿ.ವಿ. ಬಹಳಷ್ಟು ಜನರ ಮೇಲೆ ಪರಿಣಾಮ ಬೀರುವ ಪ್ರಮುಖ ಆರೋಗ್ಯ ಸಮಸ್ಯೆಯಾಗಿದೆ.

ಇಂಟರ್ನ್ಯಾಷನಲ್ ಪ್ಯಾಪಿಲೋಮವೈರಸ್ ಸೊಸೈಟಿಯ ಪ್ರಕಾರ, ಈ ರೋಗವು ಪ್ರತಿ ವರ್ಷ 700,000 ಜನರ ಮೇಲೆ ಪರಿಣಾಮ ಬೀರುತ್ತದೆ. HPV ಕುರಿತು ಇನ್ನಷ್ಟು ತಿಳಿದುಕೊಳ್ಳಲು ಜಗತ್ತಿನಾದ್ಯಂತ ಎಲ್ಲರಿಗೂ ಸಹಾಯ ಮಾಡುವುದು ಗುರಿಯಾಗಿದೆ. ಮತ್ತು ವೈರಸ್ ಹರಡುವುದನ್ನು ತಡೆಯಲು ಕ್ರಮ ಕೈಗೊಳ್ಳುವ ಕ್ರಮಗಳನ್ನು ಕೈಗೊಳ್ಳಿ. ಎಚ್.ಪಿ.ವಿ. ಅಪಾಯಕಾರಿಯಾದ ಸಾಮಾನ್ಯ ವೈರಸ್. ಇದು ಗರ್ಭಕಂಠದ ಕ್ಯಾನ್ಸರ್, ಚರ್ಮದ ಕ್ಯಾನ್ಸರ್ ಮತ್ತು ಗಂಟಲಿನ ಕ್ಯಾನ್ಸರ್ ಸೇರಿದಂತೆ ವಿವಿಧ ರೀತಿಯ ಕ್ಯಾನ್ಸರ್ಗೆ ಕಾರಣವಾಗುತ್ತದೆ ಎಂದು ತಿಳಿದಿದೆ.ಎಚ್.ಪಿ.ವಿ. ಸೋಂಕಿತ ವ್ಯಕ್ತಿಯೊಂದಿಗೆ ನೇರ ಸಂಪರ್ಕದ ಮೂಲಕ ಹರಡುತ್ತದೆ. ಹೆಚ್ಚಿನ ಸಂದರ್ಭಗಳಲ್ಲಿ ಸೋಂಕು ಲಕ್ಷಣರಹಿತವಾಗಿರುತ್ತದೆ ಮತ್ತು ರೋಗಕಾರಕ ಪರಿಣಾಮವನ್ನು ಅಭಿವೃದ್ಧಿಪಡಿಸುವ ಮೊದಲು ಪ್ರತಿರಕ್ಷಣಾ ವ್ಯವಸ್ಥೆಯಿಂದ ವೈರಸ್ ಹೊರಹಾಕಬಹುದು. ಇದು ವೈರಲ್ ಕಾಯಿಲೆಗೆ ಕಾರಣವಾಗಬಹುದು, ಅದು ವಿಭಿನ್ನ ರೀತಿಯಲ್ಲಿ ಪ್ರಕಟವಾಗುತ್ತದೆ. ಇದು ಕ್ಯಾನ್ಸರ್, ಚರ್ಮದ ಗಾಯಗಳು ಮತ್ತು ಲೋಳೆಯ ಪೊರೆಗಳಿಗೆ ಕಾರಣವಾಗಬಹುದು.

# ರಾಜಕೀಯಕ್ಕೆ ಗುಡ್ ಬೈ ಹೇಳಿದ ಬಿಜೆಪಿ ಸಂಸದ ಹರ್ಷವರ್ಧನ್!



**ನವದೆಹಲಿ:** ಮುಂಬರುವ ಲೋಕಸಭಾ ಚುನಾವಣೆಗೆ ಬಿಜೆಪಿ ಶನಿವಾರ(ಮಾರ್ಚ್ 2) ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಟಿಕೆಟ್ ಕೈ ತಪ್ಪಿದ ಹಿನ್ನೆಲೆ ಕೇಂದ್ರದ ಮಾಜಿ ಸಚಿವ ಮತ್ತು ಬಿಜೆಪಿ ಸಂಸದ ಹರ್ಷವರ್ಧನ್ ಅವರು ಭಾನುವಾರ(ಮಾ.3) ರಾಜಕೀಯಕ್ಕೆ ವಿದಾಯ ಘೋಷಿಸಿದ್ದಾರೆ.

ಈ ಬಗ್ಗೆ ಟ್ವೀಟ್ ಭಾನುವಾರ ಮಾಡಿರುವ ಅವರು, 30 ವರ್ಷಗಳಚುನಾವಣಾವೃತ್ತಿಜೀವನದ ನಂತರ ನಾನು ಎಲ್ಲಾ 5 ವಿಧಾನಸಭಾ ಮತ್ತು 2 ಸಂಸತ್ತಿನ ಚುನಾವಣೆಗಳನ್ನು ಉತ್ತಮ ಅಂತರದಿಂದ ಗೆದ್ದು, ಪಕ್ಷ ಸಂಘಟನೆ, ರಾಜ್ಯ ಮತ್ತು ಕೇಂದ್ರದ ಸರ್ಕಾರಗಳಲ್ಲಿ ಪ್ರತಿಷ್ಠಿತ ಸ್ಥಾನಗಳನ್ನು ಹೊಂದಿದ್ದೇನೆ. ಇದೀಗ ನಾನು ನನ್ನ ಮೂಲಕ್ಕೆ ಮರಳಲು ಅಂತಿಮವಾಗಿ ತಲೆಬಾಗುತ್ತೇನೆ. ನಾನು ಮುಂದುವರಿಯುತ್ತೇನೆ, ನನಗೆ ಇನ್ನು ಕಾಯಲು ಸಾಧ್ಯವಿಲ್ಲ. ನನ್ನ ಕ್ಷೇತ್ರದ ಜನರ ಆಸೆಗಳನ್ನು ಪೂರ್ತಿ ಮಾಡುವ ಭರವಸೆ ಹೊಂದಿದ್ದೇನೆ. ನಾನು ಇನ್ನೂ ಹಲವಾರು ಮೈಲುಗಳನ್ನು ಕ್ರಮಿಸಿಬೇಕಿದೆ. ಕೃಷ್ಣಾದಲ್ಲಿರುವ ನನ್ನ ಇಎಖಿ ಕ್ಲಿನಿಕ್ ನಗರವೂ ನನ್ನ ವಾಪಸಾತಿಗೆ ಕಾಯುತ್ತಿದೆ ಎಂದು ಭಾವನಾತ್ಮಕವಾಗಿ ಬರೆದುಕೊಂಡಿದ್ದಾರೆ.ಸಂಸದ ಹರ್ಷವರ್ಧನ್ ಅವರು ವೃತ್ತಿಯಲ್ಲಿ ವೈದ್ಯರಾಗಿದ್ದು, ರಾಜಕೀಯ ನಿವೃತ್ತಿ ಘೋಷಣೆ ಬಳಿಕ ಅವರು ಮತ್ತೆ ವೈದ್ಯ ವೃತ್ತಿಗೆ ಮರಳುವುದಾಗಿ ಹೇಳಿದ್ದಾರೆ. ಕೇಂದ್ರದಲ್ಲಿ ಅವರು ಆರೋಗ್ಯ ಸಚಿವರಾಗಿಯೂ ಸೇವೆ ಸಲ್ಲಿಸಿದ್ದರು. ಲೋಕಸಭಾ ಚುನಾವಣೆಗೆ ಆಡಳಿತಾರೂಢ ಬಿಜೆಪಿ 195 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಪ್ರಕಟಿಸಿದೆ. ಆದರೆ ಹಾಲಿ ಸಂಸದರಾದ ಪರ್ವೇಶ್ ವರ್ಮಾ, ರಮೇಶ್ ಬಿಧುರಿ, ಮೀನಾಕ್ಷಿ ಲೇಖಿ ಮತ್ತು ಹರ್ಷವರ್ಧನ್‌ರನ್ನು ಕೈಬಿಡಲಾಗಿದೆ. ಇವರ ಬದಲಿಗೆ ಹೊಸ ಮುಖಗಳನ್ನು ಕಣಕ್ಕಿಳಿಸಿದೆ.

## ಇಸ್ರೇಲ್-ಹಮಾಸ್ ಕದನದ ಅಂತ್ಯಕ್ಕೆ ಕರೆ ನೀಡಿದ ಪೋಪ್ ಫ್ರಾನ್ಸಿಸ್

**ವ್ಯಾಟಿಕನ್ ಸಿಟಿ :** ಪ್ಯಾಲೆಸ್ತೀನ್ ಹಾಗೂ ಇಸ್ರೇಲ್ ನಲ್ಲಿ ನಡೆಯುತ್ತಿರುವ ಒತ್ತೆಯಾಳುಗಳು, ಸಾವಿರಾರು ಮಂದಿಯ ಮೃತ್ಯು, ಗಾಯಾಳುಗಳು ಹಾಗೂ ನಿರಾಶ್ರಿತರ ನೋವನ್ನು ನಾನು ಪ್ರತಿ ದಿನ ನನ್ನ ಹೃದಯದಲ್ಲಿಟ್ಟುಕೊಂಡು ಓಡಾಡುತ್ತಿದ್ದೇನೆ. ಗಾಝಾದಲ್ಲಿನ ಕದನವನ್ನು ಅಂತ್ಯಗೊಳಿಸಬೇಕು ಎಂದು ಪೋಪ್ ಫ್ರಾನ್ಸಿಸ್ ಕರೆ ನೀಡಿದ್ದಾರೆ. ರೋಮ್ ನ ಆಯಂಗೆಲುಸ್ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಅವರು ಈ ಮಾತುಗಳನ್ನು ಹೇಳಿದ್ದಾರೆ. ಸೇಂಟ್ ಪೀಟರ್ಸ್ ನಲ್ಲಿ ಭಕ್ತಾದಿಗಳನ್ನುದ್ದೇಶಿಸಿ ಮಾತನಾಡಿದ ಫ್ರಾನ್ಸಿಸ್, ಹಮಾಸ್ –ಇಸ್ರೇಲ್ ಬಿಕ್ಕಟ್ಟಿನಿಂದ ಮಕ್ಕಳ ಮೇಲಾಗಿರುವ ಪರಿಣಾಮಗಳನ್ನು ಒತ್ತಿ ಹೇಳಿದ್ದು, ಅಕ್ಟೋಬರ್ 7ರಂದು ನಡೆದ ಹಮಾಸ್ ದಾಳಿಯಲ್ಲಿ ಒತ್ತೆಯಾಳು 'ಗಳನ್ನಾಗಿಸಿಕೊಂಡಿರುವವರನ್ನು ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ. ನೀವು ಈ ಮಾರ್ಗದಲ್ಲಿ ಉತ್ತಮ ಜಗತ್ತನ್ನು ನಿರ್ಮಿಸಬಹುದು ಎಂದು ನಿಜಕ್ಕೂ ನಂಬಿಕೊಂಡಿದ್ದೀರಾ? ನಿಜಕ್ಕೂ ಶಾಂತಿಯನ್ನು ಸ್ಥಾಪಿಸಬಹುದು ಎಂದು ನೀವು ಭಾವಿಸಿದ್ದೀರಾ? ದಯವಿಟ್ಟು ಸಾಕು! ನಾವೆಲ್ಲರೂ ದಯವಿಟ್ಟು ಸಾಕು ಎಂದು ಹೇಳೋಣ! ನಿಲ್ಲಿಸಿ ಎಂದು ಫ್ರಾನ್ಸಿಸ್ ಕರೆ ನೀಡಿದ್ದಾರೆ.



## 2ನೇಯ ಬಾರಿಗೆ ಪಾಕ್ ಪ್ರಧಾನಿಯಾಗಿ ಆಯ್ಕೆಯಾದ ಶೆಹಬಾಜ್ ಷರೀಫ್



**ಪಾಕಿಸ್ತಾನ:** ಹಲವು ಅಡಚಣೆಗಳ ನಡುವೆ ಪಾಕಿಸ್ತಾನದ ಪ್ರಧಾನಿಯಾಗಿ ಶೆಹಬಾಜ್ ಷರೀಫ್ 2 ಬಾರಿ ಆಯ್ಕೆಯಾಗಿದ್ದಾರೆ. ತಿಂಗಳ ಹಿಂದೆ ನಡೆದಿದ್ದ ಚುನಾವಣೆಯಲ್ಲಿ ಸರಿಯಾಗಿ ಫಲಿತಾಂಶ ಬಾರದ ಕಾರಣ, ಪಾಕಿಸ್ತಾನದ ಪ್ರಧಾನಿ ಯಾರಾಗಬೇಕು ಎಂಬುದು ನಿರ್ಧರಿತವಾಗಿರಲಿಲ್ಲ.ಆದರೆ ಇದೀಗ ಶೆಹಬಾಜ್ ಪ್ರಧಾನಿಯಾಗಿ ಆಯ್ಕೆಯಾಗಿದ್ದಾರೆ. ಈ ಮೂಲಕ ಶೆಹಬಾಜ್ ಎರಡನೇಯ ಬಾರಿ ಪಾಕಿಸ್ತಾನದ ಪ್ರಧಾನಿಯಾಗಿದ್ದಾರೆ. ಫಲಿತಾಂಶ ಸರಿಯಾಗಿ ಪ್ರಕಟವಾಗದ ಹಿನ್ನೆಲೆಯಲ್ಲಿ ಅಸೆಂಬ್ಲಿಯಲ್ಲಿ ಪ್ರಧಾನಿ ಮಂತ್ರಿ ಆಯ್ಕೆಯ ಸಭೆ ನಡೆಸಲಾಯಿತು. ಈ ವೇಳೆ ಶೆಹಬಾಜ್‌ರನ್ನೇ ಹಲವರು ಪ್ರಧಾನಿಯಾಗಿ ಘೋಷಿಸಿದ್ದಾರೆ. 201 ವೋಟ್ ಗಿಟ್ಟಿಸಿಕೊಳ್ಳುವ ಮೂಲಕ ಶೆಹಬಾಜ್ ವಿನ್ ಆಗಿದ್ದಾರೆ. 3 ಬಾರಿ ಪಾಕ್ ಪ್ರಧಾನಿಯಾಗಿರುವ ನವಾಜ್ ಷರೀಫ್ ಸಹೋದರ ಶೆಹಬಾಜ್ ಶರೀಫ್.ಪಾಕಿಸ್ತಾನ್ ಮುಸ್ಲಿಂ ಲೀಗ್ ನವಾಜ್ ಪಕ್ಷದವರಾದ ಶೆಹಬಾದ್, ಸರ್ಕಾರ ರಚನೆಗಾಗಿ ಪೀಪಲ್ಸ್ ಪಾರ್ಟಿಯೊಂದಿಗೆ ಮೈತ್ರಿ ಮಾಡಿಕೊಂಡಿದೆ.

## ನೌಕಾಪಡೆಗೆ ಎಂಹೆಚ್ 60ಆರ್ ಸೀಹಾಕ್ ಹೆಲಿಕಾಪ್ಟರ್ ನಿಯೋಜನೆಗೆ ಸಿದ್ಧತೆ

**ನವದೆಹಲಿ:** ಭಾರತೀಯ ಸೇನೆಗೆ ನೂತನವಾಗಿ ಸೇರ್ಪಡೆಗೊಂಡ ಎಂಹೆಚ್ 60ಆರ್ ಸೀಹಾಕ್ ಹೆಲಿಕಾಪ್ಟರ್ ಗಳನ್ನು ಬುಧವಾರ ಕೊಚ್ಚಿಯ ನೌಕಾ ನೆಲೆಯಲ್ಲಿ ನಿಯೋಜಿಸಲು ಸಿದ್ಧತೆ ನಡೆದಿದೆ. ಈ ಮಲ್ಟಿ ಟಾಸ್ಕ್ ಹೆಲಿಕಾಪ್ಟರ್ ಜಲಾಂತರ್ಗಾಮಿಗಳ ವಿರುದ್ಧ ಹೋರಾಡುವ ತಂತ್ರಜ್ಞಾನವನ್ನು ಒಳಗೊಂಡಿದ್ದು, ಕ್ಷಿಪಣಿಗಳು ಹಾಗೂ ಗುಂಡಿನಿಂದ ರಕ್ಷಿಸಿಕೊಳ್ಳುವ ಸಾಮರ್ಥ್ಯ ಹೊಂದಿರುವ ಭಾರತದ ನೌಕಪಡೆಯ ಏಕೈಕ ಹೆಲಿಕಾಪ್ಟರ್ ಇದಾಗಿದೆ. ಎಂಹೆಚ್ 60ಆರ್ ಸೀಹಾಕ್ ಹೆಲಿಕಾಪ್ಟರ್ ಭಾರತದ ನೌಕಪಡೆಯ ಸಾಮರ್ಥ್ಯಗಳನ್ನು ಹೆಚ್ಚಿಸಲಿದೆ. ಅಲ್ಲದೇ ನೌಕಾಪಡೆಯ ಕಾರ್ಯಾಚರಣೆಯ ವ್ಯಾಪ್ತಿಯನ್ನು ವಿಸ್ತರಿಸುತ್ತದೆ. ವಿಶಾಲವಾದ ಕಡಲ ಗಡಿಯಲ್ಲಿ ನಿರಂತರ ನೌಕಾ ಕಾರ್ಯಾಚರಣೆಗೆ ಈ ಹೆಲಿಕಾಪ್ಟರ್ ಅನುಕೂಲವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎಂಹೆಚ್ 60ಆರ್ ಸೀಹಾಕ್ ಹೆಲಿಕಾಪ್ಟರ್‌ಗಳನ್ನು ಭಾರತ ಸರ್ಕಾರವು 2020 ರ ಫೆಬ್ರವರಿಯಲ್ಲಿ ಅಮೆರಿಕಾದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿತ್ತು. ಅದರಲ್ಲಿ ಆರು ಹೆಲಿಕಾಪ್ಟರ್ ಗಳು ಇದುವರೆಗೆ ಭಾರತೀಯ ನೌಕಾಪಡೆಗೆ ಸಿಕ್ಕಿವೆ. ಎಲ್ಲಾ ರೀತಿಯಾಗಿಯೂ ಹೆಲಿಕಾಪ್ಟರ್‌ಗಳನ್ನು ಪರಿಶೀಲಿಸಲಾಗಿದ್ದು, ಸಮರ್ಥವಾಗಿವೆ. ಎಂಹೆಚ್ 60ಆರ್ ಸೀಹಾಕ್ ಹೆಲಿಕಾಪ್ಟರ್ ಟಾರ್ಪಿಡೊಗಳು, ಕ್ಷಿಪಣಿಗಳು ಮತ್ತು ರಾಕೆಟ್‌ಗಳನ್ನು ಹಾರಿಸುವ ಸಾಮರ್ಥ್ಯ ಹೊಂದಿದೆ. ಅಲ್ಲದೇ ದಾಳಿಯನ್ನು ವಿಫಲಗೊಳಿಸುವಲ್ಲಿ ಪ್ರಮುಖ ಪಾತ್ರವಹಿಸಲಿದೆ.



## ಭಾರತೀಯ ಕಾನ್ಸುಲೇಟ್ ಎದುರು ಖಾಲಿಸ್ತಾನಿ ಪರ ಗುಂಪಿನ ಪ್ರತಿಭಟನೆ



**ಟೊರಂಟೊ:** ಕೆನಡಾದ ಟೊರಂಟೊ ಮತ್ತು ವ್ಯಾಂಕೋವರ್ಗಳಲ್ಲಿ ಭಾರತೀಯ ಕಾನ್ಸುಲೇಟ್ ಎದುರು ಖಾಲಿಸ್ತಾನ್ ಪರ ಗುಂಪುಗಳು ಶನಿವಾರ ಪ್ರತಿಭಟನೆ ನಡೆಸಿರುವುದಾಗಿ ವರದಿಯಾಗಿದೆ.ಸರ್‍ರೆಯಲ್ಲಿ ಭಾರತದ ಹೈಕಮಿಷನರ್ ಸಂಜಯ್ ಕುಮಾರ್ ವರ್ಮ ಅವರು ಪಾಲ್ಗೊಂಡಿದ್ದ ಕಾರ್ಯಕ್ರಮಕ್ಕೆ ಖಾಲಿಸ್ತಾನ್ ಪರ ಸಂಘಟನೆ ಸಿಖ್ಸ್ ಫಾರ್ ಜಸ್ಟಿಸ್(ಎಸ್‌ಎಫ್ಜೆ) ಅಡ್ಡಿಪಡಿಸಿದ ಮರುದಿನ ಈ ಪ್ರಕರಣ ನಡೆದಿದೆ. ಕಳೆದ ವರ್ಷ ಜೂನ್ನಲ್ಲಿ ನಡೆದ ಖಾಲಿಸ್ತಾನಿ ಮುಖಂಡ ಹರ್ದೀಪ್ ಸಿಂಗ್ ನಿಜ್ಜಾರ್ನ ಹತ್ಯೆಯನ್ನು ಖಂಡಿಸಿ ಕೆನಡಾದ ಪ್ರಮುಖ ನಗರಗಳಲ್ಲಿ 'ಖಾಲಿಸ್ತಾನ್ ಕಾರ್ ರ್ಯಾಲಿ'ಯನ್ನು ಆಯೋಜಿಸಿರುವುದಾಗಿ ಎಸ್‌ಎಫ್ಜೆ ಹೇಳಿದೆ. ಆದರೆ ವಾರಾಂತ್ಯದ ದಿನವಾದ್ದರಿಂದ ಎರಡೂ ನಗರಗಳಲ್ಲಿನ ಭಾರತದ ಕಾನ್ಸುಲೇಟ್ ಕಚೇರಿಗಳು ಮುಚ್ಚಿದ್ದರಿಂದ ಪ್ರತಿಭಟನೆಯು ಹೆಚ್ಚಿನ ಪರಿಣಾಮ ಬೀರಲಿಲ್ಲ. ಅಲ್ಲದೆ ಎರಡೂ ನಗರಗಳಲ್ಲಿ ಪೊಲೀಸರು ಬಿಗಿ ಭದ್ರತೆ ಒದಗಿಸಿದ್ದರಿಂದ ಪ್ರತಿಭಟನಾಕಾರರಿಗೆ ಕಾನ್ಸುಲೇಟ್ ಕಚೇರಿಯ ಹತ್ತಿರ ಸುಳಿಯಲೂ ಸಾಧ್ಯವಾಗಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಫೋನ್ ನಲ್ಲಿ ಕ್ರಿಕೆಟ್ ನೋಡುವಾಗಲೇ ರೈಲು ಅಪಘಾತ



## ಸತ್ಯ ಬಿಚ್ಚಿಟ್ಟ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್



**ಆಂಧ್ರಪ್ರದೇಶ:** ಕಳೆದ ವರ್ಷದ ಅಕ್ಟೋಬರ್ 29ರಂದು ಆಂಧ್ರಪ್ರದೇಶದಲ್ಲಿ ನಡೆದ ಭೀಕರ ರೈಲು ಅಪಘಾತದಲ್ಲಿ ಪ್ರಯಾಣಿಕರು ಹಾಗೂ ಸಿಬ್ಬಂದಿ ಸೇರಿದಂತೆ 14 ಮಂದಿ ಮೃತಪಟ್ಟಿದ್ದು, ಇದೀಗ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಈ ಅಪಘಾತಕ್ಕೆ ಕಾರಣವಾದ ಹಿಂದಿನ ಶಾಕಿಂಗ್ ಸತ್ಯವನ್ನು ತೆರೆದಿಟ್ಟಿದ್ದಾರೆ.

ಅಂದು ಅಪಘಾತಕ್ಕೆ ಒಳಗಾದ ರಾಯಘಡ ಪ್ಯಾಸೆಂಜರ್ ರೈಲು ಹಾಗೂ ವಿಶಾಖಪಟ್ಟಣಂ ಪಾಲಸ ರೈಲಿನ ಚಾಲಕ ಹಾಗೂ ಸಹ ಚಾಲಕರು ಅಂದು ತಮ್ಮ ಮೊಬೈಲ್ ನಲ್ಲಿ ಕ್ರಿಕೆಟ್ ವೀಕ್ಷಿಸುತ್ತಿದ್ದರು. ಇದರಲ್ಲಿ ಅವರು ಮೈಮರೆತಿದ್ದ ಕಾರಣ ಈ ಅಪಘಾತ ಸಂಭವಿಸಿದೆ ಎಂದು ತಿಳಿಸಿದ್ದಾರೆ. ಅಪಘಾತ ನಡೆದ ಅಂದು ರಾಯಘಡ ಪ್ಯಾಸೆಂಜರ್ ರೈಲು ವಿಶಾಖಪಟ್ಟಣದ ಕಂತಕಪಲ್ಲಿ ಬಳಿ ಹಿಂಬದಿಯಿಂದ ವಿಶಾಖಪಟ್ಟಣಂ ಪಾಲಸ ರೈಲಿಗೆ ಡಿಕ್ಕಿ ಹೊಡೆದ ಪರಿಣಾಮ 14 ಮಂದಿ ಮೃತಪಟ್ಟು 50 ಕ್ಕೂ ಅಧಿಕ ಪ್ರಯಾಣಿಕರು ಗಾಯಗೊಂಡಿದ್ದರು.

ಅಪಘಾತದ ಹಿಂದಿನ ಕಾರಣ ತಿಳಿಯಲು ರೈಲ್ವೆ ಇಲಾಖೆ ತಂಡವನ್ನು ರಚಿಸಿದ್ದು, ಇದರ ವರದಿ ಇನ್ನೂ ಬಹಿರಂಗವಾಗಿಲ್ಲ. ಇದರ ಮಧ್ಯೆ ಶನಿವಾರದಂದು ಮಾತನಾಡಿರುವ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಅಪಘಾತ ಸಂಭವಿಸಿದ ವೇಳೆ ರೈಲು ಚಾಲಕರುಗಳು ತಮ್ಮ ಫೋನ್ ನಲ್ಲಿ ಕ್ರಿಕೆಟ್ ವೀಕ್ಷಿಸುತ್ತಿದ್ದರು ಎಂಬ ಸಂಗತಿಯನ್ನು ತಿಳಿಸಿದ್ದಾರೆ. ಅಲ್ಲದೆ ಚಾಲಕ ಹಾಗೂ ಸಹ ಚಾಲಕರುಗಳು ವಹಿಸಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ನಿಯಮಾವಳಿಯನ್ನು ರೂಪಿಸಿದ್ದೇವೆ ಎಂದಿದ್ದಾರೆ.

## ತೆಲಂಗಾಣದಲ್ಲಿ ಪುರಾತನ ದೇವಾಲಯಗಳು ಪತ್ತೆ!



**ನಲ್ಗೊಂಡ (ತೆಲಂಗಾಣ):** ತೆಲಂಗಾಣದ ಕೃಷ್ಣಾ ನದಿಯ ದಡದಲ್ಲಿರುವ ಮುದಿಮಾಣಿಕ್ಯಂ ಗ್ರಾಮದಲ್ಲಿ ಪುರಾತತ್ವ ಇಲಾಖೆಯ ವಿಜ್ಞಾನಿಗಳು ಮಣ್ಣನ್ನು ಅಗೆಯುತ್ತಿದ್ದಾಗ ಕಲ್ಲು ಒಡೆಯುವ ಸದ್ದು ಕೇಳಿಸಿತು. ಅವರು ಮಣ್ಣನ್ನು ತೆಗೆದಾಗ ಅಪರೂಪದ ಶಾಸನಗಳಿರುವ 2 ಬಾದಾಮಿ ಚಾಲುಕ್ಯ ದೇವಾಲಯಗಳು ಕಂಡುಬಂದಿವೆ. ಈ ದೇವಾಲಯಗಳು 1 ಸಾವಿರದ 300 ವರ್ಷಗಳಿಗಿಂತಲೂ ಹಳೆಯವು ಎಂದು ಅಂದಾಜಿಸಲಾಗಿದೆ. ಇಲ್ಲಿ ದೊರೆತಿರುವ ಶಾಸನವು 1 ಸಾವಿದರ 200 ವರ್ಷಗಳಷ್ಟು ಹಳೆಯದ್ದಾಗಿದೆ. ಒಂದು ದೇವಸ್ಥಾನದಲ್ಲಿ ಶಿವಲಿಂಗದ ಒಂದು ಭಾಗ ಉಳಿದಿದ್ದರೆ, ಇನ್ನೊಂದು ದೇವಸ್ಥಾನದಲ್ಲಿ ವಿಷ್ಣುವಿನ ವಿಗ್ರಹವಿದ್ದು, ಅದು ಸಂಪೂರ್ಣವಾಗಿ ಸುರಕ್ಷಿತವಾಗಿದೆ. ಈ ದೇವಾಲಯಗಳ ವಿಶಿಷ್ಟ ವಾಸ್ತುಶಿಲ್ಪ ಶೈಲಿಯು ಅವುಗಳ ವಿಶಿಷ್ಟತೆಯನ್ನು ತೋರಿಸುತ್ತದೆ. 1. ಪಬ್ಲಿಕ್ ರಿಸರ್ಚ್ ಇನ್ಸ್ಟಿಟ್ಯೂಟ್ ಆಫ್ ಹಿಸ್ಟರಿನ ಡಾ. ಒಂ.ಎ. ಶ್ರೀನಿವಾಸ್ ಮತ್ತು ಎಸ್. ಅಶೋಕ್ ಕುಮಾರ್ ಅವರ ತಂಡ ಇಲ್ಲಿ ಅಗೆಯುತ್ತಿತ್ತು. ವಿಜ್ಞಾನಿಗಳ ಪ್ರಕಾರ, ಈ ಶಾಸನವು ಕ್ರಿ.ಶ. 8 ಅಥವಾ 9 ನೇ ಶತಮಾನದಷ್ಟು ಹಿಂದಿನದು ಎಂದು ಅಂದಾಜಿಸಲಾಗಿದೆ. ಚಾಲುಕ್ಯ ರಾಜವಂಶವು ಆಗ ಬಾದಾಮಿ ಪ್ರದೇಶವನ್ನು ಆಳಿತ್ತು. 2. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ನಿರ್ದೇಶಕ ಡಾ. ಮುನಿರತ್ನಂ ರೆಡ್ಡಿ ಇವರು, ಸಿಕ್ಕ ಶಾಸನದ ಮೇಲೆ 'ಗಂಡಲೋರುರು' ಎಂದು ಬರೆಯಲಾಗಿದೆ. ಇದು ಕಾಲದ ಪದವಾಗಿತ್ತು. ಕನ್ನಡದಲ್ಲಿ 'ಗಂಡ' ಎಂದರೆ 'ನಾಯಕ' ಅಥವಾ ವೀರ ಎಂದಾಗಿತ್ತು.

## ಬಿಜೆಪಿಯನ್ನು ಹೊಗಳಿದ ಕಾಂಗ್ರೆಸ್ ಸಂಸದೆ

**ಶಿಮ್ಲಾ:** ಹಿಮಾಚಲ ಪ್ರದೇಶದ ರಾಜಕೀಯ ಬಿಕ್ಕಟ್ಟು ಶಮನಗೊಂಡಿದೆ ಎಂದು ಟ್ರಬಲ್ ಶೂಟರ್ ಡಿ.ಕೆ ಶಿವಕುಮಾರ್ ಘೋಷಿಸಿದ ಬೆನ್ನಲ್ಲೇ ಕಾಂಗ್ರೆಸ್ ಸಂಸದೆ ಪ್ರತಿಭಾ ಸಿಂಗ್ ಅವರು ಬಿಜೆಪಿ ಪರ ಹೇಳಿಕೆಯೊಂದನ್ನು ನೀಡಿದ್ದಾರೆ. ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಹಿಮಾಚಲಪ್ರದೇಶದಲ್ಲಿ ನಮಗಿಂತ ಬಿಜೆಪಿ ಉತ್ತಮ ಕೆಲಸಗಳನ್ನು ಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನಿರ್ದೇಶನದಂತೆ ಬಿಜೆಪಿಯು ಸಾಕಷ್ಟು ಕೆಲಸಗಳನ್ನು ಮಾಡುತ್ತಿದೆ. ಕಾಂಗ್ರೆಸ್‌ನಲ್ಲಿ ಬಹಳಷ್ಟು ಕೆಲಸಗಳು ಬಾಕಿ ಉಳಿದಿವೆ. ಬಿಜೆಪಿಯ ಕೆಲಸ ನಮಗಿಂತ ಉತ್ತಮವಾಗಿದೆ ಎಂಬುದು ನಿಜ ಎಂದು ಹೇಳಿದರು. ಸಂಘಟನೆಯನ್ನು ಬಲಪಡಿಸಿದರೆ ಮಾತ್ರ ಮುಂಬರುವ ಚುನಾವಣೆಯನ್ನು ಎದುರಿಸಲು ಸಾಧ್ಯವಾಗುತ್ತದೆ ಎಂದು ನಾನು ಮೊದಲ ದಿನದಿಂದಲೇ ಸಿಎಂಗೆ ಹೇಳುತ್ತಾ ಬಂದಿದ್ದೇನೆ. ಇದು ನಮಗೆ ತುಂಬಾ ಕಠಿಣ ಪರಿಸ್ಥಿತಿಯಾಗಿದೆ. ನಾವು ಪಕ್ಷವನ್ನು ಸಂಘಟಿಸಬೇಕಾಗಿದ್ದು, ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲ್ಲಬೇಕಾಗಿದೆ ಎಂದರು.

## ಮದ್ಯದ ಉದ್ಯಮಿಯ 400 ಕೋಟಿ ರೂ. ಮೌಲ್ಯದ ಫಾರ್ಮ್ ಹೌಸ್ ಧ್ವಂಸ

**ನವದೆಹಲಿ:** ಮಹತ್ವದ ಕಾರ್ಯಾಚರಣೆಯಲ್ಲಿ ಛತ್ತರ್‌ಪುರದಲ್ಲಿ ನಿರ್ಮಿಸಿದ್ದ ಮದ್ಯದ ಉದ್ಯಮಿ ದಿವಂಗತ ಪಾಂಟಿ ಚಡ್ಡಾ ಅವರ 400 ಕೋಟಿ ರೂ. ಮೌಲ್ಯದ ಫಾರ್ಮ್‌ಹೌಸ್ ಅನ್ನು ನೆಲಸಮಗೊಳಿಸಲಾಗಿದೆ ಎಂದು ದೆಹಲಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ. ನಗರದಲ್ಲಿ ಅನಧಿಕೃತ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ಅಕ್ರಮ ಕಟ್ಟಡಗಳ ನಿರ್ಮಾಣ ತೆರವು ಕಾರ್ಯಾಚರಣೆ ಆರಂಭಿಸಿರುವ ಡಿಡಿಎ ಭಾರೀ ಪ್ರಮಾಣದ ಆಸ್ತಿಯನ್ನು ವಶಪಡಿಸಿಕೊಂಡಿದೆ. ಸುಮಾರು 10 ಎಕರೆಯಷ್ಟು ವಿಸ್ತೀರ್ಣದಲ್ಲಿ ನಿರ್ಮಿಸಿದ್ದ ಮದ್ಯದ ಉದ್ಯಮಿ ದಿವಂಗತ ಪಾಂಟಿ ಚಡ್ಡಾ ಅಲಿಯಾಸ್ ಗುರುದೀಪ್ ಸಿಂಗ್ ಅವರ ಫಾರ್ಮ್‌ಹೌಸ್ ಅನ್ನು ನೆಲಸಮಗೊಳಿಸಿದೆ. ಈ ಫಾರ್ಮ್‌ಹೌಸ್ ಸುಮಾರು 400 ಕೋಟಿ ರೂ. ಮೌಲ್ಯದ್ದಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸತತ ಎರಡು ದಿನಗಳ ಕಾರ್ಯಾಚರಣೆ ಬಳಿಕ 10 ಎಕರೆ ಭೂಪ್ರದೇಶವನ್ನು ದೆಹಲಿ ಅಭಿವೃದ್ಧಿ ಪ್ರಾಧಿಕಾರ ತನ್ನ ವಶಕ್ಕೆ ತೆಗೆದುಕೊಂಡಿದೆ. ದಿವಂಗತ ಪಾಂಟಿ ಚಡ್ಡಾ ಅಲಿಯಾಸ್ ಗುರುದೀಪ್ ಸಿಂಗ್ ಅವರ ಸಂಸ್ಥೆ ಅಥವಾ ಕುಟುಂಬಗಳಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಅಲ್ಲದೇ ಕಳೆದ ಜನವರಿ 13 ಮತ್ತು 17ರಂದು ಈಶಾನ್ಯ ದೆಹಲಿಯ ಗೋಕುಲಪುರಿಯಲ್ಲಿ ನಡೆಸಲಾದ ಒತ್ತುವರಿ ಕಾರ್ಯಾಚರಣೆಯಲ್ಲಿ ಹಲವು ವಾಣಿಜ್ಯ ಶೋ ರೂಮ್ ಗಳನ್ನು ನೆಲಸಮಗೊಳಿಸಿ 4 ಎಕರೆ ಭೂಪ್ರದೇಶವನ್ನು ತನ್ನ ತೆಕ್ಕೆಗೆ ತೆಗೆದುಕೊಂಡಿತ್ತು.

## ಪಾಕಿಸ್ತಾನದಲ್ಲಿ ಮತ್ತೋರ್ವ ಭಯೋತ್ಪಾದಕನ ನಿಗೂಢ ಸಾವು



**ಪಾಕಿಸ್ತಾನ:** ಪಾಕಿಸ್ತಾನದಲ್ಲಿ ಮತ್ತೋರ್ವ ಭಯೋತ್ಪಾದಕ ಉಗ್ರ ನಿಗೂಢವಾಗಿ ಸಾವನ್ನಪ್ಪಿದ್ದಾನೆ. ಭಯೋತ್ಪಾದಕರಿಗೆ ಸುರಕ್ಷಿತ ತಾಣವಾಗಿರುವ ಪಾಕಿಸ್ತಾನ ಇತ್ತೀಚಿನ ದಿನಗಳಲ್ಲಿ ಉದ್ವಿಗ್ನ ಸ್ಥಿತಿಯಲ್ಲಿದ್ದು, ಭಯೋತ್ಪಾದಕರು ಒಬ್ಬೊಬ್ಬರಾಗಿ ನಿಗೂಢವಾಗಿ ಸಾಯುತ್ತಿದ್ದಾರೆ ಎಂಬ ಆತಂಕಕಾರಿ ವಿಷಯ ವರದಿಯಾಗಿದೆ.

ಪಾಕ್ ನ ಮೋಸ್ಟ್ ವಾಂಟೆಡ್ ಭಯೋತ್ಪಾದಕ ಶೇಖ್ ಜಮೀಲ್ ಉರ್ ರೆಹಮಾನ್ ನಿಗೂಢವಾಗಿ ಸಾವನ್ನಪ್ಪಿದ್ದಾನೆ ಎಂದು ವರದಿಯಾಗಿದೆ. ಈತನ ಸಾವಿಗೆ ಕಾರಣ ತಿಳಿದಿಲ್ಲ.

ವರದಿಯ ಪ್ರಕಾರ, ಭಯೋತ್ಪಾದಕ ಶೇಖ್ ಜಮೀಲ್ ಉರ್ ರೆಹಮಾನ್ ಪಾಕಿಸ್ತಾನದ ಖೈಬರ್ ಪಖ್ತುಂಕ್ವಾದಲ್ಲಿ ಶವವಾಗಿ ಪತ್ತೆಯಾಗಿದ್ದಾನೆ. ಶೇಖ್ ಜಮೀಲ್ ಉರ್ ರೆಹಮಾನ್ ಯುನೈಟೆಡ್ ಜಿಹಾದ್ ಕೌನ್ಸಿಲ್ನ ಪ್ರಧಾನ ಕಾರ್ಯದರ್ಶಿಯಾಗಿದ್ದರು. ಇದಲ್ಲದೆ, ಶೇಖ್ ಜಮೀಲ್ ಉರ್ ರೆಹಮಾನ್ ತೆಹ್ರೀಕ್-ಉಲ್-ಮಜಾಹಿದೀನ್ನ ಅಮೀರ್ ಆಗಿದ್ದರು. ಅಕ್ಟೋಬರ್ 2022 ರಲ್ಲಿ, ಭಾರತವು ಶೇಖ್ ಜಮೀಲ್ ಉರ್ ರೆಹಮಾನ್ ಅವರನ್ನು ಭಯೋತ್ಪಾದಕ ಎಂದು ಘೋಷಿಸಿತು.

ಕಾಶ್ಮೀರದಲ್ಲಿ ನಡೆದ ಹಲವು ದಾಳಿಗಳಿಗೆ ಭಯೋತ್ಪಾದಕ ಶೇಖ್ ಜಮೀಲ್ ಉರ್ ರೆಹಮಾನ್ ಕಾರಣ ಎಂದು ಹೇಳಲಾಗಿದೆ. ಹಲವು ಭಯೋತ್ಪಾದಕ ದಾಳಿ ನಡೆಸಲು ಸಂಚು ರೂಪಿಸಿದ್ದ. ಭಯೋತ್ಪಾದಕ ಶೇಖ್ ಜಮೀಲ್ ಉರ್ ರೆಹಮಾನ್ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ಜೊತೆ ನಿಕಟವಾಗಿ ಕೆಲಸ ಮಾಡುತ್ತಿದ್ದ ಎಂಬ ಆರೋಪವಿದೆ.

# ಹೈಟಿಯಲ್ಲಿ ಉದ್ವಿಗ್ನ ಪರಿಸ್ಥಿತಿ: ನೂರಾರು ಕೈದಿಗಳು ಪರಾರಿ



**ಕೀನ್ಯಾ:** ಸಾಮಾನ್ಯವಾಗಿ ಅಪರಾಧಗಳನ್ನು ಮಾಡುವ ಜನರನ್ನು ಜೈಲುಗಳಲ್ಲಿ ಇರಿಸಲಾಗುತ್ತದೆ. ಕೆಲವೊಮ್ಮೆ ಅಪರಾಧಗಳಿಗೆ ಶಿಕ್ಷೆ ಅನುಭವಿಸುತ್ತಿರುವ ಜೈಲುಗಳಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಾರೆ. ಅಲ್ಲದೇ ಜೈಲಿನಲ್ಲಿ ನಡೆಯುವ ದೌರ್ಜನ್ಯಗಳು ಅದೆಷ್ಟೋ.

ಜೊತೆಗೆ ಅಪರಾಧ ಮಾಡಿವವರನ್ನು ಹೊರ ತರಲು ಕೆಲವು ಉಗ್ರ ಗ್ಯಾಂಗ್ಗಳು ಪ್ರಯತ್ನಿಸುತ್ತಿರುತ್ತವೆ. ವಿಶೇಷವಾಗಿ ದರೋಡೆಕೋರರು, ಕೆಲವು ಗ್ಯಾಂಗ್ಗಳು ಅಪರಾಧಿಗಳನ್ನು ಜೈಲಿನಿಂದ ಹೊರಗಿಡಲು ಕೆಲಸ ಮಾಡುತ್ತವೆ. ಅಂತಹದ್ದೇ ಒಂದುಘಟನೆಕೀನ್ಯಾದಲ್ಲೂ ನಡೆದಿದೆ. ಈ ಘಟನೆಯ ಸಂಪೂರ್ಣ ವಿವರ ಇಲ್ಲಿದೆ.

ಕೀನ್ಯಾದ ಹೈಟಿಯ ರಾಜಧಾನಿ ಬಂದರು ನಗರವು ಉಗ್ರ ಯುದ್ಧಭೂಮಿಯಾಗಿ ಮಾರ್ಪಟ್ಟಿದೆ. ಘೋರ ಅಪರಾಧಗಳಿಗೆ ಶಿಕ್ಷೆಗೊಳಗಾದವರನ್ನು ಬಂದರಿನಲ್ಲಿರುವ ಪ್ರಿನ್ಸ್ ಜೈಲಿನಲ್ಲಿ ಇರಿಸಲಾಗುತ್ತದೆ. ಈ ಜೈಲಿನಲ್ಲಿ, ಸುಮಾರು 3,900ದಿಂದ 12,000 ಕೈದಿಗಳಿದ್ದಾರೆ. ಈ ಕ್ರಮದಲ್ಲಿ ಶನಿವಾರ ಕೆಲ ಪುಂಡರು ಜೈಲಿನ ಮೇಲೆ ದಾಳಿ ನಡೆಸಿ ಜನರನ್ನು ಕರೆದೊಯ್ಯಲು ಯತ್ನಿಸಿದ್ದರು.

ಪೊಲೀಸರ ಮೇಲೆ ಹಲ್ಲೆ ನಡೆಸಿ ವಿಧ್ವಂಸಕ ಕೃತ್ಯ ಎಸಗಿದ್ದಾರೆ. ಕ್ರೂರ ಅಪರಾಧಗಳ ಮಾಡಿರುವ ಅಪರಾಧಿಗಳು ಕೂಡ ಜೈಲಿನಿಂದ ಪರಾರಿಯಾಗಿದ್ದಾರೆ ಎಂದು ವರದಿಯಾಗಿದೆ. ಅವರು ತಕ್ಷಣದ ಹೆಕೂಡಲೇ ಹೆಚ್ಚುವರಿ ಪಡೆಗಳನ್ನು ಕಳುಹಿಸುವಂತೆ ಉನ್ನತಾಧಿಕಾರಿಗಳಿಗೆ ಪೊಲೀಸರು ಮನವಿ ಮಾಡಿದ್ದಾರೆ. ಈ ಕೈದಿಗಳು ಹೊರಗೆ ಬಂದರೆ ಜನರ ಮೇಲೆ ದಾಳಿ ಮಾಡುತ್ತಾರೆ ಎಂದು ಪೊಲೀಸರು ಆತಂಕ ವ್ಯಕ್ತಪಡಿಸಿದ್ದಾರೆ.

# ಭರತನಾಟ್ಯ ಕಲಾವಿದ ಅಮರನಾಥ್ ಘೋಷ್ ಗುಂಡಿಕ್ಕಿ ಹತ್ಯೆ



**ಅಮೆರಿಕ:** ಭರತನಾಟ್ಯ ಮತ್ತು ಕೂಚಿಪುಡಿ ನೃತ್ಯ ಕಲಾವಿದ ಅಮರನಾಥ್ ಘೋಷ್ ಅವರನ್ನು ಅಮೆರಿಕದಲ್ಲಿ ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ಕಿರುತೆರೆ ನಟಿ ದೇವೋಲೀನಾ ಭಟ್ಟಾಚಾರ್ಜಿ ಸಾಮಾಜಿಕ ಜಾಲತಾಣದಲ್ಲಿ ಈ ಮಾಹಿತಿ ನೀಡಿದ್ದಾರೆ. ಅಮರನಾಥ್ ಅವರ ಸ್ನೇಹಿತರಾಗಿದ್ದರು. ಅಮರನಾಥ್ ಅವರ ಪಾರ್ಥಿವ ಶರೀರವನ್ನು ಭಾರತಕ್ಕೆ ತರಲು ಸಹಾಯ ಮಾಡುವಂತೆ ಅಮೆರಿಕದಲ್ಲಿರುವ ಭಾರತೀಯ ರಾಯಭಾರಿ ಕಚೇರಿ, ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೇವೋಲೀನಾ ಮನವಿ ಮಾಡಿದ್ದಾರೆ.

ದೇವೋಲೀನಾ ಭಟ್ಟಾಚಾರ್ಜಿ ಅವರು ಅಮರನಾಥ್ ಅವರ ಸಾವಿಗೆ ಸಂಬಂಧಿಸಿದ ಮಾಹಿತಿಯನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ. ಮಂಗಳವಾರ (ಫೆಬ್ರವರಿ 27) ಸಂಜೆ, ಮಿಸೌರಿಯ ಸೇಂಟ್ ಲೂಯಿಸ್ನಲ್ಲಿ ನನ್ನ ಸ್ನೇಹಿತ ಅಮರನಾಥ್ ಘೋಷ್ ಅವರನ್ನು ಕೊಲೆ ಮಾಡಲಾಗಿದೆ. ಅಮರನಾಥ್ರ ತಂದೆ ಅಮರ್ನಾಥ್ ಅವರು ಚಿಕ್ಕವರಿರುವಾಗಲೇ ತೀರಿಕೊಂಡಿದ್ದರು. ಮೂರು ವರ್ಷಗಳ ಹಿಂದೆ ಅಮರನಾಥ್ರ ತಾಯಿಯೂ ಇರಲಿಲ್ಲ. ಅಮರನಾಥ್ ಸಾವಿಗೆ ಕಾರಣ ತಿಳಿದು ಬಂದಿಲ್ಲ. ಅಮರನಾಥ್ ಕೋಲ್ಕತ್ತಾದವರು ಎಂದು ದೇವೋಲೀನಾ ಬರೆದಿದ್ದಾರೆ. ಪಿಎಚ್ಡಿ ಮಾಡುತ್ತಿದ್ದ ಅತ್ಯುತ್ತಮ ನೃತ್ಯ ಕಲಾವಿದ, ಸಂಜೆ ವಾಕಿಂಗ್ ಹೋಗುತ್ತಿದ್ದಾಗ ಅಪರಿಚಿತ ದುಷ್ಕರ್ಮಿಗಳು ಏಕಾಏಕಿ ಗುಂಡು ಹಾರಿಸಿದ್ದಾರೆ ಎಂದು ತಿಳಿದು ಬಂದಿದೆ.

# ಹೈದರಾಬಾದ್‌ನ ರಾಮೇಶ್ವರಂ ಕೆಫೆಗೆ ಅಸಾದುದ್ದೀನ್ ಒವೈಸಿ ಭೇಟಿ

**ಹೈದರಾಬಾದ್:** ಆಲ್ ಇಂಡಿಯಾ ಮಜ್ಲಿಸ್ –ಎ–ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ಅಧ್ಯಕ್ಷ ಅಸಾದುದ್ದೀನ್ ಒವೈಸಿ ಶನಿವಾರ ಹೈದರಾಬಾದ್ ರಾಮೇಶ್ವರಂ ಕೆಫೆಗೆ ಭೇಟಿ ನೀಡಿದರು.

ಬೆಂಗಳೂರಿನ ರಾಮೇಶ್ವರಂ ಸ್ಫೋಟವನ್ನು ಖಂಡಿಸಿದ ಅಸಾದುದ್ದೀನ್ ಒವೈಸಿ, ಸ್ಫೋಟವು ಹೇಡಿತನದ ಕೃತ್ಯ ಮತ್ತು ಭಾರತದ ಮೌಲ್ಯಗಳ ಮೇಲಿನ ದಾಳಿ ಎಂದು ಹೇಳಿದರು.

ಮಾಜಿ ರಾಷ್ಟ್ರಪತಿ ಎಪಿಜೆ ಅಬ್ದುಲ್ ಕಲಾಂ ಅವರ ಜನ್ಮಸ್ಥಳವಾದ ರಾಮೇಶ್ವರಂ ಹೆಸರನ್ನು ಕೆಫೆಗೆ ಇಡಲಾಗಿದೆ ಎಂದರು. ಹೈದರಾಬಾದ್ನಲ್ಲಿ ಇತ್ತೀಚೆಗಷ್ಟೇ ಆರಂಭವಾಗಿರುವ ರಾಮೇಶ್ವರಂ ಕೆಫೆ ಹೋಟೆಲ್ಗೆ ಭೇಟಿ ನೀಡಿ ಬಂದ ನಂತರ ಒವೈಸಿ ಈ ಟ್ವೀಟ್ ಮಾಡಿದ್ದಾರೆ. ಶನಿವಾರ, ಅಸಾದುದ್ದೀನ್ ಒವೈಸಿ ಹೈದರಾಬಾದ್ ರಾಮೇಶ್ವರಂ ಕೆಫೆಗೆ ಭೇಟಿ ನೀಡಿ ಶುಕ್ರವಾರ ನಡೆದ ದಾಳಿಯನ್ನು ''ಹೇಡಿತನದ ಕೃತ್ಯ ಮತ್ತು ಭಾರತದ ಮೌಲ್ಯಗಳ ಮೇಲಿನ ದಾಳಿ'' ಎಂದು ಪೋಸ್ಟ್ ಮಾಡಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬಾಲ್ಯದ ಕನಸು ನನಸಾಗಿದೆ ಸಂಭ್ರಮಿಸಿದ ರಶ್ಮಿಕಾ ಮಂದಣ್ಣ





ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಇದೀಗ ಇಂಟರ್‌ನ್ಯಾಷನಲ್ ಸ್ಟಾರ್ ನಟಿಯಾಗಿ ಮಿಂಚುತ್ತಿದ್ದಾರೆ. ದಿನದಿಂದ ದಿನಕ್ಕೆ ನಟಿಗೆ ಬೇಡಿಕೆ ಹೆಚ್ಚಾಗಿದೆ. ಇದೀಗ ಬಾಲ್ಯ ಕನಸು ನನಸಾಗಿದೆ ಎಂದು ರಶ್ಮಿಕಾ ಸಂಭ್ರಮಿಸಿದ್ದಾರೆ.

ಹಲವಾರು ವರ್ಷಗಳಿಂದ ನಾನು ಹೋಗಬೇಕೆಂದುಕೊಂಡಿದ್ದ ಸ್ಥಳ ಜಪಾನ್. ನನ್ನ ಬಾಲ್ಯದಿಂದಲೂ ನಾನು ಇದನ್ನು ಆಸೆ ಪಟ್ಟಿದ್ದೆ. ಆದರೆ ಜಪಾನ್‌ಗೆ ಹೋಗುವ ನನ್ನ ಕನಸು ನನಸಾಗಬಹುದೆಂದು ಅಂದುಕೊಂಡಿರಲಿಲ್ಲ ಎಂದು ಇನ್ಸ್ಟಾಗ್ರಾಂ ಖಾತೆಯಲ್ಲಿ ಬರೆದುಕೊಂಡಿದ್ದಾರೆ.

ಅವಾರ್ಡ್ ಶೋಗೆ ಒಬ್ಬರೇ ಬಂದಿರುವುದು, ಅವಾರ್ಡ್ ನೀಡುವುದು. ಅಂತೂ ಕನಸು ನನಸಾಗಿದೆ ಎಂದು ನಟಿ ಹಾರ್ಟ್ ಇಮೋಜಿಗಳ ಜೊತೆ ಎಮೋಷನಲ್ ಆಗಿ ಕ್ಯಾಪ್ಷನ್ ಬರೆದಿದ್ದಾರೆ. ಜಪಾನ್‌ನಲ್ಲಿ ಕ್ಲಿಕ್ಕಿಸಿಕೊಂಡಿರುವ ಕೆಲವೊಂದು ಫೋಟೋಗಳನ್ನು ರಶ್ಮಿಕಾ ಅಪ್‌ಲೋಡ್ ಮಾಡಿದ್ದಾರೆ.

ಎಲ್ಲರನ್ನೂ ಇಲ್ಲಿ ಭೇಟಿಯಾಗುವುದು, ಇಷ್ಟೊಂದು ಪ್ರೀತಿ ಪಡೆಯುವುದು, ವಿಶೇಷವಾದ ಸ್ವಾಗತ ಪಡೆಯುವುದು. ಇಲ್ಲಿನ ಆಹಾರ, ಸ್ಥಳ, ಲವ್ಲಿ ಜನರು, ಎಲ್ಲವೂ ಅದ್ಭುತವಾಗಿದೆ ಎಂದು ಜಪಾನ್ ಕುರಿತು ನಟಿ ಸಂತಸ ವ್ಯಕ್ತಪಡಿಸಿದ್ದಾರೆ.

ಧನ್ಯವಾದಗಳು ಜಪಾನ್. ಐ ಲವ್ ಯೂ. ನೀನು ನಿಜಕ್ಕೂ ಸ್ಪೆಷಲ್. ಇನ್ನೂ ನಾನು ಪ್ರತಿ ವರ್ಷವೂ ಇಲ್ಲಿಗೆ ಬರುತ್ತೇನೆ ಎಂದು ನಟಿ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

ಅಂದಹಾಗೆ ರಶ್ಮಿಕಾ ಮಂದಣ್ಣ ಜಪಾನ್‌ನಲ್ಲಿ ನಡೆದ ಅನಿಮೆ ಅವಾರ್ಡ್ ಫಂಕ್ಷನ್‌ನಲ್ಲಿ ಮೊದಲ ಬಾರಿಗೆ ಭಾಗವಹಿಸಿದ್ದಾರೆ. ಪುಷ್ಪ 2, ರೈನ್‌ಬೋ, ಗರ್ಲ್‌ಫ್ರೆಂಡ್, ಅನಿಮಲ್ 2, ಧನುಷ್ ಜೊತೆಗಿನ ಹೊಸ ಸಿನಿಮಾ ಸೇರಿದಂತೆ ಹಲವು ಸಿನಿಮಾಗಳು ರಶ್ಮಿಕಾ ಮಂದಣ್ಣ ಕೈಯಲ್ಲಿದೆ.

# ಶಿವಣ್ಣ ಜೊತೆ ಮಸ್ತ್ ಆಗಿ ಡ್ಯಾನ್ಸ್ ಮಾಡಿದ ಯುವ



ದೊಡ್ಮನೆಯ ಪರಂಪರೆಯನ್ನ ಮುಂದುವರೆಸಲು ಬಂದಿದ್ದಾರೆ 'ಯುವ'. ಚಾಲನೆ ಸಿಕ್ಕಾಗಿದೆ. ರಾಜ್ ಪರಂಪರೆಯ ತವರೂರಲ್ಲೇ ಕಹಳೆ ಮೊಳಗಿದೆ. ನನ್ನಿಡೀ ಜೀವನ ಬಣ್ಣಕ್ಕೆ ಮೀಸಲು ಎಂದು 'ಯುವ' ಪ್ರತಿಜ್ಞೆಯನ್ನೂ ಮಾಡಾಗಿದೆ. ಇದು ಆರಂಭ ಅಷ್ಟೇ. ಆರಂಭದಲ್ಲೇ ದೊಡ್ಡದೊಂದು ಸಂಚಲನ ಸೃಷ್ಟಿಯಾಗಿದೆ. ಸುನಾಮಿ ಸುಂಟರಗಾಳಿ ಸಲಾಂ ಹೊಡೆದು ಯುವ ಮುಂದೆ ಬಾಗುವ ಸೂಚನೆಯೂ ಕಂಡು ಬರುತ್ತಿದೆ. ಶಿವಣ್ಣ ಜೊತೆ ಯುವ ಮಸ್ತ್ ಆಗಿ ಹೆಜ್ಜೆ ಹಾಕಿದ್ದಾರೆ.

ಯುವ ದೊಡ್ಮನೆಗೆ ನಯಾ ಸಾಮ್ರಾಜ್ಯಾಧೀಶ. ಮೊದಲ ಚಿತ್ರಕ್ಕೇ ಎಲ್ಲಿಂದ ಬಂತು ಈ ಶಕ್ತಿ. ಎಂದು ನೋಡಿದರೆ ಕಾಣುವುದೇ ಅಣ್ಣಾವ್ರು ಹಾಗೂ ಅಪ್ಪು ಮುಖ. ಕಲಾವಿದರಾಗಿ ನಾಡು ನುಡಿಗೆ ತಮ್ಮದೇ ಆದ ಕೊಡುಗೆ ಕೊಟ್ಟ ಇತಿಹಾಸ ಇವರಿಗಿದೆ. ಹೆಣ್ಣು ಹೊನ್ನು ಮಣ್ಣಿಗೆ ಗೌರವ ಕೊಡುವ ಪರಂಪರೆ ಇವರದ್ದು. ಇದೇ ಕಾರಣಕ್ಕೆ, ರಾಜ್‌ಕುಮಾರ್ ಎಂಬ ಹೆಸರು ಬರೀ ಹೆಸರಲ್ಲ ವ್ಯಕ್ತಿತ್ವ. ಅದೇ ವ್ಯಕ್ತಿತ್ವವನ್ನ ಉಳಿಸಿ ಬೆಳೆಸಿ ಪಾಲಿಸಿದವರು ಅಪ್ಪು. ಅದೇ ದಾರಿಯಲ್ಲೇ ಸಾಗುತ್ತೇನೆ ಎಂದು ಎದ್ದು ಬಂದಿದೆ ದೊಡ್ಮನೆಯ ಮರಿಹುಲಿ. ಅದಕ್ಕೆ ಹೆಸರೇ ಯುವರಾಜ್‌ಕುಮಾರ್.



ಅಪ್ಪುವನ್ನ ಕಳೆದುಕೊಂಡ ನೋವು ಬರೀ ನೋವಲ್ಲ ಅದು ಆರದ ಗಾಯ. ಗಾಯಕ್ಕೆ ಔಷಧ ಅಪ್ಪುವೇ ಬಿಟ್ಟು ಹೋದಂತೆ ಜನರ ದೃಷ್ಟಿಗೆ ಎಟಕುವುದು ಯುವ. ಅದೇ ಯುವ ಈಗ ದೊಡ್ಮನೆ ಸಾಮ್ರಾಜ್ಯದ ಸಿಂಹಾಸನದಲ್ಲಿ ಕುಳಿತಿದ್ದಾರೆ. ಇದು ಬರೀ ಎಂಟ್ರಿಯಲ್ಲ. 50 ವರ್ಷಗಳ ಸುದೀರ್ಘ ಖ್ಯಾತಿ ಉನ್ನತಿ ಪ್ರೀತಿಯನ್ನೇ ನೋಡಿಕೊಂಡು ಬಂದಿರುವ ಕುಟುಂಬದ ಯುವರಾಜನ ಪಟ್ಟಾಭಿಷೇಕ.

'ಯುವ' ಮೊದಲ ಹಾಡು ರಿಲೀಸ್ ಆಗುತ್ತಿದ್ದಂತೆ ಸ್ಯಾಂಡಲ್‌ವುಡ್‌ನಲ್ಲಿ ಸಂಕ್ರಾಂತಿ ಶುರುವಾಗಿದೆ. ಯುವ ಆರ್ಭಟ ಶುರುವಾಗಿದೆ. ಅಭಿಮಾನಿಗಳ ಕೈಯಿಂದಲೇ 'ಯುವ' ಮೊದಲ ಹಾಡು ಯುವ ಬೇರು ಚಾಮರಾಜನಗರದಲ್ಲೇ ರಿಲೀಸ್ ಆಗಿದೆ.

ಯುವ ಇಂಟ್ರೊಡಕ್ಷನ್ ಸಾಂಗ್ ಪದ ಜೋಡಣೆ ಮಾಡಿರೋದು ನಿರ್ದೇಶಕ ಸಂತೋ?ಶ್ ಆನಂದ್ ರಾಮ್. ಅವರು ಅಪ್ಪು ನಾಡಿಮಿಡಿತ ಅರಿತಿದ್ದವರು. ಅಣ್ಣಾವ್ರ ಧ್ಯೇಯ ತಿಳಿದವರು. ಮುಂದೆ ಯಾವಾಗಲೂ ಯಾವುದು ಬೇಕು ಯಾವುದು ಬೇಡ ಎಂಬುದನ್ನ ಯೋಚಿಸಿ ವಿಮರ್ಶಿಸಿ ಹಾಡು ಬರೆದಿದ್ದಾರೆ. ಅದುವೇ ಒಬ್ಬನೇ ಶಿವ, ಒಬ್ಬನೇ ಯುವ.

ಯುವ ಸಾಂಗ್ ಯೂಟ್ಯೂಬ್‌ನಲ್ಲಿ ದೊಡ್ಮನೆ ಹಾಡು ನಂಬರ್ 1 ಟ್ರೆಂಡಿಂಗ್‌ನಲ್ಲಿದೆ. ಟ್ರೆಂಡ್‌ಗೇ ಠಕ್ಕರ್ ಕೊಡುವ ಕನ್ನಡ ಸಿನಿಮಾ ಇಂಡಸ್ಟ್ರಿಯ ಒನ್ ಅಂಡ್ ಓನ್ಲಿ ಹ್ಯಾಟ್ರಿಕ್ ಹಿಟ್ ಸರದಾರ ಕೂಡ ಎಂಟ್ರಿ ಕೊಟ್ಟಿದ್ದಾರೆ. ಸಹೋದರನ ಮಗನ ಜೊತೆ ರೀಲ್ ಮಾಡಿದ್ದಾರೆ. ಒಬ್ಬನೇ ಶಿವ, ಒಬ್ಬನೇ ಯುವ ಎಂದು ಮಸ್ತ್ ಆಗಿ ಹೆಜ್ಜೆ ಹಾಕಿದ್ದಾರೆ. ಒಟ್ನಲ್ಲಿ ಈ ವಿಡಿಯೋಗೆ ಅಭಿಮಾನಿಗಳು ಫಿದಾ ಆಗಿದ್ದಾರೆ.

# 'ಒದೆಲಾ 2'ನಲ್ಲಿ ವಸಿಷ್ಠ ಸಿಂಹ ಪಾತ್ರ ಹೇಗಿದೆ?







ಸ್ಯಾಂಡಲ್‌ವುಡ್‌ನ ಕಂಚಿನ ಕಂಠದ ನಟ ವಸಿಷ್ಠ ಸಿಂಹ ಕನ್ನಡದಲ್ಲಿ ಸಾಲು ಸಾಲು ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಕನ್ನಡದ ಜತೆಗೆ ಪರಭಾಷೆಯಲ್ಲಿಯೂ ಮಿಂಚುತ್ತಿದ್ದಾರೆ. ಗಾಯಕನಾಗಿ ತೆಲುಗು ಚಿತ್ರಕ್ಕೆ ಪರಿಚಿತರಾಗಿದ್ದ ವಸಿಷ್ಠ ಸಿಂಹ 'ಒದೆಲಾ ರೈಲ್ವೆ ಸ್ಟೇಷನ್' ಸಿನಿಮಾ ಮೂಲಕ ನಾಯಕನಾಗಿ ತೆಲುಗು ಸಿನಿಮಂದಿಯ ಹೃದಯ ಗೆದ್ದಿದ್ದಾರೆ. ಈ ಮೂಲಕ ತೆಲುಗು ನೆಲದಲ್ಲಿ ಗಾಯನದ ಜೊತೆಗೆ ಕಲಾ ಸೇವೆಯನ್ನೂ ಮುಂದುವರೆಸಲಿದ್ದಾರೆ.

2022ರಲ್ಲಿ ಒಟಿಟಿಯಲ್ಲಿ ಬಿಡುಗಡೆಯಾಗಿದ್ದ ಒದೆಲಾ ರೈಲ್ವೆ ಸ್ಟೇಷನ್ ಸಿನಿಮಾಗೆ ಅದ್ಭುತ ರೆಸ್ಪಾನ್ಸ್ ಸಿಕ್ಕಿತ್ತು. ಈ ಚಿತ್ರದಲ್ಲಿ ವಸಿಷ್ಠ ಸಿಂಹ ವಿಭಿನ್ನ ಪಾತ್ರದಲ್ಲಿ ಅಭಿನಯ ಮಾಡಿದ್ದರು. ತಿರುಪತಿ ಎಂಬ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಧೋಬಿಯಾಗಿ ಮಿಂಚಿದ್ದಾರೆ. ಇದೂವರೆಗೂ ಮಾಡಿರದಂತಹ ವಿಶಿಷ್ಟ ಪಾತ್ರದಲ್ಲಿ ವಸಿಷ್ಠ ಕಾಣಿಸಿದ್ದಾರೆ. ಇದೀಗ ಒದೆಲಾ ರೈಲ್ವೆ ಸ್ಟೇಷನ್ ಪಾರ್ಟ್ 2 ತಯಾರಾಗುತ್ತಿದೆ. ಅದರ ಭಾಗವಾಗಿ ನಿನ್ನೆ ಉತ್ತರ ಪ್ರದೇಶದ ವಾರಣಾಸಿಯಲ್ಲಿ ಸಿನಿಮಾದ ಮುಹೂರ್ತ ನೆರವೇರಿದೆ. ಮಿಲ್ಕಿ ಬ್ಯೂಟಿ ತಮನ್ನಾ ಮತ್ತು ವಸಿಷ್ಠ ಸಿಂಹ ಫೋಟೋಗೆ ಪೋಸ್ ಕೊಟ್ಟಿದ್ದು, ಇದರಲ್ಲಿ ಹರಿಪ್ರಿಯಾ ಕೂಡ ಇದ್ದಾರೆ. ಒದೆಲಾ ರೈಲ್ವೆ ಸ್ಟೇಷನ್ ಸೀಕ್ವೆಲ್‌ನ ಶೂಟಿಂಗ್ ನಿನ್ನೆಯಿಂದಲೇ ಪ್ರಾರಂಭವಾಗಿದೆ.

ಒದೆಲಾ ರೈಲ್ವೆ ಸ್ಟೇಷನ್ ಮೊದಲ ಭಾಗದಲ್ಲಿ ನಟಿ ಹೆಬಾ ಪಟೇಲ್ ಜೊತೆ ವಸಿಷ್ಠ ಸಿಂಹ ಅಭಿನಯಿಸಿದ್ದರು. ಆದರೆ ಎರಡನೇ ಭಾಗದಲ್ಲಿ ನಟಿ ತಮನ್ನಾ ಭಾಟಿಯಾ ಜೊತೆ ವಸಿಷ್ಠ ಸಿಂಹ ಹೆಜ್ಜೆ ಹಾಕಲಿದ್ದಾರೆ. ಹಾಗಂತ ಹೆಬಾ ಪಟೇಲ್ ಇಲ್ಲ ಅಂತಲ್ಲ. ಅವರು ಕೂಡ ಪ್ರಮುಖ ಪಾತ್ರವೊಂದರಲ್ಲಿ ನಟಿಸುತ್ತಿದ್ದಾರೆ.

ಮಧು ಕ್ರಿಯೇಷನ್ಸ್ ಮತ್ತು ಸಂಪತ್ ನಂದಿ ಟೀಂ ವರ್ಕ್ ಬ್ಯಾನರ್ ನಡಿ ಡಿ.ಮಧು ಚಿತ್ರ ನಿರ್ಮಾಣ ಮಾಡುತ್ತಿದ್ದು, ಅಶೋಕ ತೇಜ ಒದೆಲಾ ರೈಲ್ವೆ ಸ್ಟೇಷನ್ ಸೀಕ್ವೆಲ್‌ಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಸೌಂದರ್ ರಾಜನ್ ಎಸ್ ಛಾಯಾಗ್ರಹಣ, 'ಕಾಂತಾರ' ಮ್ಯೂಸಿಕ್ ಮಾಂತ್ರಿಕ ಅಜನೀಶ್ ಲೋಕನಾಥ್ ಸಂಗೀತ ಚಿತ್ರಕ್ಕಿದೆ.

# ಮೆಗ್ ಲ್ಯಾನಿಂಗ್ ಅರ್ಧಶತಕ

## ಗುಜರಾತ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್‌ಗೆ 25 ರನ್‌ಗಳ ಗೆಲುವು



ಆರಂಭಿಕ ಆಟಗಾರ್ತಿ ಮೆಗ್ ಲ್ಯಾನಿಂಗ್ ಅರ್ಧಶತಕ ಹಾಗೂ ಜೆಸ್ ಜೊನಾಸೆನ್, ಅನ್ನಾಬೆಲ್ ಸದರ್ಲೆಂಡ್ ಬೌಲಿಂಗ್ ನೆರವಿನಿಂದ ಗುಜರಾತ್ ಜೈಂಟ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡವು 25 ರನ್‌ಗಳ ಜಯ ಸಾಧಿಸಿದೆ.

ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಗುಜರಾತ್ ತಂಡವು ಫೀಲ್ಡಿಂಗ್ ಆಯ್ದುಕೊಂಡಿತು. ಆದರೆ ಡೆಲ್ಲಿ ಕ್ಯಾಪಿಟಲ್ಸ್ ತಂಡ ನೀಡಿದ್ದ 164 ರನ್‌ಗಳ ಗುರಿ ಬೆನ್ನತ್ತಲಾಗದೇ ಸೋಲನುಭವಿಸಿತು. ಗುಜರಾತ್ 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 138 ರನ್ ಗಳಿಸಲಷ್ಟೇ ಶಕ್ತವಾಗಿ ಸೋಲೊಪ್ಪಿಕೊಂಡಿತು.

ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ತಂಡವು ಅಲ್ಪಮೊತ್ತಕ್ಕೆ ಕುಸಿಯುವ ಆತಂಕ ಎದುರಿಸಿತ್ತು. ಇನಿಂಗ್ಸ್‌ನ ಮೂರನೇ ಓವರ್‌ನಲ್ಲಿ ಶಫಾಲಿ ವರ್ಮಾ ಕೇವಲ 13 ರನ್‌ಗಳಿಗೆ ವಿಕೆಟ್ ಒಪ್ಪಿಸಿ ಹೊರ ನಡೆದರು. ಅಲೈಸ್ ಕ್ಯಾಪ್ಸಿಗೊ 27 ರನ್ ಗಳಿಸಿ ಪೆವಿಲಿಯನ್ ಸೇರಿದರು. ಈ ಪರಿಸ್ಥಿತಿಯನ್ನು ಜವಾಬ್ದಾರಿಯುತವಾಗಿ ನಿಭಾಯಿಸಿದ ಮೆಗ್ ಲ್ಯಾನಿಂಗ್ ಅರ್ಧಶತಕ (55 ರನ್, 41 ಬಾಲ್, 6 ಫೋರ್, 1 ಸಿಕ್ಸರ್) ಸಿಡಿಸಿ ಮಿಂಚಿದರು.

ಜೆಮಿಯಾ ರಾಡ್ರಿಗಸ್ (7 ರನ್) ಕೂಡ ಕ್ರೀಸ್‌ನಲ್ಲಿ ಹೆಚ್ಚು ಹೊತ್ತು ನಿಲ್ಲಲಿಲ್ಲ. ಅನ್ನಾಬೆಲ್ ಸದರ್ಲೆಂಡ್ 20, ಜೆಸ್ ಜೊನಾಸೆನ್ 11, ಅರುಂಧತಿ ರೆಡ್ಡಿ ಮತ್ತು ರಾಧಾ ಯಾದವ್ ತಲಾ 5, ಶಿಖಾ ಪಾಂಡೆ 14 (ಔಟಾಗದೆ) ರನ್ ಗಳಿಸಿ ತಂಡದ ಮೊತ್ತ 162 ಕ್ಕೆ ತಂದು ನಿಲ್ಲಿಸಿದರು.

ಹೋರಾಟದ ಮೊತ್ತವನ್ನು ಬೆನ್ನತ್ತಿದ ಗುಜರಾತ್ ತಂಡವು ಬ್ಯಾಟಿಂಗ್ ವೈಫಲ್ಯ ಅನುಭವಿಸಿತು. ಬೆತ್ ಮೂನಿ ಕೇವಲ 12 ರನ್ ಗಳಿಸಿ ಔಟಾದರು. ಲಾರಾ ವೊಲ್ವಾರ್ಡ್ಟ್ ಶೂನ್ಯ ಸುತ್ತಿ ಹೊರನಡೆದರು. ಫೋಬೆ ಲಿಚ್ಫೀಲ್ಡ್ 15, ವೇದಾ ಕೃಷ್ಣಮೂರ್ತಿ 12 ರನ್ ಅಷ್ಟೇ ಗಳಿಸಿದರು. ಆಶ್ಲೀ ಗಾರ್ಡ್ನರ್ ಏಕಾಂಗಿ ಹೋರಾಟ ಕೈಗೂಡಲಿಲ್ಲ. ಗಾರ್ಡ್ನರ್ 41 ರನ್ ಗಳಿಸಿ (5 ಫೋರ್, 1 ಸಿಕ್ಸರ್) ಭರವಸೆ ಇದ್ದಾಗಲೇ ವಿಕೆಟ್ ಕೈಚೆಲ್ಲಿದರು. ತನುಜಾ ಕನ್ವರ್ 13, ಮೇಘನಾ ಸಿಂಗ್ 10 ರನ್ ಗಳಿಸಿದ್ದು ಬಿಟ್ಟರೆ ಯಾವ ಆಟಗಾರ್ತಿಯೂ ಕ್ರೀಸ್‌ನಲ್ಲಿ ಹೆಚ್ಚು ಹೊತ್ತು ನಿಲ್ಲಲಿಲ್ಲ. ಇದರಿಂದ ತಂಡವು ಸೋಲೊಪ್ಪಿಕೊಂಡಿತು.

ಡೆಲ್ಲಿ ತಂಡದ ಪರ ಜೆಸ್ ಜೊನಾಸೆನ್ ಹಾಗೂ ರಾಧಾ ಯಾದವ್ ತಲಾ 3 ವಿಕೆಟ್ ಕಬಳಿಸಿ ತಂಡದ ಗೆಲುವಿಗೆ ನೆರವಾದರು. ಗುಜರಾತ್ ತಂಡದ ಪರ ಮೇಘನಾ ಸಿಂಗ್ 4 ವಿಕೆಟ್ ಕಬಳಿಸಿ ಗಮನ ಸೆಳೆದಿದ್ದರು. ಆಶ್ಲೀ ಗಾರ್ಡ್ನರ್ 2 ವಿಕೆಟ್ ಉರುಳಿಸಿದ್ದರು.

# ರಾಜ್ಯ ಬಿಜೆಪಿಯಿಂದ 15+ ಕ್ಷೇತ್ರಗಳಿಗೆ ಸಂಭಾವ್ಯ ಅಭ್ಯರ್ಥಿಗಳ ಹೆಸರು ಫೈನಲ್



**ಬೆಂಗಳೂರು:** ಬಿಜೆಪಿ ಕಚೇರಿಯಲ್ಲಿ ಭಾನುವಾರ ನಡೆದ ಕೋರ್ ಕಮಿಟಿ ಸಭೆಯಲ್ಲಿ ಸಂಭಾವ್ಯ ಅಭ್ಯರ್ಥಿಗಳ ಶಾರ್ಟ್ ಲಿಸ್ಟ್‌ಗೆ ಒಪ್ಪಿಗೆ ಸಿಕ್ಕಿದೆ. ರಾಜ್ಯ ಬಿಜೆಪಿಯಿಂದ 15+ ಕ್ಷೇತ್ರಗಳಿಗೆ ಸಂಭಾವ್ಯರ ಹೆಸರುಗಳು ಫೈನಲ್ ಆಗಿದೆ.

ಗೊಂದಲ ಇಲ್ಲದ, ಗೆಲ್ಲುವ ಗ್ಯಾರಂಟಿ ಇರುವ, ಸರ್ವ ಸಮ್ಮತ ಸಂಭಾವ್ಯರ 15+ ಹೆಸರುಗಳಿಗೆ ಕೋರ್ ಕಮಿಟಿ ಸಹಮತ ಸೂಚಿಸಿದೆ. ಒಂದೆರಡು ದಿನಗಳಲ್ಲಿ ಹೈಕಮಾಂಡ್‌ಗೆ 15+ ಶಾರ್ಟ್ ಲಿಸ್ಟ್ ಹೆಸರುಗಳ ರವಾನೆ ಆಗಲಿದೆ. ಬಿಜೆಪಿ ಹೈಕಮಾಂಡ್ ರಿಲೀಸ್ ಮಾಡುವ ಎರಡನೇ ಪಟ್ಟಿಯಲ್ಲಿ ಕರ್ನಾಟಕ ಕ್ಷೇತ್ರಗಳಿಗೂ ಅಭ್ಯರ್ಥಿ ಘೋಷಣೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಇಂದಿನ ಕೋರ್ ಕಮಿಟಿ ಸಭೆಯಲ್ಲಿ ರಾಜ್ಯ ನಾಯಕರು ಸಂಭಾವ್ಯರ ರಾಜ್ಯ ಪಟ್ಟಿ ಫೈನಲ್ ಮಾಡಿದ್ದಾರೆ.

ಗೊಂದಲ ಇರುವ ಕ್ಷೇತ್ರಗಳ ಆಕಾಂಕ್ಷಿಗಳ ಬಗ್ಗೆಯೂ ಕೋರ್ ಕಮಿಟಿಯಲ್ಲಿ ಚರ್ಚೆ ನಡೆಸಲಾಗಿದೆ. ಅಭ್ಯರ್ಥಿ ಆಯ್ಕೆ ಕ್ಲಿಷ್ಟಕರ ಇರುವ 10+ ಕ್ಷೇತ್ರಗಳ ಬಗ್ಗೆಯೂ ಚರ್ಚೆ ನಡೆದಿದೆ. ಗೊಂದಲ ಇರುವ ಕ್ಷೇತ್ರಗಳ ಸಂಭಾವ್ಯರ ಪಟ್ಟಿಯನ್ನೂ ಹೈಕಮಾಂಡ್‌ಗೆ ಕಳಿಸಲು ಸಭೆಯಲ್ಲಿ ತೀರ್ಮಾನ ಕೈಗೊಂಡಿದೆ. ಈ ಕ್ಷೇತ್ರಗಳಿಗೆ ಪ್ರತಿ ಕ್ಷೇತ್ರಕ್ಕೂ ಕನಿಷ್ಠ 3 ಹೆಸರುಗಳಿರುವ ಪಟ್ಟಿಯನ್ನು ಕಳಿಸಲು ನಿರ್ಧಾರ ಮಾಡಲಾಗಿದೆ. ಕೋರ್ ಕಮಿಟಿ ಸಭೆಯಲ್ಲಿ ವೀಕ್ಷಕರಿಂದ ಸಲ್ಲಿಕೆಯಾದ ಹೆಸರುಗಳ ಬಗ್ಗೆ ಚರ್ಚೆ ನಡೆಯಿತು. ಕಳೆದ ಎರಡು ದಿನಗಳಲ್ಲಿ 28 ಕ್ಷೇತ್ರಗಳಲ್ಲಿ ಪ್ರವಾಸ ಮಾಡಿ ವೀಕ್ಷಕರು ಅಭಿಪ್ರಾಯ ಸಂಗ್ರಹಿಸಿದ್ದರು. ಕೇಂದ್ರೀಯ ಚುನಾವಣಾ ಸಮಿತಿಗೆ ಮೂರರಿಂದ ಐದು ಹೆಸರುಗಳನ್ನು ಕಳುಹಿಸಲು ತೀರ್ಮಾನಿಸಲಾಗಿದೆ. ಒಟ್ಟಾರೆ ಬಿಜೆಪಿ ರಾಜ್ಯ ಘಟಕದಿಂದ 28 ಕ್ಷೇತ್ರಗಳಿಗೂ ಹೆಸರು ಶಿಫಾರಸು ಮಾಡಲು ತೀರ್ಮಾನ ಮಾಡಲಾಗಿದೆ.

ಎರಡು ಭಾಗವಾಗಿ ಸಂಭಾವ್ಯ ಅಭ್ಯರ್ಥಿಗಳ ಪಟ್ಟಿಯನ್ನು ರಾಜ್ಯ ನಾಯಕರು ಕಳುಹಿಸಲಿದ್ದಾರೆ. ಮೊದಲ ಭಾಗದಲ್ಲಿ ಗೆಲ್ಲುವ ಖಚಿತತೆ ಇರುವವರ ಪಟ್ಟಿ, ಎರಡನೇ ಭಾಗದಲ್ಲಿ ಗೊಂದಲ ಇರುವ ಕ್ಷೇತ್ರಗಳ ಪಟ್ಟಿ ಕಳುಹಿಸಲು ನಿರ್ಧರಿಸಲಾಗಿದೆ.

ಹಾಲಿ ಸಂಸದರ ಹೆಸರು ಒಳಗೊಂಡಂತೆ 3 ರಿಂದ 5 ಸಂಭಾವ್ಯ ಅಭ್ಯರ್ಥಿಗಳ ಹೆಸರುಗಳು ಇದೆ ಎನ್ನಲಾಗಿದೆ. ಮೈತ್ರಿ ಸೀಟು ಹಂಚಿಕೆ ಬಗ್ಗೆಯೂ ಇಂದಿನ ಸಭೆಯಲ್ಲಿ ಚರ್ಚಿಸಲಾಯಿತು. ಜೆಡಿಎಸ್‌ಗೆ ಎಷ್ಟು ಮತ್ತು ಯಾವ ಕ್ಷೇತ್ರ ಬಿಟ್ಟು ಕೊಡಬೇಕೆಂಬ ಬಗ್ಗೆ ಹೈಕಮಾಂಡ್ ನಿರ್ಧಾರಕ್ಕೆ ರಾಜ್ಯ ನಾಯಕರು ಬಿಟ್ಟಿದ್ದಾರೆ. ಬಿಜೆಪಿ ಅಭ್ಯರ್ಥಿಗಳನ್ನು ಫೈನಲ್ ಮಾಡಿದ ನಂತರ ಮೈತ್ರಿ ಸೀಟು ಹಂಚಿಕೆ ಬಗ್ಗೆ ಬಿಜೆಪಿ ಹೈಕಮಾಂಡ್ ತೀರ್ಮಾನಿಸಲಿದೆ.

ಸಭೆಯಲ್ಲಿ ಮಾಜಿ ಸಿಎಂಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ, ಡಿ.ವಿ.ಸದಾನಂದಗೌಡ, ಲೋಕಸಭಾ ಚುನಾವಣಾ ರಾಜ್ಯ ಉಸ್ತುವಾರಿ ಅಗರ್ವಾಲ್, ಮಾಜಿ ಡಿಸಿಎಂಗಳಾದ ಗೋವಿಂದ ಕಾರಜೋಳ, ಅಶ್ವಥ್ ನಾರಾಯಣ್, ಪ್ರತಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಸಚಿವರಾದ ಶ್ರೀರಾಮುಲು, ಸಿ.ಟಿ.ರವಿ ಇತರರು ಉಪಸ್ಥಿತರಿದ್ದರು.

# ಮತ್ತೆ ನಂ.1 ಸ್ಥಾನಕ್ಕೆ ಜಿಗಿದ ಭಾರತ



ಇಂಗ್ಲೆಂಡ್ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿರುವ ಭಾರತ ತಂಡ ಅಂತಿಮ ಟೆಸ್ಟ್ ಪಂದ್ಯಕ್ಕೂ ಮುನ್ನವೇ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೆ ಜಿಗಿದಿದೆ. ಇದರಿಂದ ರೋಹಿತ್ ಶರ್ಮಾ ನಾಯಕತ್ವಕ್ಕೆ ಭಾರೀ ಮೆಚ್ಚುಗೆಯೂ ವ್ಯಕ್ತವಾಗಿದೆ.

ರಾಂಚಿಯಲ್ಲಿ ಇಂಗ್ಲೆಂಡ್ ವಿರುದ್ಧ ನಡೆದ 3ನೇ ಟೆಸ್ಟ್ ಪಂದ್ಯ ಗೆದ್ದು ಸರಣಿ ವಶಪಡಿಸಿಕೊಂಡ ನಂತರ 64.58 ಪಿಸಿಟಿ, 62 ಅಂಕಗಳೊಂದಿಗೆ ಟೀಂ ಇಂಡಿಯಾ ಅಗ್ರಸ್ಥಾನಕ್ಕೇರಿದೆ. ಅಷ್ಟೇ ಅಲ್ಲ 117 ಶ್ರೇಯಾಂಕಗಳೊಂದಿಗೆ ಐಸಿಸಿ ಟೆಸ್ಟ್ ರ‍್ಯಾಂಕಿಂಗ್‌ನಲ್ಲಿ ಆಸೀಸ್ ಜೊತೆಗೆ ಅಗ್ರಸ್ಥಾನ ಹಂಚಿಕೊಂಡಿದ್ದು, ಅಂತಾರಾಷ್ಟ್ರೀಯ ಟಿ20 ಹಾಗೂ ಏಕದಿನ ಪಂದ್ಯಗಳ ರ‍್ಯಾಂಕಿಂಗ್‌ನಲ್ಲೂ ಅಗ್ರಸ್ಥಾನ ಭದ್ರಪಡಿಸಿಕೊಂಡಿದೆ. 2023-25ರ ನಡುವಿನ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವ ಭಾರತ ಈ ಆವೃತ್ತಿಯಲ್ಲಿ 8 ಪಂದ್ಯಗಳನ್ನಾಡಿದ್ದು, 5ರಲ್ಲಿ ಗೆಲುವು ಸಾಧಿಸಿದೆ. 2 ಪಂದ್ಯಗಳಲ್ಲಿ ಸೋಲು ಕಂಡಿದ್ದು, 1 ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಒಟ್ಟಾರೆ 62 ಅಂಕಗಳನ್ನು ಪಡೆದಿರುವ ಟೀಂ ಇಂಡಿಯಾ 64.58 ಪಿಸಿಟಿಯೊಂದಿಗೆ ಅಗ್ರಸ್ಥಾನದಲ್ಲಿದೆ. 5 ಪಂದ್ಯಗಳಲ್ಲಿ 3ರಲ್ಲಿ ಗೆಲುವು ಸಾಧಿಸಿರುವ ಕಿವೀಸ್ 36 ಅಂಕಗಳೊಂದಿಗೆ (60.00 ಪಿಸಿಟಿ) 2ನೇ ಸ್ಥಾನದಲ್ಲಿದೆ. 11 ಪಂದ್ಯಗಳಲ್ಲಿ 7ರಲ್ಲಿ ಗೆಲುವು ಸಾಧಿಸಿರುವ ಆಸೀಸ್ 59.09 ಪಿಸಿಟಿಯೊಂದಿಗೆ 78 ಅಂಕ ಪಡೆದು 3ನೇ ಸ್ಥಾನ, 2 ಪಂದ್ಯಗಳಲ್ಲಿ 1ರಲ್ಲಿ ಗೆಲುವು ಸಾಧಿಸಿರುವ ಬಾಂಗ್ಲಾದೇಶ 12 ಅಂಕಗಳೊಂದಿಗೆ 4ನೇ ಸ್ಥಾನ ಹಾಗೂ 5 ಪಂದ್ಯಗಳಲ್ಲಿ 2ರಲ್ಲಿ ಗೆಲುವು ಸಾಧಿಸಿರುವ ಪಾಕಿಸ್ತಾನ 36.66 ಪಿಸಿಟಿಯೊಂದಿಗೆ 22 ಅಂಕ ಪಡೆದು 5ನೇ ಸ್ಥಾನದಲ್ಲಿದೆ.

ಅಂತಿಮ ಟೆಸ್ಟ್ ಗೆಲ್ಲಲು ಭಾರತ ರಣತಂತ್ರ: ಬೆನ್ ಸ್ಟೋಕ್ಸ್ ಸಾರಥ್ಯದ ಇಂಗ್ಲೆಂಡ್ ತಂಡ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಪೈಪೋಟಿ ನಡೆಸಿತು. ಮೊದಲ ಟೆಸ್ಟ್ ಗೆದ್ದು ತನ್ನ ಗುರಿ ಸಾಧನೆ ಕಡೆಗೆ ಮಹತ್ವದ ಹೆಜ್ಜೆಯನ್ನು ಇಟ್ಟರೂ, ಬಳಿಕ ಸತತ 3 ಸೋಲಿನೊಂದಿಗೆ ಟ್ರೋಫಿ ಗೆಲುವಿನ ಆಸೆ ಕೈಚೆಲ್ಲಿತು. ಈಗ ಸರಣಿಯ ಅಂತಿಮ ಪಂದ್ಯ ಧರ್ಮಶಾಲಾದ ಎಚ್‌ಪಿಸಿಎ ಕ್ರೀಡಾಂಗಣದಲ್ಲಿ ನಡೆಯಲಿದೆ. ಮಾರ್ಚ್ 7 ರಿಂದ ಮಾರ್ಚ್ 11ರ ವರೆಗೆ ಪಂದ್ಯ ನಡೆಯಲಿದೆ. ಈಗಾಗಲೇ ಸರಣಿ ಗೆದ್ದಿರುವ ಭಾರತ ಅಂತಿಮ ಪಂದ್ಯದಲ್ಲೂ ಆಂಗ್ಲರಿಗೆ ಸೋಲುಣಿಸಲು ರಣತಂತ್ರ ರೂಪಿಸಿದೆ.

# ಬೆಂಗಳೂರಿಗೆ ಮೋದಿ ಕೊಡುಗೆ ಏನು?



**ಬೆಂಗಳೂರು:** ಬೆಂಗಳೂರಿಗೆ ಮೋದಿ ಸರ್ಕಾರ ಕೊಟ್ಟಿರುವ ಕೊಡುಗೆಗಳು, ಅನುದಾನವನ್ನು ಅಶೋಕ್ ಮಹಾರಾಜರು ಬಿಡುಗಡೆ ಮಾಡಲಿ ಎಂದು ಸಂಸದ ಡಿಕೆ ಸುರೇಶ್ ಸವಾಲ್ ಹಾಕಿದ್ದಾರೆ.

ಬೆಂಗಳೂರನ್ನು ಬಾಂಬ್ ಬೆಂಗಳೂರು ಮಾಡಬೇಡಿ ಎಂಬ ವಿಪಕ್ಷ ನಾಯಕ ಅಶೋಕ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ವಿರೋಧ ಪಕ್ಷಗಳು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ. ದೇಶಭಕ್ತಿ ಹೆಸರು ಹೇಳಿಕೊಂಡು ಬೆಂಗಳೂರಿನ ಭದ್ರತೆ ಹಾಳು ಮಾಡಲು ಕೆಲಸ ಮಾಡುತ್ತಿವೆ. ಬಿಜೆಪಿ ಅವರಿಂದ ಬೆಂಗಳೂರಿಗೆ ಇರುವ ಕೀರ್ತಿ ಹಾಳು ಮಾಡುವ ಕೆಲಸ ಆಗುತ್ತಿದೆ. ಯಾರೇ ಬಾಂಬ್ ಹಾಕಿದ್ರೂ, ಸರ್ಕಾರ ಅವರ ವಿರುದ್ಧ ಕ್ರಮ ತೆಗೆದುಕೊಂಡಿದೆ. ಅಶೋಕ್ ಅವರು ಬಾಂಬ್ ಬೆಂಗಳೂರು ಅಂದಿದ್ದು ಸರಿನಾ ಎಂದು ಪ್ರಶ್ನಿಸಿದರು.

ಬೆಂಗಳೂರನ್ನು ಗಾರ್ಬೇಜ್ ಸಿಟಿ ಮಾಡಿದ್ದು ಬಿಜೆಪಿ. 40% ಮಾಡಿದ್ದು ಇದೇ ಬಿಜೆಪಿ. ಹಸಿರು ಬೆಂಗಳೂರು ಹಾಳು ಮಾಡಿದ ಕೀರ್ತಿ ಬಿಜೆಪಿಗೆ ಸಲ್ಲುತ್ತದೆ. ಈಗ ಇಂತಹ ಕೇವಲ ಮಾತುಗಳನ್ನಾಡೋದು ಬಿಟ್ಟು ಅಭಿವೃದ್ಧಿ ಬಗ್ಗೆ ಮಾತಾಡಿ. ವಿಪಕ್ಷ ನಾಯಕ ಅಶೋಕ್ ಕೇಂದ್ರ, ಬಿಜೆಪಿ 10 ವರ್ಷಗಳಲ್ಲಿ ಬೆಂಗಳೂರಿಗೆ ಎಷ್ಟು ಅನುದಾನ ಕೊಟ್ಟಿದೆ ಅದರ ಮಾಹಿತಿ ಮೊದಲು ಬಿಡುಗಡೆ ಮಾಡಿ. ಆಮೇಲೆ ಅಶೋಕ್ ಮಾತಿಗೆ ಉತ್ತರ ಕೊಡುತ್ತೇನೆ ಎಂದರು.

ಭದ್ರತೆ, ಸಾರ್ವಜನಿಕರ ರಕ್ಷಣೆ ನಮಗೂ ಮುಖ್ಯನೇ. ಈ ಕೇಸ್ ಅನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ಕೇಂದ್ರದ ಜವಾಬ್ದಾರಿಯೂ ಇದರಲ್ಲಿ ಇದೆ. ಎರಡೂ ಸರ್ಕಾರಗಳು ಒಟ್ಟಾಗಿ ಈ ಪ್ರಕರಣದಲ್ಲಿ ಕೆಲಸ ಮಾಡುತ್ತಿವೆ. ಬೆಂಗಳೂರಿಗೆ 10 ವರ್ಷಗಳಲ್ಲಿ ಮೋದಿ ಸರ್ಕಾರ ಏನು ಅನುದಾನ ಕೊಟ್ಟಿದೆ ಎಂದು ಅಶೋಕ್ ಮಹಾರಾಜರು ಬಿಡುಗಡೆ ಮಾಡಬೇಕು. ಬೆಂಗಳೂರಿಗೆ ಕೇಂದ್ರ ಸರ್ಕಾರ ಎಷ್ಟು ಅನುದಾನ ಕೊಟ್ಟಿದೆ ಎಂದು ವಿತ್ತ ಸಚಿವೆ ಬಳಿ ಆದರೂ ಮಾಹಿತಿ ಪಡೆಯಲಿ. ಪ್ರಧಾನಿ ಕಚೇರಿಯಿಂದಾದರೂ ಮಾಹಿತಿ ತಿಳಿದುಕೊಂಡು ಹೇಳಲಿ. ಆಮೇಲೆ ಉಳಿದಿದ್ದಕ್ಕೆ ನಾನು ಉತ್ತರ ಕೊಡುತ್ತೇನೆ ಎಂದು ಕಿಡಿಕಾರಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com